22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 80 | ನವದೆಹಲಿ | ಬೆಲೆ ₹ 10 | ಸೆಪ್ಟೆಂಬರ್ 20 2024 ಶುಕ್ರವಾರ









## ಕರ್ನಾಟಕದಲ್ಲಿ ಗೃಹಜ್ಯೋತಿ ಯಶಸ್ವಿಗೊಳಿಸಿದ ‘ಆ್ಯಕ್ಷನ್ ಹೀರೋ’ ಹಿರಿಯ ಐಎಎಸ್ ಅಧಿಕಾರಿ

# ಗೌರವ್ ಗುಪ್ತಾ


ಹೌದು ಕರ್ನಾಟಕ ಸರ್ಕಾರದ ಗ್ಯಾರಂಟಿಯೋಜನೆ ಗಳಲ್ಲೊಂದಾದ ಮತ್ತು ಎಲ್ಲ ವರ್ಗದ ಜನರಿಗೆ ತಲುಪುವ ಯೋಜನೆ ‘ಗೃಹಜ್ಯೋತಿ’ ಈ ಯೋಜನೆ ಜಾರಿಗೆ ತರುವುದು ಅತ್ಯಂತ ಕಷ್ಟದ ಕೆಲಸವಾಗಿತ್ತು. ಆದರೆ ಹಿರಿಯ ಐಎಎಸ್ ಅಧಿಕಾರಿ ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ‘ಆ್ಯಕ್ಷನ್ ಹೀರೋ’ ಎಂದೇ ಖ್ಯಾತಿ ಪಡೆದಿರುವ ಗೌರವ್ ಗುಪ್ತಾ ಅವರು ಇದನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಈಗ ಒಂದು ವರ್ಷ ಪೂರೈಸಿದೆ. ಬಹಳ ಯಶಸ್ವಿಯಾಗಿ ಕೂಡ ಯೋಜನೆ ಜಾರಿಯಾಗಿದೆ. ಆಗಸ್ಟ್ ಕೊನೆಯವರೆಗೆ 1.70 ಕೋಟಿ ಮನೆಗಳು ಗೃಹಜ್ಯೋತಿ ಯೋಜನೆಯ ಲಾಭ ಪಡೆದಿವೆ. ಇಂಧನ ಇಲಾಖೆಗೆ ಸಂಬಂಧಿಸಿದಂತೆ ಗೃಹಜ್ಯೋತಿ ಯೋಜನೆ ಇಡೀ ಜಗತ್ತಿನಲ್ಲೇ ಅತ್ಯಂತ ದೊಡ್ಡ ಯೋಜನೆಯಾಗಿದೆ. ಈ ತರಹದ ನಿರ್ದಿಷ್ಟ ರಿಯಾಯಿತಿ ಯೋಜನೆ ಎಲ್ಲೂ ಇಲ್ಲ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮಾರ್ಗದರ್ಶನ ಮತ್ತು ಇಂಧನ ಸಚಿವ ಕೆ.ಜೆ. ಜಾರ್ಜ್ ಅವರ ಮೇಲ್ವಿಚಾರಣೆಯಲ್ಲಿ ಗೃಹಜ್ಯೋತಿ ಯೋಜನೆ ಯಶಸ್ವಿಯಾಗಿ ರೂಪುಗೊಂಡು ಜಾರಿಯಾಗಿದೆ. ಇದರಲ್ಲಿ ಇಂಧನ ಇಲಾಖೆಯ ಎಲ್ಲಾ ಅಧಿಕಾರಿಗಳ ಶ್ರಮವೂ ಇದೆ. ಇದು ಒಂದು ರೀತಿಯಲ್ಲಿ ಯಾವುದೇ ಸಮಸ್ಯೆ ಇಲ್ಲದಂತೆ ಯೋಜನೆ ಯಶಸ್ವಿಯಾಗಿ ಜಾರಿಗೊಳಿಸುವಲ್ಲಿ ಗೌರವ್ ಗುಪ್ತಾ ಅವರು ಮಹತ್ವದ ಪಾತ್ರ ವಹಿಸಿದ್ದಾರೆ. ರಾಜ್ಯದ 1.70 ಕೋಟಿಗೂ ಹೆಚ್ಚಿನ ವಿದ್ಯುತ್ ಗ್ರಾಹಕರಿಗೆ ತಲುಪಿಸಿ, 8669.32 ಕೋಟಿ ರೂ ಸಹಾಯಧನ ತಲುಪಿಸುವ ಯಶಸ್ವಿ ಅನುಷ್ಠಾನಗೊಳಿಸಿದ ಕೀರ್ತಿ ಇವರದು.




ಸಂಕಷ್ಟದಲ್ಲಿರುವ ಜನರಿಗೆ ಸಹಾಯ ಮಾಡುವುದು ಸರ್ಕಾರದ ಧ್ಯೇಯವಾಗಿತ್ತು. ಯಾವ್ಯಾವ ರೀತಿಯಲ್ಲಿ ಕಷ್ಟದಲ್ಲಿರುವ ಜನರಿಗೆ ನೆರವು ನೀಡಬಹುದು ಎಂದು ಯೋಚಿಸಿ ‘ಗೃಹಜ್ಯೋತಿ’ ಯೋಜನೆಯನ್ನು ಜಾರಿ ಮಾಡಲಾಯಿತು.

ಗೃಹಜ್ಯೋತಿ ಯೋಜನೆ ಜಾರಿಮಾಡುವ ಮೊದಲು ಬಹಳ ಚಿಂತನೆ ನಡೆಸಲಾಗಿತ್ತು. ಮೊದಲಿಗೆ ಶೇಕಡಾ 90ಕ್ಕಿಂತಲೂ ಹೆಚ್ಚು ಜನ 200ಕ್ಕೂ ಹೆಚ್ಚು ಯುನಿಟ್ ವಿದ್ಯುತ್ ಉಪಯೋಗ ಮಾಡುತ್ತಿದ್ದಾರೆ ಎನ್ನುವ ಅಂದಾಜು ಇತ್ತು. ಇದರ ಜೊತೆಗೆ ಇಷ್ಟು ದೊಡ್ಡ ಸಂಖ್ಯೆಯ ಜನರಿಗೆ ಉಚಿತವಾಗಿ ವಿದ್ಯುತ್ ಕೊಡಲು ಸಾಧ್ಯವೇ ಎನ್ನುವ ಪ್ರಶ್ನೆಯಿತ್ತು. ಸರ್ಕಾರಕ್ಕೆ ಆರ್ಥಿಕ ಬಿಕ್ಕಟ್ಟು ಇದ್ದುದರಿಂದ ಅದರ ನಡುವೆಯೇ ಹೇಗೆ ಉಚಿತ ವಿದ್ಯುತ್ ನೀಡಬಹುದು ಎನ್ನುವ ಸವಾಲಿತ್ತು. ಅಲ್ಲದೆ ಜನರಿಗೆ ಉಚಿತವಾಗಿ ವಿದ್ಯುತ್ ನೀಡಲು ಅನುಸರಿಸಲು ಬೇಕಾದ ವ್ಯವಸ್ಥೆ ಕಂಡುಕೊಳ್ಳುವುದು ಹೇಗೆ ಎಂಬ ತಾಂತ್ರಿಕ ಅಂಶವೂ ಇತ್ತು.



ಇವೆಲ್ಲವನ್ನೂ ಗಮನದಲ್ಲಿ ಇಟ್ಟುಕೊಂಡು, ಒಂದೊಮ್ಮೆ ಗೃಹಜ್ಯೋತಿ ಯೋಜನೆ ಜಾರಿಯಾದ ಬಳಿಕ ಹೆಚ್ಚಿನ ಪ್ರಮಾಣದಲ್ಲಿ ವಿದ್ಯುತ್ ಬಳಕೆಯಾದರೆ ಏನು ಮಾಡಬೇಕು ಎನ್ನುವುದನ್ನೂ ಯೋಚಿಸಿ ಯೋಜನೆಯನ್ನು ರೂಪಿಸಲಾಯಿತು. ಹಿಂದೆ ಒಬ್ಬ ವ್ಯಕ್ತಿ/ಕುಟುಂಬ ಬಳಸುತ್ತಿದ್ದ ವಿದ್ಯುತ್ ಪ್ರಮಾಣವನ್ನು ಆಧಾರವಾಗಿಟ್ಟುಕೊಂಡು ಅವರು ಉಚಿತವಾಗಿ ವಿದ್ಯುತ್ ಪಡೆಯಲು ಅರ್ಹರೇ? ಇಲ್ಲವೇ ಎಂಬುದನ್ನು ನಿರ್ಧರಿಸುವ ತೀರ್ಮಾನಕ್ಕೆ ಬರುವಂತೆ ಗೌರವ್ ಗುಪ್ತಾ ಅವರು ಯೋಜನೆ ರೂಪಿಸಿದರು.

ಇಂಧನ ಇಲಾಖೆಯ ಈ ತೀರ್ಮಾನವನ್ನು ಸರ್ಕಾರಕ್ಕೆ ಕಳುಹಿಸಿಕೊಡಲಾಯಿತು. ಅಂತಿಮವಾಗಿ ಸರ್ಕಾರದ ಮಟ್ಟದಲ್ಲಿ ಮತ್ತು ಸಂಪುಟ ಸಭೆಯಲ್ಲಿ ಇದರ ತೀರ್ಮಾನವಾಯಿತು. ಸಂಪುಟ ಸಭೆಯಲ್ಲಿ ಗೃಹಜ್ಯೋತಿ ಯೋಜನೆಗೆ ಅನುಮೋದನೆ ದೊರೆತ ಬಳಿಕ ಯೋಜನೆಯ ಫಲಾನುಭವಿಗಳಾಗಲು ಏನೇನು ಅರ್ಹತೆ ಇರಬೇಕು? ಉಚಿತವಾಗಿ ವಿದ್ಯುತ್ ನೀಡಿದರೂ ಜನರಿಗೆ ಕೊಡುವ ಬಿಲ್ ಹೇಗಿರಬೇಕು? ಬಿಲ್ಲಿಂಗ್ ಸಾಫ್ಟ್‌ವೇರ್ ಹೇಗಿರಬೇಕು? ಬಿಲ್ ಸೆಲ್ಫ್ ಎಕ್ಸ್‌ಪ್ಲೇನೆಟರಿ ರೀತಿ ಇರಬೇಕು. ಅಂದರೆ ಜನರಿಗೆ ಬಿಲ್ ನೋಡಿದ ಕೂಡಲೇ ನಾವು ಎಷ್ಟು ವಿದ್ಯುತ್ ಬಳಸುತ್ತಿದ್ದೇವೆ? ಎಷ್ಟು ಬಿಲ್ ಬರುತ್ತಿದೆ? ಸರ್ಕಾರ ಎಷ್ಟು ಹಣವನ್ನು ಸಬ್ಸಿಡಿ ರೂಪದಲ್ಲಿ ಕೊಡುತ್ತಿದೆ ಎಂಬ ಅಂಶಗಳು ನಿಖರವಾಗಿ ಜನರಿಗೆ ಗೊತ್ತಾಗಬೇಕು ಎನ್ನುವ ರೀತಿಯ ಬಿಲ್ಲಿಂಗ್ ಸಿಸ್ಟಮ್ ಅನ್ನು ಮಾಡಿ ಜಾರಿಗೆ ತಂದ ಕೀರ್ತಿ ಗೌರವ್ ಗುಪ್ತಾ ಅವರಿಗೆ ಸಲ್ಲುತ್ತದೆ.

ಗೃಹಜ್ಯೋತಿ ಯೋಜನೆಗೆ ನೀಡುತ್ತಿರುವ ಸಬ್ಸಿಡಿ ಹಣದ ಭಾರವನ್ನು ಸಂಪೂರ್ಣವಾಗಿ ರಾಜ್ಯ ಸರ್ಕಾರವೇ ಭರಿಸುತ್ತಿದೆ. 9 ಅಥವಾ 12 ಸಾವಿರ ಕೋಟಿ ಹಣವನ್ನು ಭರಿಸುವುದು ರಾಜಕೀಯ ಇಚ್ಛಾಶಕ್ತಿಯ ಪ್ರಶ್ನೆ ಕೂಡ ಆಗಿರುತ್ತದೆ. ಆದರೆ ತಾಂತ್ರಿಕವಾಗಿ ಯೋಜನೆಗೆ ಯಾವುದೇ ರೀತಿಯ ತೊಡಕಿಲ್ಲದೇ ನಡೆಯುತ್ತಿದೆ. ಆರ್ಥಿಕವಾಗಿ ಬೀಳುವ ಹೊರೆಯ ಬಗ್ಗೆ ಸರ್ಕಾರದ ಮಟ್ಟದಲ್ಲಿ ನಿರ್ಧಾರವಾಗಿದ್ದು, ಇದರ ಬದಲು ಬೇರೆ ಜನಕಲ್ಯಾಣ ಯೋಜನೆ ಜಾರಿಮಾಡುವುದು ರಾಜ್ಯ ಸರ್ಕಾರದ ವಿವೇಚನೆಯಿಂದ ಜಾರಿಗೊಳಿಸುತ್ತಿದೆ.

ಗೃಹಜ್ಯೋತಿ ಯೋಜನೆಯನ್ನು ಈಗಾಗಲೇ ಸರಳೀಕರಣಗೊಳಿಸಲಾಗಿದೆ.

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಸೆಪ್ಟೆಂಬರ್ 20 , 2024, ಶುಕ್ರವಾರ

## ಒಳಪುಟಗಳಲ್ಲಿ

ಕಳಸಾ ಬಂಡೂರಿ ಯೋಜನೆಗೆ ಅನುಮತಿ: ಪ್ರಧಾನಿಗೆ ಸಿಎಂ ಪತ್ರ - ಪು.4

ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ, ಸರ್ಕಾರದ ಗೊಡ್ಡು ಬೆದರಿಕೆಗೆ ಮಣಿಯುವುದಿಲ್ಲ: ಅಶೋಕ್ ಎಚ್ಚರಿಕೆ - ಪು.5

ಬೆಂಗಳೂರು-ಧಾರವಾಡ ವಂದೇ ಭಾರತ್ - ರೈಲನ್ನು ಬೆಳಗಾವಿಗೆ ವಿಸ್ತರಿಸಲು ಕೇಂದ್ರಕ್ಕೆ ಶೆಟ್ಟರ್ ಮನವಿ - ಪು.6

# ಜಮ್ಮು-ಕಾಶ್ಮೀರದ ರಾಜ್ಯ ಸ್ಥಾನಮಾನ ಮರುಸ್ಥಾಪನೆ: ಮೋದಿ

**ನವದೆಹಲಿ, ಸೆ.19: ಜಮ್ಮು ಕಾಶ್ಮೀರದ ಯುವಕರು ಪ್ರಜಾಪ್ರಭುತ್ವದಲ್ಲಿ ಮತ್ತೆ ವಿಶ್ವಾಸವನ್ನು ಕಂಡುಕೊಂಡಿದ್ದು, ತಮ್ಮ ಮತವು ಬದಲಾವಣೆಯನ್ನು ತರಬಹುದು ಎಂದು ಭಾವಿಸುತ್ತಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಹೇಳಿದರು. ಇದು ಅವರ ಸಬಲೀಕರಣದ ಮೊದಲ ಹೆಜ್ಜೆ ಎಂದು ಅವರು ತಿಳಿಸಿದರು.**





ಶ್ರೀನಗರದ ಶೇರ್-ಎ-ಕಾಶ್ಮೀರ ಸ್ಟೇಡಿಯಂನಲ್ಲಿ ಬಿಜೆಪಿ ಅಭ್ಯರ್ಥಿಗಳ ಪರ ಚುನಾವಣಾ ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಮೋದಿ, ಜಮ್ಮು ಕಾಶ್ಮೀರದ ರಾಜ್ಯ ಸ್ಥಾನಮಾನವನ್ನು ಮರುಸ್ಥಾಪಿಸುವ ಭರವಸೆಯನ್ನು ಬಿಜೆಪಿ ಈಡೇರಿಸುತ್ತದೆ ಎಂದು ಭರವಸೆ ನೀಡಿದರು.

ನನ್ನ ಜಮ್ಮು ಕಾಶ್ಮೀರದ ಯುವಕರು ಇನ್ನು ಅಸಹಾಯಕರಲ್ಲ. ಅವರು ಮೋದಿ ಸರ್ಕಾರದ ಅಡಿಯಲ್ಲಿ ಅಧಿಕಾರ ಪಡೆಯುತ್ತಿದ್ದಾರೆ. ಜಮ್ಮು ಕಾಶ್ಮೀರ ಬಿಜೆಪಿಯು ಯುವಕರ ಉದ್ಯೋಗಕ್ಕಾಗಿ ಬೃಹತ್ ಕಾರ್ಯಕ್ರಮಗಳನ್ನು ಮಾಡಿರುವುದು ನನಗೆ ಸಂತೋಷವಾಗಿದೆ. ಅವರಿಗೆ ಉದ್ಯೋಗ ನೀಡುವ ಕೆಲಸವನ್ನು ಬಿಜೆಪಿ ಮಾಡಲಿದೆ ಎಂದು ಮೋದಿ ಹೇಳಿದರು. ಕಾಂಗ್ರೆಸ್, ನ್ಯಾಷನಲ್ ಕಾನ್ಫರೆನ್ಸ್ ಮತ್ತು ಪಿಡಿಪಿ ವಿರುದ್ಧ ವಾಗ್ದಾಳಿ ನಡೆಸಿದ ಮೋದಿ, ಈ ಮೂರು ಪಕ್ಷಗಳು ತಮ್ಮ ಕುಟುಂಬಗಳ ಲಾಭಕ್ಕಾಗಿ ಪ್ರಜಾಪ್ರಭುತ್ವ ಮತ್ತು ಕಾಶ್ಮೀರವನ್ನು ತುಳಿದು ಹಾಕಿವೆ ಎಂದು ಹೇಳಿದರು.

1980ರ ದಶಕದಲ್ಲಿ ಅವರು ಮಾಡಿದ್ದೇನು ಎಂಬುದು ನಿಮಗೆ ನೆನಪಿದೆಯೇ ಅವರು ಜಮ್ಮು ಕಾಶ್ಮೀರದ ರಾಜಕೀಯವನ್ನು ತಮ್ಮ ಸ್ವಂತ ದುರಾಸೆಗಾಗಿ ಬಳಸಿಕೊಂಡರು. ಅವರು ತಮ್ಮ ಕುಟುಂಬವನ್ನು ಹೊರತುಪಡಿಸಿ ಯಾರೂ ಮುಂದೆ ಬರಲು ಬಯಸಲಿಲ್ಲ ಇಲ್ಲದಿದ್ದರೆ, ಅವರು ಪಂಚಾಯತ್, ಡಿಡಿಸಿ ಮತ್ತು ಬಿಡಿಸಿ ಚುನಾವಣೆಗಳನ್ನು ಏಕೆ ನಿಲ್ಲಿಸಿದರು. ತಮ್ಮ ಸ್ವಾರ್ಥದ ಫಲವಾಗಿ ಈ ಮೂರು ಕುಟುಂಬಗಳು ಮಾತ್ರ ಅಧಿಕಾರಕ್ಕೆ ಬರುತ್ತವೆ ಎಂದು ಭಾವಿಸಿದ ಯುವಕರು ಪ್ರಜಾಪ್ರಭುತ್ವದ ಮೇಲಿನ ನಂಬಿಕೆಯನ್ನು ಕಳೆದುಕೊಳ್ಳುತ್ತಾರೆ ಎಂದು ಹೇಳಿದರು.

ಕಳೆದ ಐದು ವರ್ಷಗಳಲ್ಲಿ ಜಮ್ಮು ಕಾಶ್ಮೀರದ ಪರಿಸ್ಥಿತಿಯು ಸಾಕಷ್ಟು ಬದಲಾಗಿದೆ. ಇದು ಪ್ರಜಾಪ್ರಭುತ್ವ ಪ್ರಕ್ರಿಯೆಯಲ್ಲಿ ಯುವಕರ ವಿಶ್ವಾಸವನ್ನು ಪುನಃಸ್ಥಾಪಿಸಿದೆ ಎಂದು ಪ್ರಧಾನಿ ಹೇಳಿದ್ದಾರೆ. ಮೊದಲು ಚುನಾವಣೆ ನಡೆದ ಸಂದರ್ಭಗಳನ್ನು ನೆನಪಿಸಿಕೊಳ್ಳಿ. ಸಂಜೆ 6 ಗಂಟೆಗೆ ಪ್ರಚಾರಗಳು ನಿಲ್ಲುತ್ತವೆ. ಮನೆ-ಮನೆ ಪ್ರಚಾರ ಅಸಾಧ್ಯವಾಗಿತ್ತು. ಕಾಂಗ್ರೆಸ್, ಎನ್‌ಸಿ ಮತ್ತು ಪಿಡಿಪಿ ಈ ಮೂರು ಕುಟುಂಬಗಳು ಇದರಿಂದ ಸಂತೋಷವಾಗಿದ್ದವು ಎಂದು ಅವರು ಹೇಳಿದರು.

ಇಂದು, ಪ್ರಚಾರವು ತಡರಾತ್ರಿಯಲ್ಲಿ ನಡೆಯುತ್ತದೆ. ಈಗ, ಜನರು ಪ್ರಜಾಪ್ರಭುತ್ವವನ್ನು ಆಚರಿಸುತ್ತಿದ್ದಾರೆ. ಯುವಕರು ಮತ್ತೆ ಪ್ರಜಾಪ್ರಭುತ್ವದಲ್ಲಿ ವಿಶ್ವಾಸವನ್ನು ಕಂಡುಕೊಂಡಿದ್ದಾರೆ, ಅವರು ತಮ್ಮ ಮತ, ತಮ್ಮ ಪ್ರಜಾಪ್ರಭುತ್ವದ ಹಕ್ಕು, ಬದಲಾವಣೆಯನ್ನು ತರಬಹುದು ಎಂದು ಭಾವಿಸುತ್ತಾರೆ. ಇದು ಸಬಲೀಕರಣದ ಮೊದಲ ಹೆಜ್ಜೆಯಾಗಿದೆ. ಅವರು ಹೇಳಿದ್ದರು.

## ಕಾಂಗ್ರೆಸ್ - ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿಯನ್ನು ಪಾಕಿಸ್ತಾನದಲ್ಲಿ ಶ್ಲಾಘಿಸಲಾಗುತ್ತಿದೆ

# ಕಾತ್ರಾ ಸಮಾವೇಶದಲ್ಲಿ ಪ್ರಧಾನಿ ಮೋದಿ ವ್ಯಂಗ್ಯ



**ಶ್ರೀನಗರ, ಸೆ.19:** ಜಮ್ಮು ಮತ್ತು ಕಾಶ್ಮೀರ ವಿಧಾನಸಭೆ ಚುನಾವಣೆಯಲ್ಲಿ ಹೊಂದಾಣಿಕ ಮಾಡಿಕೊಂಡ ಕಾಂಗ್ರೆಸ್-ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿಕೂಟವನ್ನು ಪಾಕಿಸ್ತಾನದಲ್ಲಿ ಶ್ಲಾಘಿಸಲಾಗುತ್ತಿದೆ, ಅವರ ಪ್ರಣಾಳಿಕೆಯಿಂದ ಪಾಕಿಸ್ತಾನಕ್ಕೆ ತುಂಬಾ ಸಂತೋಷವಾಗಿದೆ ಮತ್ತು ಬಹಿರಂಗವಾಗಿ ತನ್ನ ಬೆಂಬಲವನ್ನು ನೀಡಿದೆ ಎಂದು ಪ್ರಧಾನಿ ನರೇಂದ್ರ ಮೋದಿ ವ್ಯಂಗ್ಯ ಮಾಡಿದ್ದಾರೆ. ಜಮ್ಮು ಕಾಶ್ಮೀರದಲ್ಲಿ ಎರಡನೇ ಹಂತದ ಮತದಾನಕ್ಕಾಗಿ ಕತ್ರಾದಲ್ಲಿ ಆಯೋಜಿಸಿದ್ದ ಪ್ರಚಾರ ಸಭೆಯಲ್ಲಿ ಮಾತನಾಡಿದ ಅವರು, ಪಾಕಿಸ್ತಾನದ ರಕ್ಷಣಾ ಸಚಿವರು ಕಾಂಗ್ರೆಸ್-ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿಯನ್ನು ಬಹಿರಂಗವಾಗಿ ಬೆಂಬಲಿಸಿದ್ದಾರೆ. ಅವರ ಅಜೆಂಡಾವು ಪಾಕಿಸ್ತಾನದಂತೆಯೇ ಇದೆ ಎಂದು ಅವರು ಹೇಳುತ್ತಾರೆ. ಕಾಂಗ್ರೆಸ್ ಮತ್ತು ನ್ಯಾಷನಲ್ ಕಾನ್ಫರೆನ್ಸ್ ಇಲ್ಲಿ ಜಮ್ಮು ಮತ್ತು ಕಾಶ್ಮೀರದಲ್ಲಿ ಪಾಕಿಸ್ತಾನದ ಕಾರ್ಯಸೂಚಿಯನ್ನು ಜಾರಿಗೆ ತರಲು ಬಯಸುತ್ತವೆ ಎಂದು ಪ್ರಧಾನಿ ಮೋದಿ ಹೇಳಿದರು.

ಜಮ್ಮು ಮತ್ತು ಕಾಶ್ಮೀರದ ಜನರು ಭಾರತದ ಪ್ರಜಾಪ್ರಭುತ್ವವನ್ನು ಹೇಗೆ ಬಲಪಡಿಸುತ್ತಿದ್ದಾರೆ ಎಂಬುದನ್ನು ಇಂದು ಜಗತ್ತು ನೋಡುತ್ತಿದೆ, ಇದಕ್ಕಾಗಿ ನಾನು ಜಮ್ಮು ಮತ್ತು ಕಾಶ್ಮೀರದ ಜನರನ್ನು ಅಭಿನಂದಿಸುತ್ತೇನೆ. ಕೆಲವು ದಿನಗಳ ಹಿಂದೆ, ನಾನು ಜಮ್ಮು ಮತ್ತು ಕಾಶ್ಮೀರಕ್ಕೆ ಬಂದಾಗ ಜಮ್ಮು-ಕಾಶ್ಮೀರ ನಾಶಕ್ಕೆ ಮೂರು ಕುಟುಂಬಗಳು ಕಾರಣವೆಂದು ನಾನು ಹೇಳಿದ್ದೆ. ಅಂದಿನಿಂದ ಈ ಜನರು ಭಯಭೀತರಾಗಿದ್ದಾರೆ. ದೆಹಲಿಯಿಂದ ಜಮ್ಮು ಮತ್ತು ಕಾಶ್ಮೀರದವರೆಗೆ ಈ ಮೂರು ಕುಟುಂಬಗಳು ಯಾರಾದರೂ ಅವರನ್ನು ಹೇಗೆ ಪ್ರಶ್ನಿಸಬಹುದು ಎಂದು ಯೋಚಿಸುತ್ತಾರೆ, ಯಾವುದೇ ವಿಧಾನದಿಂದ ಅಧಿಕಾರವನ್ನು ಹಿಡಿಯುವುದು ನಂತರ ನಿಮ್ಮೆಲ್ಲರನ್ನು ಲೂಟಿ ಮಾಡುವುದು ತಮ್ಮ ಜನ್ಮಸಿದ್ಧ ಹಕ್ಕು ಎಂದು ಮೂರು ಕುಟುಂಬಗಳು ಭಾವಿಸುತ್ತವೆ. ಜಮ್ಮು ಮತ್ತು ಕಾಶ್ಮೀರದ ಜನರ ನ್ಯಾಯಸಮ್ಮತತೆಯನ್ನು ಕಸಿದುಕೊಳ್ಳುವುದು ಅವರ ರಾಜಕೀಯ ಅಜೆಂಡಾವಾಗಿದೆ ಅವರು ಜಮ್ಮು ಮತ್ತು ಕಾಶ್ಮೀರಕ್ಕೆ ಕೇವಲ ಭಯ ಮತ್ತು ಅರಾಜಕತೆಯನ್ನು ನೀಡಿದ್ದಾರೆ, ಇನ್ಮುಂದೆ ಜಮ್ಮು ಮತ್ತು ಕಾಶ್ಮೀರವು ಈ ಮೂರು ಕುಟುಂಬಗಳ ಹಿಡಿತದಲ್ಲಿರುವುದಿಲ್ಲ, ಅವರು ಪ್ರಗತಿಗೆ ಅವಕಾಶ ನೀಡುವುದಿಲ್ಲ ಯುವಕರು ಅವರಿಂದ ಹೊರಬನ್ನಿ ಎಂದು ಕರೆ ನೀಡಿದರು. ಐದು ವರ್ಷಗಳಲ್ಲಿ ಸಾಕಷ್ಟು ಅಭಿವೃದ್ಧಿ ಕೆಲಸ ಮಾಡಿದೆ, 15,000 ಶಾಲೆಗಳಲ್ಲಿ ಪೂರ್ವ ಪ್ರಾಥಮಿಕ ತರಗತಿಗಳನ್ನು ಪ್ರಾರಂಭಿಸಿದ್ದೇವೆ, ಹೆಚ್ಚುವರಿಯಾಗಿ 250 ಶಾಲೆಗಳನ್ನು PM SHRI ಶಾಲೆಗಳಾಗಿ ಮೇಲ್ದರ್ಜೆಗೇರಿಸಲಾಗಿದೆ. ಈ 5 ವರ್ಷಗಳಲ್ಲಿ 1,100 ಹೊಸ ನರ್ಸಿಂಗ್ ಸೀಟುಗಳನ್ನು ಸೇರಿಸಲಾಗಿದೆ. ಮತ್ತು 1,600ಕ್ಕೂ ಹೆಚ್ಚು ವೈದ್ಯಕೀಯ ಸೀಟುಗಳನ್ನು ಜಮ್ಮು ಮತ್ತು ಕಾಶ್ಮೀರದಲ್ಲಿ ಸೇರಿಸಲಾಗಿದೆ. ವಿದ್ಯಾರ್ಥಿಗಳು ಮೋದಿ ಸರ್ಕಾರದಲ್ಲಿ ಬಲಶಾಲಿಯಾಗುತ್ತಿದ್ದಾರೆ ಎಂದು ನಾನು ಸಂತೋಷಪಡುತ್ತೇನೆ, ಜಮ್ಮು ಮತ್ತು ಕಾಶ್ಮೀರ ಬಿಜೆಪಿಯು ಯುವಕರ ಉದ್ಯೋಗಕ್ಕಾಗಿ ಯಾವುದೇ ಮೋಸವಿಲ್ಲದೆ ಸರ್ಕಾರಿ ಉದ್ಯೋಗಗಳನ್ನು ಪಡೆಯುತ್ತಾರೆ ಎಂದು ಖಚಿತಪಡಿಸುತ್ತೇನೆ ಎಂದರು.

## 10ನೇ ಕಾಮನ್ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನದಲ್ಲಿ ಹೊರಟ್ಟಿ ಭಾಗಿ



**ಬೆಂಗಳೂರು, ಸೆ.19:** ಎರಡು ದಿನಗಳ ಕಾಲ ರಾಷ್ಟ್ರ ರಾಜಧಾನಿ ನವದೆಹಲಿಯಲ್ಲಿ 10ನೇ ಕಾಮನ್ವೆಲ್ತ್ ಸಂಸದೀಯ ಸಂಘದ ಭಾರತ ವಲಯದ ಸಮ್ಮೇಳನ ಜರುಗಲಿದ್ದು, ಕರ್ನಾಟಕ ರಾಜ್ಯದ ಪ್ರತಿನಿಧಿಯಾಗಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಸಮ್ಮೇಳನದಲ್ಲಿ ಪಾಲ್ಗೊಳ್ಳಲ್ಲಿದ್ದಾರೆ. ಸಮ್ಮೇಳನದಲ್ಲಿ ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು "ಸುಸ್ಥಿರ ಹಾಗೂ ಸಮಗ್ರ ಅಭಿವೃದ್ಧಿ ಸಾಧಿಸುವಲ್ಲಿ ಶಾಸನ ಸಭೆಗಳ ಪಾತ್ರ ಎಂಬ ವಿಷಯ ಕುರಿತು ವಿಚಾರ ಮಂಡಿಸಲಿದ್ದು, ತಮ್ಮ ನಿರಂತರ 45 ವರ್ಷಗಳ ಸಂಸದೀಯ ಅನುಭವಗಳನ್ನು ಹಂಚಿಕೊಳ್ಳಲಿದ್ದಾರೆ.

ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಸೆಪ್ಟೆಂಬರ್ 23 ರಂದು ಸಮ್ಮೇಳನವನ್ನು ಉದ್ಘಾಟಿಸಲಿದ್ದು, ದೇಶದ ಎಲ್ಲಾ ರಾಜ್ಯಗಳ ವಿಧಾನ ಸಭೆಯ ಸಭಾಧ್ಯಕ್ಷರು ಉಪಸಭಾಧ್ಯಕ್ಷರು ಹಾಗೂ ವಿಧಾನ ಪರಿಷತ್ತಿನ ಸಭಾಪತಿ ಹಾಗೂ ಉಪಸಭಾಪತಿಗಳು ಭಾಗವಹಿಸಲಿದ್ದಾರೆ ಎಂದು ಸಭಾಪತಿಯವರ ವಿಶೇಷ ಕರ್ತವ್ಯಾಧಿಕಾರಿ ಡಾ. ಮಹೇಶ ವಾಳ್ವೇಕರ್ ಅವರು ತಿಳಿಸಿದ್ದಾರೆ.

## ದೆಹಲಿ ಸಿಎಂ ಆತಿಶಿ ನಾಳೆ ಪ್ರಮಾಣವಚನ



**ನವದೆಹಲಿ, ಸೆ.19:** ನಿಯೋಜಿತ ಮುಖ್ಯಮಂತ್ರಿ ಆತಿಶಿ ಸಿಂಗ್ ಶನಿವಾರ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಆಮ್ ಆದ್ಮಿ ಪಕ್ಷದ ಮೂಲಗಳು ಹೇಳಿವೆ. ಈ ಮೊದಲು ಸೆಪ್ಟೆಂಬರ್ 26-27ರ ವಿಶೇಷ ಅಧಿವೇಶನ ವೇಳೆ ಪ್ರಮಾಣ ವಚನ ಸ್ವೀಕರಸಲು ಚಿಂತಿಸಿತ್ತು, ಲೆಫ್ಟಿನೆಂಟ್ ಗವರ್ನರ್ ಸಲಹೆ ಮೇರೆಗೆ ಶನಿವಾರ ಪ್ರಮಾಣ ವಚನ ಸ್ವೀಕರಿಸಲು ನಿರ್ಧರಿಸಿದೆ.

ಎಎಪಿ ಆರಂಭದಲ್ಲಿ ಆತಿಶಿ ಮಾತ್ರ ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಬೇಕೆಂದು ಯೋಜಿಸಿತ್ತು, ಬಳಿಕ ಮಂತ್ರಿಮಂಡಲದೊಂದಿಗೆ ಪ್ರಮಾಣವಚನ ಸ್ವೀಕರಿಸಲು ನಿರ್ಧರಿಸಲಾಗಿದೆ. ಹಿಂದಿನ ಅರವಿಂದ್ ಕೇಜ್ರಿವಾಲ್ ಸರ್ಕಾರದಲ್ಲಿ ಸಚಿವರಾಗಿದ್ದ ಎಎಪಿ ನಾಯಕರಾದ ಗೋಪಾಲ್‌ರಾಯ್, ಕೈಲಾಶ್ ಗೆಹ್ಲೋಟ್, ಸೌರಭ್ ಭಾರದ್ವಾಜ್ ಮತ್ತು ಇಮ್ರಾನ್ ಹುಸೇನ್ ಅವರು ಸಚಿವರಾಗಿ ಮುಂದುವರಿಯಲಿದ್ದು, ಪಕ್ಷದ ಇಬ್ಬರು ಶಾಸಕರನ್ನು ಸಹ ಹೊಸ ಸಂಪುಟಕ್ಕೆ ಸೇರಿಸಿಕೊಳ್ಳಲಾಗುವುದು ಎಂದು ಮೂಲಗಳು ತಿಳಿಸಿವೆ.

ಶಾಸಕ ಮುಖೇಶ್ ಅಹ್ಲಾವತ್ ಅವರು ಹೊಸದಾಗಿ ಆತಿಶಿ ಅವರ ಸಂಪುಟದ ಸಚಿವರಾಗಿ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಮೂಲಗಳು ಹೇಳಿವೆ, ಮುಖೇಶ್ ಆಹ್ಲಾವತ್ ದೆಹಲಿಯ ಸುಲ್ತಾನ್‌ಪುರ ಮಜ್ರಾ ವಿಧಾನಸಭಾ ಕ್ಷೇತ್ರವನ್ನು ಪ್ರತಿನಿಧಿಸುತ್ತಾರೆ. ಮಂತ್ರಿ ಮಂಡಲಕ್ಕೆ ಇನ್ನೊಬ್ಬರನ್ನು ಆಯ್ಕೆ ಮಾಡಬೇಕಿದ್ದು ಈವರೆಗೂ ಈ ಹೆಸರು ಅಂತಿಮವಾಗಿಲ್ಲ.

ಮಂಗಳವಾರ ಹುದ್ದೆಗೆ ರಾಜೀನಾಮೆ ನೀಡಿದ ಅರವಿಂದ್ ಕೇಜ್ರಿವಾಲ್ ಉತ್ತರಾಧಿಕಾರಿಯಾಗಿ ಆತಿಶಿ ಅಧಿಕಾರ ಸ್ವೀಕರಿಸಲಿದ್ದಾರೆ.

ಆತಿಶಿ ದೆಹಲಿ ಅಸೆಂಬ್ಲಿಯಲ್ಲಿ ಕಲ್ಕಾಜಿ ಕ್ಷೇತ್ರವನ್ನು ಪ್ರತಿನಿಧಿಸುತ್ತಾರೆ ಮತ್ತು ದೆಹಲಿ ಸರ್ಕಾರದಲ್ಲಿ ಅತಿ ಹೆಚ್ಚು ಖಾತೆಗಳನ್ನು ಹೊಂದಿದ್ದಾರೆ.

ಅಬಕಾರಿ ನೀತಿ ಪ್ರಕರಣದಲ್ಲಿ ಮನೀಶ್ ಸಿಸೋಡಿಯಾ ಬಂಧನದ ನಂತರ ಎಎಪಿ ಎದುರಿಸಿದ ತೊಂದರೆಗಳ ಹಿನ್ನೆಲೆಯಲ್ಲಿ ಅವರನ್ನು ಮಾರ್ಚ್ 2023 ರಲ್ಲಿ ದೆಹಲಿ ಕ್ಯಾಬಿನೆಟ್‌ಗೆ ನೇಮಿಸಲಾಯಿತು. ಈ ಪ್ರಕರಣದಲ್ಲಿ ಜಾಮೀನಿನ ಮೇಲೆಯೂ ಬಿಡುಗಡೆಯಾಗಿದ್ದಾರೆ.

# ಕರ್ನಾಟಕ ಸುವರ್ಣ ಸಂಭ್ರಮ ಸಮಾರೋಪ: ಕನ್ನಡ ಜನೋತ್ಸವವಾಗಿ ಆಚರಣೆ- ಸಿಎಂ ನಿರ್ಧಾರ



**ಬೆಂಗಳೂರು, ಸೆ.19:** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ್ ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ರಾಜ್ಯೋತ್ಸವ ಪ್ರಶಸ್ತಿ ಸಮಿತಿ ರಚಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಕರ್ನಾಟಕ ಸುವರ್ಣ ಸಂಭ್ರಮ-50 ಸಮಾರೋಪ ಸಮಾರಂಭವನ್ನು ಕನ್ನಡ ಜನೋತ್ಸವವಾಗಿ ಆಚರಿಸಲು ನಿರ್ಧರಿಸಲಾಗಿದೆ ಎಂದು ಹೇಳಿದರು. ಎಲ್ಲ ಜಿಲ್ಲೆ ಹಾಗೂ ತಾಲ್ಲೂಕುಗಳಲ್ಲಿ ಕರ್ನಾಟಕ ಸುವರ್ಣ ಸಂಭ್ರಮ ನಡೆಯುತ್ತಿದ್ದು, ಹಂಪಿಯಿಂದ ಆರಂಭವಾದ ಕನ್ನಡ ರಥಯಾತ್ರೆ ಈಗಾಗಲೇ 28 ಜಿಲ್ಲೆಗಳಲ್ಲಿ ಸಾಗಿದ್ದು, ರಥಯಾತ್ರೆಯ ಸಮಾರೋಪ ಸಮಾರಂಭ ಉ.ಕನ್ನಡ ಜಿಲ್ಲೆಯ ಸಿದ್ದಾಪುರದಲ್ಲಿ ನಡೆಯಲಿದೆ ಎಂದು ಹೇಳಿದರು. ರಾಜ್ಯೋತ್ಸವ ಪ್ರಶಸ್ತಿ-2024 ಪ್ರದಾನ ಹಾಗೂ ಕರ್ನಾಟಕ ಸುವರ್ಣ ಸಂಭ್ರಮ-50 ಸಮಾರೋಪ ಸಮಾರಂಭ ಕುರಿತು ಇಂದು ನಡೆದ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜ್ಯೋತ್ಸವ ಪ್ರಶಸ್ತಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿದ್ದು, ಸೆ. 30ರ ವರೆಗೆ ಅರ್ಜಿ ಸಲ್ಲಿಸಬಹುದು. ಈ ಬಾರಿ 69 ಮಂದಿಗೆ ರಾಜ್ಯೋತ್ಸವ ಪ್ರಶಸ್ತಿ ನೀಡಲಾಗುವುದು ಎಂದರು.

ಕರ್ನಾಟಕ ಸುವರ್ಣ ಸಂಭ್ರಮ ಸಮಾರೋಪ ಸಮಾರಂಭ ವಿಧಾನಸೌಧದ ಮುಂಭಾಗದಲ್ಲಿ ನಡೆಯಲಿದೆ. ಇದೇ ಸಂದರ್ಭದಲ್ಲಿ ರಾಜ್ಯೋತ್ಸವ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದರು. ವಿಧಾನಸೌಧದ ಆವರಣದಲ್ಲಿ 25 ಅಡಿ ಎತ್ತರದ ಭುವನೇಶ್ವರಿ ದೇವಿಯ ಕಂಚಿನ ಪ್ರತಿಮೆ ಕಾಮಗಾರಿ ಪ್ರಗತಿಯಲ್ಲಿದ್ದು, ನ. 1 ಕನ್ನಡ ರಾಜ್ಯೋತ್ಸವ ದಿನದಂದು ಅನಾವರಣ ಮಾಡಲಾಗುವುದು ಎಂದರು. ಕರ್ನಾಟಕ ಸುವರ್ಣ ಸಂಭ್ರಮ-50ನೇ ವರ್ಷಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದೆ. ಮನೆ ಮನೆಯಲ್ಲಿ ಕನ್ನಡ ಬಾವುಟವನ್ನು ಹಾರಿಸಲು ಮನವಿ ಮಾಡಲಾಗುವುದು. ಕರ್ನಾಟಕದ ಬಹುಸಂಸ್ಕೃತಿ, ಸೌಹಾರ್ದ ಸಂಸ್ಕೃತಿ ಕುರಿತು 100 ಪುಸ್ತಕಗಳನ್ನು ಸಿದ್ಧಪಡಿಸಲಾಗುತ್ತಿದ್ದು, ಡಿಸೆಂಬರ್ ವೇಳೆಗೆ ಬಿಡುಗಡೆ ಮಾಡಲಾಗುವುದು ಎಂದರು. ಎಲ್ಲ ಶಾಲಾ-ಕಾಲೇಜುಗಳಲ್ಲಿ ಕನ್ನಡ ರಾಜ್ಯೋತ್ಸವನ್ನು ಅದ್ದೂರಿಯಾಗಿ ಆಚರಿಸಲು ಕ್ರಮ ಕೈಗೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ ಅವರು ಕೊರಗ ಭಾಷೆಯಂತಹ ಸಣ್ಣ ಭಾಷೆಗಳ ಅಭಿವೃದ್ಧಿಗೆ ಕ್ರಮಕೈಗೊಳ್ಳಲು ತಜ್ಞರ ಸಮಿತಿ ರಚಿಸುವಂತೆ ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಇದೇ ಸಂದರ್ಭದಲ್ಲಿ ಮನವಿ ಮಾಡಿದರು. ನಾಡಿನ ಕಲೆ, ಸಾಹಿತ್ಯ, ಕೃಷಿ, ತೋಟಗಾರಿಕೆ ಕುರಿತಾದ 5 ಸಂಪುಟಗಳನ್ನು ಸಿದ್ಧಪಡಿಸಲಾಗುತ್ತಿದೆ. ಇದೇ ಸಂದರ್ಭದಲ್ಲಿ ಸ್ಮರಣ ಸಂಭ್ರಮ ಸಂಪುಟ ಹೊರತರಲಾಗುತ್ತಿದೆ ಎಂದು ಹೇಳಿದರು. ಕನ್ನಡ ಸಾಹಿತಿಗಳ ನುಡಿ ಮುತ್ತುಗಳನ್ನು ಎಲ್ಲ ಜಿಲ್ಲೆಗಳ ಪ್ರಮುಖ ಸ್ಥಳಗಳಲ್ಲಿ ಹಾಗೂ ಕೆಎಸ್‌ಆರ್‌ಟಿಸಿ ಬಸ್ ಮತ್ತಿತರ ಕಡೆಗಳಲ್ಲಿ ಪ್ರಚುರಪಡಿಸಬೇಕುಎಂದರು. ರಾಜ್ಯದ 4 ವಲಯಗಳಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸ ಲಾಗುತ್ತದೆ. ಮೈಸೂರಿನಲ್ಲಿ ಚಿಂತನಾ ಸಮಾವೇಶ, ರಾಯಚೂರು ಜಿಲ್ಲೆಯಲ್ಲಿ ಗೋಕಾಕ್ಚಳವಳಿ ಸಂಸ್ಮರಣೆ, ಮಹಾರಾಷ್ಟ್ರದ ಜತ್ ತಾಲ್ಲೂಕಿನಲ್ಲಿ ಗಡಿನಾಡು ಸಂಸ್ಕೃತಿ ಉತ್ಸವ ಹಾಗೂ ಮಂಗಳೂರಿನಲ್ಲಿ ವಿವಿಧ ಅಕಾಡೆಮಿಗಳ ಸಹಯೋಗದಲ್ಲಿ ಬಹುಸಂಸ್ಕೃತಿ ಉತ್ಸವ ಆಚರಿಸಲಾಗುವುದು ಎಂದರು. ಮೈಸೂರು ಜಿಲ್ಲೆಯ ನೂತನ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಮಾಜಿ ಮುಖ್ಯಮಂತ್ರಿ ದಿ. ದೇವರಾಜು ಅರಸು ಅವರ ಪ್ರತಿಮೆ ಸ್ಥಾಪನೆ ಕಾಮಗಾರಿ ಪ್ರಗತಿಯಲ್ಲಿದ್ದು, ಬಳ್ಳಾರಿಯಲ್ಲಿ ರಂಜಾನ್ ಸಾಬ್ ಸ್ಮಾರಕ ನಿರ್ಮಾಣ ಕಾರ್ಯ ನಡೆಯುತ್ತಿದೆ. ಧಾರವಾಡದಲ್ಲಿ ಅದರಗುಂಚಿ ಶಂಕರಗೌಡ ಸ್ಮಾರಕ ನಿರ್ಮಾಣಕ್ಕೆ ಅಂದಾಜು ವೆಚ್ಚ ಸಲ್ಲಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಅಂದಾನಪ್ಪ ದೊಡ್ಡ ಮೇಟಿ ಸ್ಮಾರಕ ನಿರ್ಮಾಣ ಮಾಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಹೇಳಿದರು. ಕೊರಗ ಭಾಷೆಯಂತಹ ಸಣ್ಣ ಭಾಷೆಗಳ ಅಭಿವೃದ್ಧಿಗೆ ಕ್ರಮ ಕೈಗೊಳ್ಳಲು ತಜ್ಞರ ಸಮಿತಿ ರಚಿಸುವಂತೆ ಸಭೆಯಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪುರುಷೋತ್ತಮ ಬಿಳಿಮಲೆ ಅವರು ಮನವಿ ಮಾಡಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ, ಗೃಹ ಸಚಿವ ಜಿ.ಪರಮೇಶ್ವರ್, ಮುಖ್ಯಮಂತ್ರಿ ಅವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ.ಅತೀಕ್, ಎಸ್.ಆರ್.ಉಮಾಶಂಕರ್, ಇಲಾಖಾ ಕಾರ್ಯ ದರ್ಶಿ ಅಜಯ ನಾಗಭೂಷಣ್, ವಿವಿಧ ಪ್ರಾಧಿಕಾರ ಹಾಗೂ ಅಕಾಡೆಮಿಗಳ ಅಧ್ಯಕ್ಷರು ಮತ್ತಿತರರು ಉಪಸ್ಥಿತರಿದ್ದರು.

# ಆಹಾರೋತ್ಪನ್ನಕ್ಕೆ ಭಾರತ ಬಹುದೊಡ್ಡ ಮಾರುಕಟ್ಟೆ

**-ಜಗತ್ತಿಗೇ ಆಹಾರ ಪೂರೈಸ ಬಹುದು ಭಾರತ; ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಅಭಿಮತ**

**- ದೆಹಲಿಯಲ್ಲಿ ವರ್ಲ್ಡ್ ಫುಡ್ ಇಂಡಿಯಾ 2024 ಮೇಳ ಉದ್ಘಾಟನೆ**

**ನವದೆಹಲಿ, ಸೆ.19:** ಆಹಾರ ಉತ್ಪಾದನೆಗೆ ಭಾರತದಲ್ಲಿ ವಿಶಾಲ ಅವಕಾಶವಿದ್ದು, ಜಗತ್ತಿಗೇ ಆಹಾರೋತ್ಪನ್ನ ಪೂರೈಸಬಹುದು ಎಂದು ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ ಜೋಶಿ ಹೇಳಿದರು. ದೆಹಲಿಯಲ್ಲಿ ಇಂದು ಆಯೋಜಿಸಿದ್ದ 'ವರ್ಲ್ಡ್ ಫುಡ್ ಇಂಡಿಯಾ 2024' ಮೇಳದ ಉದ್ಘಾಟನೆ ವೇಳೆ ಮಾತನಾಡಿ, ಗುಣಮಟ್ಟದ ಆಹಾರ ಉತ್ಪಾದನೆಯಲ್ಲಿ ಭಾರತ ವಿಶ್ವಪ್ರಸಿದ್ಧವಾಗಿದೆ ಎಂದು ಹೇಳಿದರು. ಆಹಾರ ಧಾನ್ಯಗಳ ಉತ್ಪಾದನೆ ಮತ್ತು ಸಂಸ್ಕರಣೆ ಜತೆಗೆ ಅತ್ಯುತ್ತಮ ಮಾರುಕಟ್ಟೆಯನ್ನೂ ಭಾರತ ಕಂಡುಕೊಳ್ಳುತ್ತಿದೆ ಎಂದ ಸಚಿವರು, ಹಾಲು, ಅಕ್ಕಿ, ಸಕ್ಕರೆ ಮುಂತಾದ ಆಹಾರೋತ್ಪಾದನೆಗಳಿಗೆ ಭಾರತವೇ ದೊಡ್ಡ ಮಾರುಕಟ್ಟೆಯಾಗಿದೆ ಎಂದು ಹೇಳಿದರು.

**ಜಾಗತಿಕ ಬೇಡಿಕೆ ಹೆಚ್ಚಿದೆ:** ಭಾರತದ ಆಹಾರ, ಧಾನ್ಯ ಮತ್ತು ಉತ್ಪನ್ನಗಳಿಗೆ ಜಾಗತಿಕವಾಗಿ ಹೆಚ್ಚು ಬೇಡಿಕೆಯಿದೆ. ಹಾಗಾಗಿ ಕೃಷಿ ಉತ್ಪನ್ನಗಳ ಗುಣಮಟ್ಟದ ಸಂಸ್ಕರಣೆ, ಆಹಾರೋತ್ಪನ್ನಗಳ ಅಧಿಕ ಉತ್ಪಾದನೆಗೆ ಮುಂದಾದರೆ ಭಾರತ ಅತಿದೊಡ್ಡ ಮಾರುಕಟ್ಟೆಯಾಗಲಿದೆ ಎಂದು ಹೇಳಿದರು.

ಆಹಾರ ಉತ್ಪನ್ನಗಳ ಸಂಸ್ಕರಣೆ, ಗುಣಮಟ್ಟ ಕಾಯ್ದುಕೊಳ್ಳುವುದು ಹಾಗೂ ಮಾರುಕಟ್ಟೆ ಕಂಡುಕೊಳ್ಳುವುದು ಅತಿ ಮುಖ್ಯವಾಗುತ್ತದೆ. ಭಾರತ ಇದರಲ್ಲಿ ಮುಂಚೂಣಿ ಪಾತ್ರ ವಹಿಸಿದೆ ಎಂದರು. ನಾವು ಸಾಕಷ್ಟು ಆಹಾರೋತ್ಪನ್ನಗಳನ್ನು ಉತ್ಪಾದಿಸಿ ಮಾರುಕಟ್ಟೆ ಮಾಡಬಹುದು. ಅಂಥ ಅವಕಾಶ ನಮ್ಮ ರೈತರು ಮತ್ತು ಉತ್ಪಾದಕರಿಗೆ ಇದೆ. ಭವಿಷ್ಯದಲ್ಲಿ ನಾವು ಭಾರತೀಯ ಮಾರುಕಟ್ಟೆ ಹೊರತಾಗಿ ಜಗತ್ತಿಗೇ ಆಹಾರ ಪೂರೈಸಬಹುದು ಎಂದು ಹೇಳಿದರು.

**ಆಹಾರ ಸುರಕ್ಷತೆಗೆ ಮೋದಿ ಸರ್ಕಾರದ ಬಲ:** ಆಹಾರ ಭದ್ರತೆ, ಸುರಕ್ಷತೆ ಮತ್ತು ಪೌಷ್ಠಿಕಾಂಶಯುಕ್ತ ಆಹಾರೋತ್ಪಾದನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಒತ್ತು ನೀಡಿದ್ದಾರೆ ಎಂದರು. ನವೀಕರಿಸಬಹುದಾದ ಇಂಧನ ಮೂಲಗಳನ್ನು ಅಳವಡಿಸಿಕೊಳ್ಳುವ ಜತೆಗೆ, ತಂತ್ರಜ್ಞಾನ, ಹೊಸ ಆವಿಷ್ಕಾರಗಳ ಮೂಲಕ ಮೂಲಕ ನಮ್ಮ ಆಹಾರ ಸಂಸ್ಕರಣಾ ವಲಯವನ್ನು ವಿಸ್ತರಿಸಿಕೊಳ್ಳಬೇಕಿದೆ ಎಂದು ಜೋಶಿ ಹೇಳಿದರು. ಕೇಂದ್ರ ಆಹಾರ ಸಂಸ್ಕರಣಾ ಕೈಗಾರಿಕೆಗಳ ಸಚಿವ ಚಿರಾಗ್ ಪಾಸ್ವಾನ್ ಮತ್ತು ರಾಜ್ಯ ಸಚಿವ ರವ್‌ನೀತ್ ಸಿಂಗ್ ಬಿಟ್ಟು ಅವರೊಂದಿಗೆ ವರ್ಲ್ಡ್ ಫುಡ್ ಇಂಡಿಯಾ 2024"ರ ಉದ್ಘಾಟನಾ ಸಮಾರಂಭದಲ್ಲಿ ಜೋಶಿ ಭಾಗವಹಿಸಿ ವಿವಿಧ ಅಗತೋತ್ಪನ್ನಗಳ ಪ್ರದರ್ಶನ ವೀಕ್ಷಿಸಿದರು.





'ವರ್ಲ್ಡ್ ಫುಡ್ ಇಂಡಿಯಾ' ಮೇಳದ ಉದ್ಘಾಟನಾ ಸಮಾರಂಭದಲ್ಲಿ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಮಾತನಾಡಿದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20

Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

# ಕರ್ನಾಟಕದಲ್ಲಿ ಗೃಹಜ್ಯೋತಿ ಯಶಸ್ವಿಗೊಳಿಸಿದ 'ಆ್ಯಕ್ಷನ್ ಹೀರೋ' ಹಿರಿಯ ಐಎಎಸ್ ಅಧಿಕಾರಿ ಗೌರವ್ ಗುಪ್ತಾ





ಬಾಡಿಗೆ ಮನೆಯಲ್ಲಿರುವವರಿಗೆ ಏನಾಗಬಹುದು ಎನ್ನುವ ಯೋಚನೆ ಕೆಲವರಲ್ಲಿ ಇತ್ತು. ಈ ಸಮಸ್ಯೆಯನ್ನೂ ಬಗೆಹರಿಸಿದ್ದು, ಗೃಹಜ್ಯೋತಿ ಯೋಜನೆ ಲಾಭ ಪಡೆಯಲು ಯಾವುದೇ ಅರ್ಜಿ ಹಾಕಬೇಕಾಗಿಲ್ಲ. ಕೇವಲ ರೆಂಟಲ್ ಅಗ್ರಿಮೆಂಟ್ ಅನ್ನು ಅಪ್ಲೋಡ್ ಮಾಡಿದರೆ ಸಾಕು. ಬೇರೆ ಯಾವುದೇ ದಾಖಲೆಗಳನ್ನು ಕೊಡಬೇಕಾಗಿಲ್ಲ. ಇದು ಸಂಪೂರ್ಣವಾಗಿ ಆನ್‌ಲೈನ್‌ಸಿಸ್ಟಮ್. ಮುಂದೆಯೂ ಇದೇ ರೀತಿಯಲ್ಲಿ ಮುಂದುವರಿಯುತ್ತದೆ. ಒಂದು ಮನೆಯಿಂದ ಇನ್ನೊಂದು ಮನೆಗೆ ಬದಲಾಗುವವರು ಅಲ್ಲಿ ರದ್ದು ಮಾಡಿ ಇನ್ನೊಂದೆಡೆ ನೋಂದಾಯಿಸಿಕೊಂಡರೆ ಸಾಕು. ಇದು ಕೂಡ ಬಹಳ ಸರಳವಾಗಿದೆ. ಒಂದೊಮ್ಮೆ ಇನ್ನೂ ಸರಳೀಕರಿಸಬೇಕಿದ್ದರೆ ಇಂಧನ ಇಲಾಖೆ ಯಾವಾಗಲೂ ಸಿದ್ಧವಾಗಿದೆ. ಈ ಬಗ್ಗೆ ಯಾವುದೇ ಗೊಂದಲ ಮತ್ತು ಅನುಮಾನ ಇಲ್ಲ ಎನ್ನುತ್ತಾರೆ ಗೌರವ್ ಗುಪ್ತಾ ಅವರು.

**ವಿವಿಧ ಎಸ್ಕಾಂಗಳ ಗ್ರಾಹಕರು ಪಡೆದ ಲಾಭ**

ಬೆಂಗಳೂರು ನಗರವೊಂದರಲ್ಲೇ 34.42 ಲಕ್ಷ ಗ್ರಾಹಕರಿಗೆ ಗೃಹಜ್ಯೋತಿಯ ಲಾಭ ದೊರೆಯುವಂತಾಗಿದ್ದು, ಬೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳಲ್ಲಿ 66.61 ಲಕ್ಷ ಗ್ರಾಹಕರು ಪ್ರಯೋಜನ ಪಡೆದಿದ್ದಾರೆ. ಅದರಂತೆ ಮೆಸ್ಕಾಮ್ ವ್ಯಾಪ್ತಿಯ ಜಿಲ್ಲೆಗಳಲ್ಲಿ 16 ಲಕ್ಷ ಗ್ರಾಹಕರು ಪ್ರಯೋಜನ ಪಡೆದಿದ್ದರೆ, ಹೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳಲ್ಲಿ 32.67 ಲಕ್ಷ ಗ್ರಾಹಕರು ಪ್ರಯೋಜನ ಪಡೆದಿದ್ದಾರೆ. ಅದೇ ರೀತಿ ಜೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳಲ್ಲಿ 20 ಲಕ್ಷ.42 ಲಕ್ಷ ಗ್ರಾಹಕರು ಪ್ರಯೋಜನ ಪಡೆದಿದ್ದು, ಸೆಸ್ಕಾಂ ವ್ಯಾಪ್ತಿಯ ಜಿಲ್ಲೆಗಳಲ್ಲಿ 22.58 ಲಕ್ಷ ಗ್ರಾಹಕರು ಪ್ರಯೋಜನ ಪಡೆದಿದ್ದು, 1.70 ಕೋಟಿ ಗ್ರಾಹಕರಿಗೆ ಜುಲೈ ಅಂತ್ಯದ ವರೆಗೆ 8669.32 ಕೋಟಿ ವಿದ್ಯುತ್ ಸಹಾಯಧನವನ್ನು ನೀಡಿದ್ದು, ಇದೆಲ್ಲ ಯೋಜನೆ ರೂಪಿಸಿ ಕಾರ್ಯಗತ ಗೊಳಿಸಿದ್ದು ಐಎಎಸ್ ಹಿರಿಯ ಅಧಿಕಾರಿ ಗೌರವ್ ಗುಪ್ತಾ ಅವರು.

**ಗೌರವ್ ಗುಪ್ತಾ ಶ್ರೇಯಸ್ಸು**

ಐಐಟಿ ಕಾನ್ಪುರ ಇಂಜಿನಿಯರಿಂಗ್ ಪದವಿ ಪಡೆದಿರುವ ಗೌರವ್ ಗುಪ್ತಾ ಅವರು, 1990 ರ ಬ್ಯಾಚ್‌ನ ಭಾರತೀಯ ಆಡಳಿತ ಸೇವೆಯ ಅಧಿಕಾರಿ ಕರ್ನಾಟಕ ಕೇಡರ್‌ಗೆ ಆಗಮಿಸಿದವರು ಗೌರವ ಗುಪ್ತಾ. ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಮತ್ತು ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಪ್ರಧಾನ ಕಾರ್ಯದರ್ಶಿಯಾಗಿ ಸೇವೆ ಸಲ್ಲಿಸಿದ್ದಾರೆ.

ಕರ್ನಾಟಕದಲ್ಲಿ ಕೈಗಾರಿಕೆಗಳು ಮತ್ತು ಹೂಡಿಕೆಗಳನ್ನು ಉತ್ತೇಜಿಸುವ ಕೈಗಾರಿಕಾ ಅಭಿವೃದ್ಧಿ ಆಯುಕ್ತರಾಗಿಯೂ ಸೇವೆ ಸಲ್ಲಿಸಿದ್ದಾರೆ. ಮತ್ತು ಅದಕ್ಕೂ ಮೊದಲು ಬೆಂಗಳೂರು ಜಲಮಂಡಳಿಯ ಅಧ್ಯಕ್ಷರು, ಬಿಬಿಎಂಪಿಯಲ್ಲಿ ವಿಶೇಷ ಆಯುಕ್ತರು, ಕೆಎಸ್‌ಆರ್‌ಟಿಸಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರು ಸೇರಿದಂತೆ ರಾಜ್ಯ ಸರ್ಕಾರದ ವಿವಿಧ ಉನ್ನತ ಹುದ್ದೆಗಳಲ್ಲಿ ಕೆಲಸ ಮಾಡಿದ್ದು, ಪ್ರಸ್ತುತ ಜಲಸಂಪನ್ಮೂಲ ಇಲಾಖೆ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯೂ ಆಗಿದ್ದಾರೆ

ವಾಣಿಜ್ಯ ಮತ್ತು ವ್ಯಾಪಾರವನ್ನು ಸುಗಮಗೊಳಿಸುವುದು ಸರ್ಕಾರದಲ್ಲಿ ಗೌರವ್ ಗುಪ್ತಾ ಅವರು ಅತ್ಯಂತ ಪ್ರಮುಖ ಪಾತ್ರ ವಹಿಸಿದ್ದಾರೆ.

ರಾಜ್ಯಕ್ಕೆ ಮತ್ತು ಬೆಂಗಳೂರು ನಗರಕ್ಕೆ ಪ್ರಮುಖ ಮೂಲಸೌಕರ್ಯಗಳನ್ನು ಸೃಷ್ಟಿಸಲು ಕೆಲಸ ಮಾಡಿದ್ದಾರೆ. ಪ್ರಮುಖವಾಗಿ ಸಾರಿಗೆ, ನೀರು ಮತ್ತು ವಿದ್ಯುತ್. ಒದಗಿಸುವುದರೊಂದಿಗೆ ರಾಜ್ಯದಲ್ಲಿ ಪ್ರಮುಖವಾದ ಬೃಹತ್ ಹೂಡಿಕೆ ಶೃಂಗಸಭೆಯಾದ 'ಇನ್ವೆಸ್ಟ್ ಕರ್ನಾಟಕ–2016' ಗೆ ಪ್ರಮುಖ ಸಂಚಾಲಕರಾಗಿ ಕಾರ್ಯ ನಿರ್ವಹಿಸಿದ್ದಾರೆ.

ರಾಜ್ಯದಲ್ಲಿ ಐಟಿ ಮತ್ತು ಬಿಟಿ ಉದ್ಯಮಕ್ಕೆ ಮೂಲಸೌಕರ್ಯಗಳನ್ನು ರಚಿಸಲು, ಹೂಡಿಕೆಗಳನ್ನು ಉತ್ತೇಜಿಸಲು ಮತ್ತು ಸ್ಟಾರ್ಟ್‌ಅಪ್‌ಗಳನ್ನು ಉತ್ತೇಜಿಸುವಲ್ಲಿ ಗೌರವ್ ಗುಪ್ತಾ ಅವರು ಅತ್ಯಂತ ಪ್ರಮುಖ ಕಾರ್ಯ ನಿರ್ವಹಿಸಿದ್ದಾರೆ. ಇದಲ್ಲದೆ, ಅವರು ರಾಜ್ಯದಲ್ಲಿ ಎಲೆಕ್ಟ್ರಾನಿಕ್ ತಯಾರಿಕೆ ಮತ್ತು ಅನಿಮೇಷನ್ ಮತ್ತು ವಿಷುಯಲ್ ಎಫೆಕ್ಟ್ಸ್ ಉದ್ಯಮವನ್ನು ಉತ್ತೇಜಿಸಲು ಕಾರ್ಯನಿರ್ವಹಿಸಿದ್ದಾರೆ.

**ಅತ್ಯುತ್ತಮ ಉದ್ಯೋಗದಾತ ಪ್ರಶಸ್ತಿ 2010**

ವಿಶ್ವಮಾನವ ಸಂಪನ್ಮೂಲ ಕಾಂಗ್ರೆಸ್ ಸಂಘಟನೆಯ ವತಿಯಿಂದ ಮಾನವ ಸಂಪನ್ಮೂಲ ಉದ್ಯಮಕ್ಕೆ ಹೆಮ್ಮೆಯ ಕೊಡುಗೆ ನೀಡಿದ ವ್ಯಕ್ತಿ ಅಥವಾ ಸಂಸ್ಥೆಗಳನ್ನು ಗುರುತಿಸಲು, ಕೆಎಸ್‌ಆರ್‌ಟಿಸಿ ನೇಮಕಾತಿಯಲ್ಲಿ ನಾವೀನ್ಯತೆ ಮತ್ತು ಪಾರದರ್ಶಕ ಮತ್ತು ದಕ್ಷ ರೀತಿಯಲ್ಲಿ 7000 ಕ್ಕೂ ಹೆಚ್ಚು ಸಿಬ್ಬಂದಿ ನೇಮಕಾತಿಗಾಗಿ ಮಾಡಿರುವುದಕ್ಕಾಗಿ ಈ ಪ್ರಶಸ್ತಿಯನ್ನು ನೀಡಲಾಗಿದೆ.

**2010ರ ಮುಖ್ಯಮಂತ್ರಿಗಳ 'ರತ್ನ' ಪ್ರಶಸ್ತಿ**

ಕರ್ನಾಟಕದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತಿರುವ ರಾಜ್ಯ ಸಾರ್ವಜನಿಕ ಉದ್ಯಮಗಳ ಸಿಇಓ ಆಗಿ ಕಾರ್ಯ ನಿರ್ವಹಿಸಿರುವ ಗೌರವ್ ಗುಪ್ತಾ ಅವರಿಗೆ 2010ರಲ್ಲಿ ಮುಖ್ಯಮಂತ್ರಿಗಳ ವತಿಯಿಂದ ನೀಡುವ 'ರತ್ನ' ಪ್ರಶಸ್ತಿಯ ಗೌರವಕ್ಕೆ ಪಾತ್ರರಾಗಿದ್ದಾರೆ.

**2010ರ ವಿಶಿಷ್ಟ ಹಳೆಯ ವಿದ್ಯಾರ್ಥಿ ಪ್ರಶಸ್ತಿ**

ಗೌರವ್ ಗುಪ್ತಾ ಅವರು ಐಐಟಿ, ಕಾನ್ಪುರ, 2010ರಲ್ಲಿ ಸಾರಿಗೆ ವಲಯದಲ್ಲಿ ನಿರ್ವಹಣಾ ಕೌಶಲ್ಯಕ್ಕಾಗಿ ಅಸಾಧಾರಣ ಅರ್ಹತೆಯ ಸಾಧನೆಗಳನ್ನು ಗುರುತಿಸಿ ಐಐಟಿ ಕಾನ್ಪುರ ಹಳೆಯ ವಿದ್ಯಾರ್ಥಿಗಳಿಗೆ ನೀಡಲಾಗುವ ಅತ್ಯುನ್ನತ ಪ್ರಶಸ್ತಿಯ ಗೌರವಕ್ಕೂ ಪಾತ್ರರಾಗಿದ್ದಾರೆ.

❖

## 2010ರ 'ಆ್ಯಕ್ಷನ್ ಹೀರೋ'

ಗೌರವ್ ಗುಪ್ತಾ ಅವರ ಕಾರ್ಯಕ್ಷಮತೆಗೆ ಇಂಡಿಯಾ ಟುಡೇ ಕೊಡಮಾಡುವ ಆ್ಯಕ್ಷನ್ ಹೀರೋ ಪ್ರಶಸ್ತಿಗೂ ಪಾತ್ರರಾಗಿದ್ದಾರೆ. ಸಾರ್ವಜನಿಕ ಸಾರಿಗೆ ಕ್ಷೇತ್ರದಲ್ಲಿ ನೀಡಿರುವ ಕೊಡುಗೆಗಾಗಿ ಮತ್ತು ಕೆಎಸ್‌ಆರ್‌ಟಿಸಿ ಸಂಸ್ಥೆಯನ್ನು ಇಡೀ ದೇಶದ ಅತ್ಯಂತ ರೋಮಾಂಚಕ ಮತ್ತು ಲಾಭದಾಯಕ ಸಾರ್ವಜನಿಕ ವಲಯದ ಉದ್ಯಮವನ್ನಾಗಿ ಮಾಡುವ ಪ್ರಮುಖ ಪಾತ್ರ ವಹಿಸಿರುವ ಹಿನ್ನೆಲೆಯಲ್ಲಿ ಇಂಡಿಯಾ ಟುಡೇ "ಆಕ್ಷನ್ ಹೀರೋ" ಎಂದು ಇವರನ್ನು ಗುರುತಿಸಿದೆ.



## ನಿತ್ಯ ಪಂಚಾಂಗ 20.09.2024 ಶುಕ್ರವಾರ



ಶ್ರೀ ಕ್ರೋಧಿ ನಾಮ ಸಂವತ್ಸರ,
ಉತ್ತರಾಯಣ-ವಸಂತ ಋತು,
ಚಾಂದ್ರಮಾನ, ಭಾದ್ರಪದ ಬಹುಳ

ತದಿಗೆ, ರೇವತಿ ನಕ್ಷತ್ರ,
ಮಿತ್ತನಡ್ಕ ಜಾತ್ರೆ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಕಳಸಾ ಬಂಡೂರಿ ಯೋಜನೆಗೆ ಅನುಮತಿ: ಪ್ರಧಾನಿಗೆ ಸಿಎಂ ಪತ್ರ

**ಬೆಂಗಳೂರು, ಸೆ.19:** ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪತ್ರ ಬರೆದಿದ್ದಾರೆ. ಕರ್ನಾಟಕಕ್ಕೆ ಸಂಬಂಧಿಸಿದ ಮಹತ್ವದ ವಿಷಯವನ್ನು ನಿಮ್ಮ ತುರ್ತು ಗಮನಕ್ಕೆ ತರಲು ನಾನು ಈ ಪತ್ರ ಬರೆಯುತ್ತಿದ್ದೇನೆ ಎಂದು ಸಿದ್ದರಾಮಯ್ಯ ಉಲ್ಲೇಖಿಸಿದ್ದಾರೆ.

ಕಳಸಾ ಬಂಡೂರಿ ಕುಡಿಯುವ ನೀರಿನ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಅನುಮೋದನೆ ಒದಗಿಸಿಕೊಡುವಂತೆ ಮಂಡಳಿಯ ಅಧ್ಯಕ್ಷರೂ ಆಗಿರುವ ಪ್ರಧಾನಿ ನರೇಂದ್ರ ಮೋದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ.

ಸೆಪ್ಟೆಂಬರ್ 18ರಂದು ಪತ್ರ ಬರೆದಿರುವ ಸಿದ್ದರಾಮಯ್ಯ, ಪ್ರಧಾನಿಗೆ ಜನ್ಮದಿನದ (ಮೋದಿ ಜನ್ಮದಿನ ಸೆಪ್ಟೆಂಬರ್ 17ರಂದು) ಶುಭಾಶಯವನ್ನೂ ಕೋರಿದ್ದಾರೆ. ಉತ್ತರ ಕರ್ನಾಟಕದ ಜನರ ಹಿತದೃಷ್ಟಿಯಿಂದ



ಅತ್ಯವಶ್ಯಕವಾಗಿರುವ ಕಳಸಾ-ಬಂಡೂರಿ ಯೋಜನೆಗೆ ಶೀಘ್ರ ಮಂಜೂರಾತಿ ನೀಡುವಂತೆ ಒತ್ತಾಯಿಸಿದರು. ಕಳಸಾ ಬಂಡೂರಿ ನಾಲಾ ಯೋಜನೆಗೆ ರಾಷ್ಟ್ರೀಯ ವನ್ಯಜೀವಿ ಮಂಡಳಿಯ ಅನುಮೋದನೆ ಒದಗಿಸಿಕೊಡಬೇಕೆಂದು ಪ್ರಧಾನಿ ನರೇಂದ್ರ ಮೋದಿಗೆ ಸಿದ್ದರಾಮಯ್ಯ ಪತ್ರ ಬರೆದಿದ್ದಾರೆ. ಮುಖ್ಯ ವನ್ಯಜೀವಿ ವಾರ್ಡನ್ ಅಕ್ರಮ ಆದೇಶದ ಬಗ್ಗೆಯೂ ಪತ್ರದಲ್ಲಿ ಉಲ್ಲೇಖಿಸಲಾಗಿದೆ.ಉತ್ತರ ಕರ್ನಾಟಕದ ಕುಡಿಯುವ ನೀರಿನ ಅಗತ್ಯತೆಗಳನ್ನು ಪೂರೈಸಲು ನಿರ್ಣಾಯಕವಾಗಿರುವ ಕಳಸಾ-ಬಂಡೂರಿ ನಾಲಾ ತಿರುವು ಯೋಜನೆಯು ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯದಿಂದ ವನ್ಯಜೀವಿ ಅನುಮೋದನೆಗಾಗಿ ದೀರ್ಘಕಾಲದಿಂದ ಬಾಕಿ ಉಳಿದಿದೆ. ಮಹದಾಯಿ ಜಲವಿವಾದ ನ್ಯಾಯಮಂಡಳಿಯ ಆದೇಶವನ್ನು 14-08-2018 ರಂದು ಘೋಷಿಸಲಾಯಿತು ಮತ್ತು 27-02-2020 ರಂದು ಭಾರತದ ಗೆಜೆಟ್‌ನಲ್ಲಿ ಪ್ರಕಟಿಸಲಾಯಿತು.ಕರ್ನಾಟಕ ರಾಜ್ಯಕ್ಕೆ ಒಟ್ಟು 13.42 ಟಿಎಂಸಿ ಹಂಚಿಕೆಯಾಗಿದೆ. ಅದರಲ್ಲಿ 3.9 ಟಿಎಂಸಿ ನೀರನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ತಿರುಗಿಸಲು (ಕಳಸಾ ನಾಲಾದಿಂದ 1.72 ಟಿಎಂಸಿ ಮತ್ತು ಬಂಡೂರ ನಾಲಾದಿಂದ 2.18 ಟಿಎಂಸಿ) ರಾಜ್ಯ ಸರ್ಕಾರವು 16-06-2022 ರಂದು ಅಘಅ ಗೆ ಕಳಸಾ ಮತ್ತು ಬಂಡೂರಿ ನಾಲಾ ತಿರುವು ಯೋಜನೆ (ಲಿಫ್ಟ್ ಯೋಜನೆಗಳು) ಮಾರ್ಪಡಿಸಿದ ಪೂರ್ವ-ಕಾರ್ಯಸಾಧ್ಯತಾ ವರದಿಯನ್ನು ಅನುಮೋದನೆಗಾಗಿ ಸಲ್ಲಿಸಿದೆ ಎಂದು ಪತ್ರದಲ್ಲಿ ಸಿದ್ದರಾಮಯ್ಯ ಉಲ್ಲೇಖಿಸಿದ್ದಾರೆ. ವರದಿ ಸಲ್ಲಿಕೆ ಕುರಿತ ಪೋರ್ಟಲ್ ಸಂಖ್ಯೆಯನ್ನೂ ಉಲ್ಲೇಖಿಸಿದ್ದಾರೆ.ಈ ಪ್ರಸ್ತಾವನೆಯು ಎಲ್ಲಾ ಅಗತ್ಯ ಪೂರ್ವಾಪೇಕ್ಷಿತಗಳನ್ನು ಪೂರೈಸಿದೆ ಮತ್ತು ವಿವರವಾದ ಸಮರ್ಥನೆಗಳನ್ನು ಒದಗಿಸಿದೆ. ಆದಾಗ್ಯೂ, ಇಲ್ಲಿಯವರೆಗೆ ನೀವು ಅಧ್ಯಕ್ಷರಾಗಿರುವ ವನ್ಯಜೀವಿ ರಾಷ್ಟ್ರೀಯ ಮಂಡಳಿಯು ಅಗತ್ಯ ಅನುಮತಿಯನ್ನು ನೀಡಿಲ್ಲ. ಗೋವಾದ ಮುಖ್ಯ ವನ್ಯಜೀವಿ ವಾರ್ಡನ್ ಕಳಸಾ ಬಂಡೂರಿಯಲ್ಲಿ ಕರ್ನಾಟಕ ಯಾವುದೇ ಚಟುವಟಿಕೆಗಳನ್ನು ಕೈಗೊಳ್ಳದಂತೆ ಕಾನೂನುಬಾಹಿರ ಆದೇಶವನ್ನು ಹೊರಡಿಸಿದ್ದಾರೆ ಎಂದು ಪ್ರಧಾನಿಗೆ ಬರೆದ ಪತ್ರದಲ್ಲಿ ಸಿದ್ದರಾಮಯ್ಯ ಉಲ್ಲೇಖಿಸಿದ್ದಾರೆ.

## ಅ.21ರಂದು ಉಪಚುನಾವಣೆ

**ಬೆಂಗಳೂರು, ಸೆ.19:** ವಿಧಾನ ಪರಿಷತ್ ಉಪಚುನಾವಣೆಗೆ ದಿನಾಂಕ ನಿಗದಿಯಾಗಿದೆ. ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ನಿಗದಿಯಾಗಿದೆ. ಕೋಟ ಶ್ರೀನಿವಾಸ್ ಪೂಜಾರಿ ರಾಜುನಾಮೆಯಿಂದ ತೆರವಾಗಿರುವ ದಕ್ಷಿಣ ಕನ್ನಡ ಸ್ಥಳೀಯ ಸಂಸ್ಥೆಗಳ ವಿಧಾನ ಪರಿಷತ್ ಉಪಚುನಾವಣೆ ಅಕ್ಟೋಬರ್ 21ರಂದು ನಡೆಯಲಿದೆ. ಸೆಪ್ಟೆಂಬರ್ 26ರಿಂದ ಅಧಿಸೂಚನೆ ಜಾರಿಯಾಗಲಿದೆ. ಅಕ್ಟೋಬರ್ 3ರಂದು ನಾಮಪತ್ರ ಸಲ್ಲಿಸಲು ಕೊನೆ ದಿನವಾಗಿದೆ. ಅಕ್ಟೋಬರ್ 4ರಂದು ನಾಮಪತ್ರಗಳ ಪರಿಶೀಲನೆ ನಡೆಯಲಿದ್ದು, ಅಕ್ಟೋಬರ್ 7 ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.ಅಕ್ಟೋಬರ್ 21ರಂದು ಬೆಳಿಗ್ಗೆ 8ಗಂಟೆಯಿಂದ ಸಂಜೆ 4 ಗಂಟೆಯವರೆಗೆ ಮತದಾನ ನಡೆಯಲಿದ್ದು, ಅಕ್ಟೋಬರ್ 24ರಂದು ಮತ ಎಣಿಕೆ ನಡೆಯಲಿದೆ.

## ಗಂಗಾ ಆರತಿ ವೀಕ್ಷಣೆಗೆ ಸಚಿವ, ಶಾಸಕರ ನಿಯೋಗ ಇಂದು ಹರಿದ್ವಾರ, ವಾರಣಾಸಿಗೆ



**ಬೆಂಗಳೂರು,ಸೆ.19:** ಗಂಗಾ ನದಿಗೆ ಮಾಡಲಾಗುವ ಗಂಗಾ ಆರತಿ ಮಾದರಿ ಕಾವೇರಿ ನದಿಗೆ ಕಾವೇರಿ ಆರತಿ ಮಾಡುವ ಕಾರ್ಯಕ್ರಮದ ರೂಪುರೇಷೆಗಳ ಕುರಿತು ಅವಲೋಕಿಸಿ ಅಧ್ಯಯನ ನಡೆಸಲು ಸಚಿವರು, ಶಾಸಕರು ಮತ್ತು ಅಧಿಕಾರಿಗಳನ್ನೊಳಗೊಂಡ ನಿಯೋಗ ವಾರಣಾಸಿ ಮತ್ತು ಹರಿದ್ವಾರಕ್ಕೆ ಭೇಟಿ ನೀಡಲಿದೆ.

ಕೃಷಿ ಸಚಿವರು ಹಾಗೂ ಕಾವೇರಿ ಆರತಿ ಕಾರ್ಯಕ್ರಮದ ಅಧ್ಯಕ್ಷರಾದ ಚಲುವರಾಯಸ್ವಾಮಿ ಅವರ ಅಧ್ಯಕ್ಷತೆಯಲ್ಲಿ ಶಾಸಕರು, ವಿಧಾನಪರಿಷತ್ ಸದಸ್ಯರು, ಜಲಸಂಪನ್ಮೂಲ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ನಿಯೋಗ ಹರಿದ್ವಾರ ಮತ್ತು ವಾರಣಾಸಿಗೆ ಸೆ.20 ಹಾಗೂ ಸೆ.21ರಂದು 2 ದಿನಗಳ ಅಧ್ಯಯನ ಪ್ರವಾಸ ಕೈಗೊಳ್ಳಲಿದೆ.

ರಾಜ್ಯದಲ್ಲಿ ಉತ್ತಮ ಮಳೆಯಾಗಿ ಜಲಾಶಯಗಳು ತುಂಬಲಿ ಎಂಬ ಆಶಯಕ್ಕಾಗಿ ರಾಜ್ಯದ ಇತಿಹಾಸದಲ್ಲೇ ಪ್ರಥಮಬಾರಿಗೆ ಕಾವೇರಿ ನದಿಗೆ ಗಂಗಾ ಆರತಿ ಮಾದರಿ ಕಾವೇರಿ ಆರತಿ ಮಾಡುವ ಕಾರ್ಯಕ್ರಮ ಆಯೋಜಿಸುವುದಾಗಿ ಉಪಮುಖ್ಯಮಂತ್ರಿಗಳು ಹಾಗೂ ಜಲಸಂಪನ್ಮೂಲ ಸಚಿವರಾದ ಡಿ.ಕೆ.ಶಿವಕುಮಾರ್ ಅವರು ಘೋಷಣೆ ಮಾಡಿದ್ದರು.

ಹರಿದ್ವಾರ ಮತ್ತು ಮತ್ತು ವಾರಣಾಸಿಯಲ್ಲಿ ಗಂಗಾ ನದಿಗೆ ಆರತಿ ಮಾಡುವದನ್ನು ವೀಕ್ಷಿಸಿ ಸಮಗ್ರವಾಗಿ ಅಧ್ಯಯನ ನಡೆಸಿ ವರದಿ ಸಿದ್ಧಪಡಿಸಲು ಸಚಿವ ಚಲುವರಾಯಸ್ವಾಮಿ ಅವರ ಆಧ್ಯಕ್ಷತೆಯಲ್ಲಿ ಶಾಸಕರು, ಅಧಿಕಾರಿಗಳನ್ನು ಒಳಗೊಂಡ ಸಮಿತಿ ರಚನೆ ಮಾಡಲಾಗಿತ್ತು. ಇದೀಗ ಸಮಿತಿ ಸದಸ್ಯರು ಅಧ್ಯಯನ ಪ್ರವಾಸಕ್ಕೆ ತೆರಳಿದ್ದಾರೆ.

**ಎರಡು ದಿನಗಳ ಪ್ರವಾಸ:** ಕೃಷಿ ಸಚಿವರ, ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಚಲುವರಾಯಸ್ವಾಮಿ, ಶಾಸಕರುಗಳಾದ ಪಿ.ಎಂ.ನರೇಂದ್ರಸ್ವಾಮಿ, ರಮೇಶ್ ಬಾಬು ಬಂಡಿಸಿದ್ದೇಗೌಡ, ರವಿಕುಮಾರ್, ಕೆ.ಎಂ.ಉದಯ್, ದಿನೇಶ್ ಗೂಳಿಗೌಡ, ಮಾಗಡಿ ಬಾಲ ಕೃಷ್ಣ , ಮೈಸೂರು ಹರೀಶ್ ಗೌಡ,ನಂಜನಗೂಡು ದರ್ಶನ್ ಧ್ರುವನಾರಾಯಣ್,ಅರಸೀಕೆರೆ ಶಿವಲಿಂಗೇಗೌಡ, ಕೊಳ್ಳೇಗಾಲ ಕೃಷ್ಣಮೂರ್ತಿ, ವಿಧಾನಪರಿಷತ್ ಮಾಜಿ ಸದಸ್ಯರಾದ ಅಪ್ಪಾಜಿಗೌಡ, ವೆಂಕಟರಮಣೇಗೌಡ , ಮಾಜಿ ಶಾಸಕರಾದ ರಾಜು, ಹಾಗೂ ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕರಾದ ಮಹೇಶ್, ಜಲಸಂಪನ್ಮೂಲ ಸಚಿವರ ಸಲಹೆಗಾರರಾದ ಜಯಪ್ರಕಾಶ್ ಸೇರಿದಂತೆ ಹಲವರು ಸದಸ್ಯರನ್ನೊಳಗೊಂಡ ನಿಯೋಗ ಪ್ರವಾಸ ಕೈಗೊಂಡಿದೆ. ನಿಯೋಗವು ಸೆ.20ರ ಶುಕ್ರವಾರ ರಾತ್ರಿ ಹರಿದ್ವಾರದಲ್ಲಿ ಗಂಗಾ ನದಿಗೆ ಆರತಿ ಮಾಡುವುದನ್ನು ವೀಕ್ಷಣೆ ಮಾಡಲಿದೆ. ಸೆ.21ರ ಶನಿವಾರದಂದು ವಾರಣಾಸಿಗೆ ತೆರಳಿ ಗಂಗಾ ಆರತಿಗೆ ಅತ್ಯಂತ ಪ್ರಸಿದ್ಧ ಹಾಗೂ ಪವಿತ್ರ ಘಾಟ್ ಆದ ದಶಾಸ್ವಮೇಧ ಘಾಟ್ ನಲ್ಲಿ ಗಂಗಾ ಆರತಿಯನ್ನು ವೀಕ್ಷಣೆ ಮಾಡಲಿದೆ. ಸೆ.22ರ ಭಾನುವಾರ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡುವುದರ ಜೊತೆಗೆ ಘಾಟ್ ನಲ್ಲಿ ಸಂಚರಿಸಿ, ಅಲ್ಲಿನ ಅಧಿಕಾರಿಗಳೊಂದಿಗೆ ಸಭೆ ನಡೆಸಿ ರಾಜ್ಯಕ್ಕೆ ವಾಪಸಾಗಲಿದೆ.

ದಿನೇಶ್ ಗೂಳಿಗೌಡ ಶಾಸಕರು ಹಾಗೂ ಸಂಚಾಲಕರು,
ಕಾವೇರಿ ಆರತಿ ಕಾರ್ಯಕ್ರಮ

## ಕೆಎಸ್‌ಆರ್‌ಟಿಸಿಗೆ ಏಷ್ಯಾ ಪೆಸಿಫಿಕ್ ಎಚ್‌ಆರ್‌ಎಂ ಕಾಂಗ್ರೆಸ್-2024ರ ಗೋಲ್ಡನ್ ಸ್ಟಾರ್ ಪ್ರಶಸ್ತಿ



**ಬೆಂಗಳೂರು,ಸೆ.19:** ನಿಗಮದ ಅತ್ಯುತ್ತಮ ಮಾನವ ಸಂಪನ್ಮೂಲ ಉಪಕ್ರಮಕ್ಕಾಗಿ ಏಷ್ಯಾ ಪೆಸಿಫಿಕ್ ಎಚ್‌ಆರ್‌ಎಂ ಕಾಂಗ್ರೆಸ್ ಪ್ರಶಸ್ತಿ ಮತ್ತು ನಿಗಮದ ಪ್ರತಿಷ್ಠಿತ ಬ್ರ್ಯಾಂಡಿಂಗ್ ಉಪಕ್ರಮಗಳಿಗಾಗಿ ಗೋಲ್ಡನ್ ಸ್ಟಾರ್ ಪ್ರಶಸ್ತಿ ಲಭಿಸಿದೆ.

ಗುರುವಾರ ಬೆಂಗಳೂರಿನ ಹೋಟೆಲ್ ತಾಜ್‌ನಲ್ಲಿ ನಡೆದ ಪ್ರಶಸ್ತಿ ಸಮಾರಂಭದಲ್ಲಿ ಪ್ರೊಫೆಸರ್ ಡಾ.ರಾಮಪ್ರಸಾದ್ ಬ್ಯಾನರ್ಜಿಯವರು, EIILM, ಕೊಲ್ಕತ್ತ, ಸಂಜಯ್ ರಾಮದಾಸ್ ಕಾಮತ್, ಹಿರಿಯ ಉಪಾಧ್ಯಕ್ಷರು ಮತ್ತು ಬಿಸಿನೆಸ್ ಮುಖ್ಯಸ್ಥರು, SASIA ರವರು, ನಿಗಮಕ್ಕೆ ಪ್ರಶಸ್ತಿ ಪ್ರದಾನ ಮಾಡಿದರು.

ಸೋಮಶೇಖರ್, ಕಾರ್ಯನಿರ್ವಾಹಕ ಅಭಿಯಂತರರು, ನರಸಿಂಹ ವರ್ಮ.ವಿ, ಕಾನೂನು ಅಧಿಕಾರಿ, ಸತೀಶ್ ಕುಮಾರ್.ಎನ್, ವಿಭಾಗೀಯ ಸಂಚಾರ ಅಧಿಕಾರಿ ಮತ್ತು ಚಂದ್ರೇಗೌಡ ಎ.ಜಿ, ಭದ್ರತಾ ಮತ್ತು ಜಾಗೃತಾಧಿಕಾರಿ, ಕೆ.ಎಸ್.ಆರ್.ಟಿ.ಸಿ ಅವರು ನಿಗಮದ ಪರವಾಗಿ ಪ್ರಶಸ್ತಿಯನ್ನು ಸ್ವೀಕರಿಸಿದರು.

## ರಾಜ್ಯಪಾಲರ ಅಧಿಕಾರ ಕಿತ್ತುಕೊಳ್ಳುವ ಸಂಚು: ಅಶೋಕ್




**ದೊಡ್ಡಬಳ್ಳಾಪುರ,ಸೆ19:** ಕರ್ನಾಟಕದಲ್ಲಿ ತುರ್ತು ಪರಿಸ್ಥಿತಿ ಸೃಷ್ಟಿಯಾಗಿದ್ದು, ಪೊಲೀಸರನ್ನು ದುರ್ಬಳಕೆ ಮಾಡಿಕೊಳ್ಳಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ದೂರಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಾ.ಕೆ.ಸುಧಾಕರ್ ಅವರು ಕೋವಿಡ್ ಸಂದರ್ಭದಲ್ಲಿ ಕೆಲಸ ಮಾಡಿದ್ದರು. ಆ ಸಮಯದಲ್ಲಿ ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಮನೆಯಲ್ಲೇ ಕುಳಿತಿದ್ದರು. ಆದರೆ ಈಗ ಅವರ ವಿರುದ್ಧ ಕೋವಿಡ್ ಹಗರಣದ ಆರೋಪ ಹೊರಿಸಲಾಗಿದೆ. ರಾಜ್ಯಪಾಲರ ಮೇಲೆ ಸರ್ಕಾರ ಸೇಡು ತೀರಿಸಿಕೊಳ್ಳಲು ಸರ್ಕಾರ ಮುಂದಾಗಿದ್ದು, ವಿಶ್ವವಿದ್ಯಾಲಯದಲ್ಲಿ ಅವರ ಅಧಿಕಾರ ಕಿತ್ತುಕೊಳ್ಳಲು ಪ್ರಯತ್ನ ನಡೆಸಲಾಗಿದೆ. ಕಾಂಗ್ರೆಸ್ ಶಾಶ್ವತವಾಗಿ ಅಧಿಕಾರದಲ್ಲಿ ಇರಲಿದೆ ಎಂಬ ಚಿಂತನೆಯಲ್ಲಿದೆ. ಕಾಂಗ್ರೆಸ್ ಮಾಡುವ ಪಾಪಕ್ಕೆ ಮುಂದಿನ ದಿನಗಳಲ್ಲಿ ಪಶ್ಚಾತ್ತಾಪ ಪಡಬೇಕಾಗುತ್ತದೆ ಎಂದು ಹೇಳಿದರು.

ಶಾಸಕ ಮುನಿರತ್ನ ಬಿಜೆಪಿಗೆ ಮುನ್ನ ಕಾಂಗ್ರೆಸ್‌ನಲ್ಲೇ ಇದ್ದರು. ಅವರು ಪಕ್ಷದಲ್ಲಿದ್ದಾಗ ಕಾಂಗ್ರೆಸ್ ನಾಯಕರೇ ಅವರನ್ನು ಬೆಂಬಲಿಸಿದ್ದರು. ರಾಯಚೂರಿನಲ್ಲಿ ಪಿಎಸ್‌ಐ ಕುಟುಂಬದವರು 16 ಗಂಟೆ ಬೀದಿಯಲ್ಲಿ ಕುಳಿತು ಪ್ರತಿಭಟನೆ ಮಾಡಿದಾಗ ಶಾಸಕರನ್ನು ಬಂಧಿಸಲಿಲ್ಲ. ಕೃಷಿ ಅಧಿಕಾರಿ ವೀಡಿಯೋ ಮಾಡಿ ಕಳುಹಿಸಿದಾಗ ಸಚಿವರನ್ನು ಬಂಧನ ಮಾಡಿಲ್ಲ. ಮುನಿರತ್ನ ತಪ್ಪು ಮಾಡಿದ್ದರೆ ಅವರ ವಿರುದ್ಧ ಕ್ರಮ ಕೈಗೊಳ್ಳಲಿ. ಅದನ್ನು ಬಿಟ್ಟು ಏಕಾಏಕಿ ಬಂಧಿಸಿದ್ದು ಏಕೆ ಎಂದು ಪ್ರಶ್ನೆ ಮಾಡಿದರು.

ಸಿದ್ದರಾಮಯ್ಯ ಈ ಹಿಂದೆ ಸಿಎಂ ಆಗಿದ್ದಾಗ ಅವರ ವಿರುದ್ಧ 65 ಪ್ರಕರಣಗಳಿತ್ತು. ಆದರೆ ಅವರು ಮಾತ್ರ ಶುದ್ಧ ಎನ್ನಲಾಗುತ್ತದೆ. ಬಿಜೆಪಿಯವರು ಸಂವಿಧಾನದ ಬಗ್ಗೆ ಸಣ್ಣ ಮಾತು ಹೇಳಿದ್ದಕ್ಕೆ, ಅದನ್ನೇ ದೊಡ್ಡ ಸಮಸ್ಯೆ ಎಂಬಂತೆ ಬಿಂಬಿಸಲಾಗಿದೆ. ರಾಹುಲ್ ಗಾಂಧಿ ವಿದೇಶಕ್ಕೆ ಹೋಗಿ ಮೀಸಲು ಬದಲಾಯಿಸುವ ಬಗ್ಗೆ ಮಾತನಾಡಿದ್ದರು. ಈ ಕುರಿತು ಕಾಂಗ್ರೆಸ್ ಪ್ರತಿಭಟನೆ ಮಾಡಲಿ ಎಂದರು.

**ಸೋಲುವ ಭಯ**

ಜವಹರಲಾಲ್ ನೆಹರೂ ಅಧಿಕಾರದಲ್ಲಿದ್ದಾಗ ಏಕಕಾಲಕ್ಕೆ ಚುನಾವಣೆ ನಡೆಯುತ್ತಿತ್ತು. ಈಗ ಅದನ್ನೇ ಎನ್‌ಡಿಎ ಸರ್ಕಾರ ಮಾಡಲು ಹೊರಟರೆ ತಪ್ಪು ಎನ್ನಲಾಗುತ್ತಿದೆ. ಇಡೀ ವರ್ಷ ಚುನಾವಣೆ ನಡೆಯುವುದನ್ನು ತಪ್ಪಿಸಲು ಒಂದೇ ಬಾರಿಗೆ ಚುನಾವಣೆ ನಡೆಸಲು ಕೇಂದ್ರ ಸರ್ಕಾರ ಮುಂದಾಗಿದೆ. ಇದರಿಂದ ಉಳಿತಾಯವಾದ ಹಣವನ್ನು ಅಭಿವೃದ್ಧಿ ಕಾರ್ಯಗಳಿಗೆ ಬಳಸಬಹುದು. ಆದರೆ ಈ ರೀತಿ ಮಾಡಿದರೆ ಸೋಲುತ್ತೇವೆ ಎಂಬ ಭಯ ಕಾಂಗ್ರೆಸ್. ಆದ್ದರಿಂದ ಈ ಹೊಸ ವ್ಯವಸ್ಥೆಯನ್ನು ಕಾಂಗ್ರೆಸ್ ನಾಯಕರು ವಿರೋಧಿಸುತ್ತಿದ್ದಾರೆ ಎಂದರು.

**ಬಿಜೆಪಿ ಸದಸ್ಯತ್ವ ಅಭಿಯಾನ**

ಬಿಜೆಪಿ ಸದಸ್ಯತ್ವ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದ ಆರ್.ಅಶೋಕ, ಬಿಜೆಪಿ ಅತಿ ಹೆಚ್ಚು ಸದಸ್ಯರನ್ನು ಹೊಂದಿದ್ದು, ಈಗ ಸದಸ್ಯತ್ವ ಅಭಿಯಾನ ಮಾಡಲಾಗುತ್ತಿದೆ. ಬಿಜೆಪಿ ಪಕ್ಷ ಎಂದರೆ ದೇವಾಲಯ ಇದ್ದಂತೆ. ಇಲ್ಲಿ ಕಾರ್ಯಕರ್ತರಿಗೆ ಹೆಚ್ಚು ಅವಕಾಶವಿದೆ. ಎಲ್ಲ ಕಾರ್ಯಕರ್ತರು ನಿಗದಿತ ಗುರಿ ಇಟ್ಟುಕೊಂಡು ಜನರನ್ನು ಪಕ್ಷಕ್ಕೆ ಸೇರಿಸಬೇಕು. ಅನೇಕ ಸಲ ಕಾರ್ಯಕರ್ತರ ಕುಟುಂಬದವರೇ ಸದಸ್ಯರಾಗಿ ಪಕ್ಷಕ್ಕೆ ಸೇರಿರುವುದಿಲ್ಲ. ಅಂತಹ ಕಡೆ ಗಮನಿಸಿ ಪಕ್ಷಕ್ಕೆ ಹೆಸರು ನೋಂದಾಯಿಸಬೇಕು ಎಂದು ಕಿವಿಮಾತು ಹೇಳಿದರು. ಹೊಸಕೆರೆಹಳ್ಳಿಯ ವಿಶೇಷ ಚೇತನ ಕಾರ್ಯಕರ್ತೆಯೊಬ್ಬರು ಒಂದೇ ದಿನದಲ್ಲಿ 940 ಜನರನ್ನು ಸದಸ್ಯರಾಗಿ ಪಕ್ಷಕ್ಕೆ ಸೇರಿಸಿದ್ದಾರೆ. ಅವರು ಒಂದು ಸಾವಿರ ಗುರಿ ತಲುಪುವುದಾಗಿ ಹೇಳಿದ್ದರು. ಇದನ್ನು ಸ್ಫೂರ್ತಿಯಾಗಿ ತೆಗೆದುಕೊಂಡು ಸದಸ್ಯತ್ವ ಅಭಿಯಾನ ಮಾಡಬೇಕು. ಬೂತ್ ಮಟ್ಟದಲ್ಲಿ ಐದು ಜನರನ್ನು ಸದಸ್ಯತ್ವ ಅಭಿಯಾನಕ್ಕಾಗಿ ಕೆಲಸ ಮಾಡಲು ನಿಯೋಜಿಸಬೇಕು.

## ಪ್ರಕೃತಿ, ಪರಿಸರ, ಜೀವನೋಪಾಯ ಮುಖ್ಯ: ಖಂಡ್ರೆ

**ಬೆಂಗಳೂರು, ಸೆ.19:** ಪ್ರಕೃತಿ, ಪರಿಸರವೂ ಉಳಿಯಬೇಕು, ಜೀವನ, ಜೀವನೋಪಾಯವೂ ನಡೆಯಬೇಕು ಈ ನಿಟ್ಟಿನಲ್ಲಿ ಪಶ್ಚಿಮಘಟ್ಟದ ಪರಿಸರ ಸೂಕ್ಷ್ಮ ಪ್ರದೇಶ ಘೋಷಣೆ ಕುರಿತಂತೆ ರಾಜ್ಯ ಸರ್ಕಾರ ವಿವೇಚನಾತ್ಮಕ ನಿರ್ಧಾರ ಕೈಗೊಳ್ಳುವ ಅಗತ್ಯವಿದೆ ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಪ್ರತಿಪಾದಿಸಿದ್ದಾರೆ.



ವಿಧಾನಸೌಧದ ಸಮಿತಿ ಕೊಠಡಿಯಲ್ಲಿಂದು ನಡೆದ ಪಶ್ಚಿಮಘಟ್ಟ ವ್ಯಾಪ್ತಿಯ 11 ಜಿಲ್ಲೆಗಳ ಜನಪ್ರತಿನಿಧಿಗಳ (ಬಾಧ್ಯಸ್ಥರ) ಮಹತ್ವದ ಸಭೆಯಲ್ಲಿ ಮಾತನಾಡಿದ ಅವರು, ಪಶ್ಚಿಮ ಘಟ್ಟ ಪರಿಸರ ಸೂಕ್ಷ್ಮ ಪ್ರದೇಶ ಕುರಿತಂತೆ ಕಸ್ತೂರಿ ರಂಗನ್ ಸಮಿತಿ ನೀಡಿರುವ ವರದಿಯ ಶಿಫಾರಸುಗಳ ಅನುಷ್ಠಾನಕ್ಕೆ ತರುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಕಳೆದ ಆಗಸ್ಟ್ 2ರಂದು 6ನೇ ಅಧಿಸೂಚನೆ ಹೊರಡಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯದ ನಿಲುವನ್ನು ಕೇಂದ್ರ ಸರ್ಕಾರಕ್ಕೆ ಈ ಮಾಸಾಂತ್ಯದೊಳಗೆ ಕಳುಹಿಸಲೇಬೇಕು ಎಂದರು. ರಾಜ್ಯ ಸರ್ಕಾರ ಕಸ್ತೂರಿ ರಂಗನ್ ವರದಿ ವಿಚಾರದಲ್ಲಿ ಈಗಾಗಲೇ ತನ್ನ ನಿಲುವನ್ನು ಕೇಂದ್ರಕ್ಕೆ ಹಲವು ಬಾರಿ ಸ್ಪಷ್ಟಪಡಿಸಿದೆ ಎಂದರು. ಪಶ್ಚಿಮಘಟ್ಟ ವ್ಯಾಪ್ತಿಯ 11 ಜಿಲ್ಲೆಗಳ ಜನಪ್ರತಿನಿಧಿಗಳೊಂದಿಗೆ ಚರ್ಚಿಸಿ ಎಲ್ಲರ ಅಭಿಪ್ರಾಯ ಪಡೆದು, ನಂತರ ಸಂಪುಟ ಉಪ ಸಮಿತಿ ಸಭೆಯಲ್ಲಿ ಚರ್ಚಿಸಿ, ಬಳಿಕ ಮುಖ್ಯಮಂತ್ರಿಗಳೊಂದಿಗೆ ಸಮಾಲೋಚಿಸಿ, ಸಚಿವ ಸಂಪುಟದಲ್ಲಿ ಅನುಮೋದನೆ ಪಡೆದು ಕೇಂದ್ರ ಸರ್ಕಾರಕ್ಕೆ ನಮ್ಮ ನಿಲುವು ತಿಳಿಸಲಾಗುವುದು ಎಂದು ಈಶ್ವರ ಖಂಡ್ರೆ ಸಭೆಗೆ ಸ್ಪಷ್ಟಪಡಿಸಿದರು. ಸಭೆಯಲ್ಲಿ ಸಚಿವರುಗಳಾದ ಕೆ.ಜೆ.ಜಾರ್ಜ್, ಡಾ.ಎಚ್.ಸಿ. ಮಹದೇವಪ್ಪ, ಸತೀಶ್ ಜಾರಕಿಹೋಳಿ, ಮಧು ಬಂಗಾರಪ್ಪ, ಮಾಂಕಾಳ ವೈದ್ಯ, ವಿಧಾನಪರಿಷತ್ ಉಪ ಸಭಾಪತಿ ಪ್ರಾಣೇಶ್, ಶಾಸಕರು, ಸಂಸದರು, ಅಧಿಕಾರಿಗಳು ಪಾಲ್ಗೊಂಡಿದ್ದರು.



ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಜಿಲ್ಲಾಶಾಖೆ ಹಾವೇರಿ ವತಿಯಿಂದ ಜಿಲ್ಲಾಧ್ಯಕ್ಷ ಅಮೃತಗೌಡ ಬ ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಅಭಿನಂದನ ಸಭೆ ಅದ್ದೂರಿಯಾಗಿ ನಡೆಯಿತು. ಜಿಲ್ಲಾ ಪದಾಧಿಕಾರಿಗಳು ಹಾಗೂ ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯರು, ನಾಮ ನಿರ್ದೇಶಿತ ಸದಸ್ಯರು ಮತ್ತು ತಾಲೂಕು ಅಧ್ಯಕ್ಷರು ಹಾಗೂ ತಾಲೂಕು ಪದಾಧಿಕಾರಿಗಳು ಹಾಜರಿದ್ದರು.


# ಮಾಜಿ ಸಿಎಂಗಳಿಂದ ಸತ್ತವರ ಹೆಸರಲ್ಲಿ ಡಿನೋಟಿಫೈ, ನೂರಾರು ಕೋಟಿ ಮೌಲ್ಯದ ಸರ್ಕಾರಿ ಜಮೀನು ಎತ್ತುವಳಿ: ಸಚಿವ ಕೃಷ್ಣ ಬೈರೇಗೌಡ

**ಬೆಂಗಳೂರು.ಸೆ,19:** ಬೆಂಗಳೂರು ಗಂಗೇನಹಳ್ಳಿ ಬಡಾವಣೆ ಸರ್ವೇ ನಂಬರ್ 7/1ಬಿ, 7/1 ಸಿ ಮತ್ತು 7/1 ಡಿ ರಲ್ಲಿನ 1 ಎಕರೆ 11 ಗುಂಟೆ ಸರ್ಕಾರಿ ಜಮೀನನ್ನು ಮಾಜಿ ಮುಖ್ಯಮಂತ್ರಿಗಳಾದ ಕುಮಾರಸ್ವಾಮಿ ಹಾಗೂ ಯಡಿಯೂರಪ್ಪ ಜಂಟಿಯಾಗಿ ಸತ್ತವರ ಹೆಸರಲ್ಲಿ ಡಿನೋಟಿಫೈ ಮಾಡಿ ಕುಮಾರಸ್ವಾಮಿ ಅವರ ಬಾಮೈದನ ಹೆಸರಲ್ಲಿ ನೋಂದಣಿ ಮಾಡಿದ್ದಾರೆ. ಈ ಮೂಲಕ ಸಾರ್ವಜನಿಕರ ಸ್ವತ್ತನ್ನು ಪೂರ್ವಾಲೋಚನೆ ಮಾಡಿ ತಂತ್ರಗಾರಿಕೆಯಿಂದ ವ್ಯವಸ್ಥಿತವಾಗಿ ಲೂಟಿ ಮಾಡಿದ್ದಾರೆ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಸೂಕ್ತ ದಾಖಲೆಗಳ ಸಮೇತ ಆಕ್ರೋಶ ಹೊರಹಾಕಿದರು.

ಕೆಪಿಸಿಸಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರು ಗಂಗೇನಹಳ್ಳಿ ಗ್ರಾಮದ ಸರ್ವೇ ನಂಬರ್ 7/1ಬಿ, 7/1 ಸಿ ಮತ್ತು 7/1 ಡಿ ರಲ್ಲಿನ 1 ಎಕರೆ 11 ಗುಂಟೆ ಜಮೀನನ್ನು ಬಡಾವಣೆ ನಿರ್ಮಾಣಕ್ಕಾಗಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) 1976 ರಲ್ಲೇ ಭೂಸ್ವಾಧೀನ ಮಾಡಿಕೊಂಡಿದೆ. 1976 ರಲ್ಲಿ ಆರಂಭವಾದ ಭೂಸ್ವಾಧೀನ ಪ್ರಕ್ರಿಯೆ 1978ರಲ್ಲಿ ಮುಗಿದಿದೆ. ಆದರೆ, ಎಚ್.ಡಿ. ಕುಮಾರಸ್ವಾಮಿಯವರು ಮುಖ್ಯಮಂತ್ರಿಯಾಗಿದ್ದಾಗ ತನಗೆ ಸಂಬಂಧವೇ ಇಲ್ಲದ ಈ ಪ್ರಕರಣದಲ್ಲಿ ಅತ್ಯುತ್ಸಾಹ ತೋರಿದ್ದು ಏಕೆ ಎಂದು ಕಟುವಾಗಿ ಪ್ರಶ್ನಿಸಿದರು.

ಜಮೀನಿನ ವಾರಸುದಾರರಿಗೆ ಸಂಬಂಧವೇ ಇಲ್ಲದ ದಾರಿಯಲ್ಲಿ ಹೋಗೋ ದಾಸಯ್ಯ, ಯಾರೋ ಬೇನಾಮಿ ವ್ಯಕ್ತಿ ರಾಜಶೇಖರಯ್ಯ ಎಂಬವರು 1978ರಲ್ಲಿ ಭೂ ಸ್ವಾಧೀನಗೊಂಡ ಜಮೀನಿಗೆ ಡಿನೋಟಿಫೈ ಮಾಡಲು 2007ರಲ್ಲಿ ಸಿಎಂ ಕುಮಾರಸ್ವಾಮಿಯವರಿಗೆ ಅರ್ಜಿ ಹಾಕಿದ್ದಾರೆ. ಅಸಲಿಗೆ ರಾಜಶೇಖರಯ್ಯನಿಗೂ ಜಮೀನಿಗೂ ಸಂಬಂಧವೇ ಇಲ್ಲ. ಈತ ಯಾರು ಅಂತ ಈವರೆಗೆ ಗೊತ್ತಿಲ್ಲ. ಆದರೆ, ಈ ಅರ್ಜಿ ಬಂದ ಕೂಡಲೇ ಕುಮಾರಸ್ವಾಮಿಯವರು ಅದೇ ದಿನ ಅಧಿಕಾರಿಗಳಿಗೆ ಪತ್ರ ಬರೆದು ಈ ಅರ್ಜಿ ಮೇಲೆ ಕ್ರಮ ಕೈಗೊಳ್ಳಲು ಸೂಚಿಸುತ್ತಾರೆ. ಆದರೆ, ಅಧಿಕಾರಿಗಳು 1976ರಲ್ಲಿ ಆರಂಭಗೊಂಡ ಈ ಜಮೀನಿನ ಭೂ ಸ್ವಾಧೀನ ಪ್ರಕ್ರಿಯೆ 1978 ರಲ್ಲಿ ಮುಗಿದಿದೆ. ಹೀಗಾಗಿ ಭೂಸ್ವಾಧೀನ ಮಾಡಲು ಬರಲ್ಲ ಎಂದು ಸ್ಪಷ್ಟವಾಗಿ ಉತ್ತರಿಸಿದ್ದರು. ಆದರೂ, ಈ ವಿಚಾರವನ್ನು ಕೈಬಿಡದ ಕುಮಾರಸ್ವಾಮಿಯವರು ಈ ಬಗ್ಗೆ ಮತ್ತೊಮ್ಮೆ ಚರ್ಚಿಸಿ ಕಾನೂನು ಪ್ರಕಾರ ಕ್ರಮ ವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದ್ದು ಏಕೆ ಎಂದು ಸಚಿವ ಕೃಷ್ಣ ಬೈರೇಗೌಡ ಕುಟುಕಿದರು.

ಮುಂದುವರೆದು, ಇದೇ ಸಂದರ್ಭದಲ್ಲಿ ಈ ಜಮೀನಿನ ಅಸಲಿ ಮಾಲೀಕರಾದ 21 ಜನರ ಜೊತೆ ಕುಮಾರಸ್ವಾಮಿಯವರ ಅತ್ತೆಯವರು ಜಿಪಿಎ ಮಾಡಿಕೊಳ್ತಾರೆ. ಇದಾದ ಮೇಲೆ ಅಧಿಕಾರ ಹೊಂದಾಣಿಕೆ ಸಮಸ್ಯೆಯಿಂದ ಬಿಜೆಪಿ-ಜೆಡಿಎಸ್ ಸಮ್ಮಿಶ್ರ ಸರ್ಕಾರ ಉರುಳಿ ಕುಮಾರಸ್ವಾಮಿ ರಾಜೀನಾಮೆ ನೀಡ್ತಾರೆ. ಆನಂತರ ಯಡಿಯೂರಪ್ಪನವರು ಸಿಎಂ ಆಗ್ತಾರೆ. ಆದರೆ, ಅಲ್ಲಿಯವರೆಗೆ ಹಾವು ಮುಂಗಸಿಯಂತೆ ಪರಸ್ಪರ ಕೆಸರೆರಚಾಟದಲ್ಲಿ ತೊಡಗಿದ್ದರೂ ಸಹ ಇದೇ ಅರ್ಜಿ ಮೇಲೆ ಕ್ರಮವಹಿಸಲು ಯಡಿಯೂರಪ್ಪನವರು ಅಧಿಕಾರಿಗಳಿಗೆ ಸೂಚಿಸಿದ್ದು ಏಕೆ ಎಂದೂ ಸಚಿವ ಕೃಷ್ಣ ಬೈರೇಗೌಡ ಅವರು ಪ್ರಶ್ನಿಸಿದರು.



ಅಂದಿನ ಯಡಿಯೂರಪ್ಪನವರ ಸೂಚನೆಗೆ ಸ್ಪಷ್ಟವಾಗಿ ಉತ್ತರಿಸಿದ್ದ ಇಲಾಖೆ ಪ್ರಧಾನ ಕಾರ್ಯದರ್ಶಿಗಳಾದ ಜ್ಯೋತಿರಾಮಲಿಂಗಂ ಗಂಗೇನಹಳ್ಳಿ ಬಡಾವಣೆಯ ಸರ್ವೇ ನಂಬರ್ 7/1ಬಿ, 7/1 ಸಿ ಮತ್ತು 7/1 ಡಿ ರಲ್ಲಿನ 1 ಎಕರೆ 11 ಗುಂಟೆ ಜಮೀನನ್ನು16/2 ಅನ್ವಯ ಈಗಾಗಲೇ ಭೂ ಸ್ವಾಧೀನ ಮಾಡಿಕೊಳ್ಳಲಾಗಿದೆ. ಹೀಗಾಗಿ ಡಿನೋಟಿಫೈ ಮಾಡಲು ಸಾಧ್ಯವಿಲ್ಲ ಎಂದು ಬರೆದಿದ್ದರು. ಆದರೆ, ಯಡಿಯೂರಪ್ಪನವರು ಪ್ರಧಾನ ಕಾರ್ಯದರ್ಶಿಗಳ ಅಭಿಪ್ರಾಯ ಗಾಳಿಗೆ ತೂರಿ ಸಂಬಂಧಿತ ಫೈಲ್ ಮೇಲೆ ಭೂಸ್ವಾಧೀನ ಕೈಬಿಡಲು ಆದೇಶಿಸಿದೆ ಎಂದು ಬರೆದಿದ್ದಾರೆ. 1978 ರಲ್ಲಿ ಭೂ ಸ್ವಾಧೀನ ಆಗಿರುವ ಜಮೀನಿಗೆ 2009-10 ರಲ್ಲಿ ಡಿನೋಟಿಫೈ ಮಾಡಿದ್ದಾರೆ ಎಂದು ದಾಖಲೆಗಳ ಸಮೇತ ಅವರು ಆರೋಪಿಸಿದರು. ಮುಂದುವರೆದು, ಇದು ಕಾಕತಾಳೀಯ ಅಂತಿರೋ ವ್ಯವಸ್ಥಿತ, ಪ್ರಾಯೋಜಿತ ಆಲೋಚಿತ ಅಕ್ರಮ ಅಂತಿರೋ ದರೋಡೆ ಅಂತಿರೋ, ಒಟ್ಟಾರೆ 1 ಎಕರೆ 11 ಗುಂಟೆ ಜಮೀನನ್ನು ಯಡಿಯೂರಪ್ಪ ಅವರನ್ನು ಉಪಯೋಗಿಸಿಕೊಂಡು ಡಿನೋಟಿಫೈ ಮಾಡಿಕೊಳ್ಳಲಾಗುತ್ತೆ. ಯಾರ ಜಮೀನಿಗೆ ಡಿನೋಟಿಫೈ ಆಗಿತ್ತು ಆತ ಸತ್ತೇ ಹೋಗಿದ್ದ, ಮೃತಪಟ್ಟವನ ಹೆಸರಿಗೆ ಡಿನೋಟಿಫೈ ಮಾಡಿದ್ದಾರೆ. ಸತ್ತೋದವನಿಂದ ಕುಮಾರಸ್ವಾಮಿಯವರ ಅತ್ತೆ ಹೆಸರಿಗೆ ಜಿಪಿಎ ಮಾಡಲಾಗಿದೆ. ಅವರಿಂದ ಕುಮಾರಸ್ವಾಮಿ ಅವರ ಭಾವಮೈದುನನಿಗೆ ನೋಂದಣಿ ಮಾಡಿಕೊಡಲಾಗಿದೆ. ನೂರಾರು ಕೋಟಿ ಮೌಲ್ಯ ಇರುವ ಬಡವರಿಗೆ ನಿವೇಶನಗಳನ್ನು ಕಲ್ಪಿಸಬೇಕಾದ ಸ್ವತ್ತು, ಸರ್ಕಾರ ಭೂ ಸ್ವಾಧೀನ ಮಾಡಿ ಮುಗಿಸಿದ್ದ ಜಮೀನು ಹೀಗೆ ಅಕ್ರಮವಾಗಿ ಇಬ್ಬರು ಮಾಜಿ ಸಿಎಂಗಳ ಜಂಟಿ ಕಾರ್ಯಾಚರಣೆಯಿಂದ ಕಬಳಿಕೆಯಾಗಿದೆ.

ಸರ್ಕಾರದ ಆದೇಶದ ಪ್ರತಿಯ ಮೇಲೆ ಅಂದಿನ ಸಿಎಂ ಯಡಿಯೂರಪ್ಪ ಅವರ ಕೈ ಬರಹ ಸ್ಪಷ್ಟವಾಗಿದೆ. ಕುಮಾರಸ್ವಾಮಿ ಸಿಎಂ ಆಗಿದ್ದಾಗ ಆದೇಶಿಸಿದ್ದನ್ನು ಯಡಿಯೂರಪ್ಪ ಡಿನೋಟಿಫೈ ಮಾಡಿದ್ದಾರೆ. ಜಮೀನು ಕುಮಾರಸ್ವಾಮಿ ಅವರ ಭಾವಮೈದುನನ ಪಾಲಾಗಿದೆ. ಈ ಇಬ್ಬರೂ ಸೇರಿ ಬಡವರ ಆಸ್ತಿ ಲಪಟಾಯಿಸಿರುವುದು ಕರ್ನಾಟಕದ ಜನರಗೆ ಮಾಡಿದ ಅನ್ಯಾಯ ಮೋಸ ಅಲ್ವ ಇದು ವ್ಯವಸ್ಥಿತ ವಂಚನೆ ಹೌದ ಅಲ್ವ ಇದು ಸಾರ್ವಜನಿಕರ ಸ್ವತ್ತನ್ನು ಪೂರ್ವಾಲೋಚನೆ ಮಾಡಿ ತಂತ್ರಗಾರಿಕೆ ಮಾಡಿ ವ್ಯವಸ್ಥಿತವಾಗಿ ಲೂಟಿ ಮಾಡಿರುವ ಪ್ರಕರಣ ಎಂದು ಸಚಿವ ಕೃಷ್ಣ ಬೈರೇಗೌಡ ಅವರು ಆಕ್ರೋಶ ಹೊರಹಾಕಿದರು. ಅಲ್ಲದೆ, ಈ ಪ್ರಕರಣದ ವಿರುದ್ಧ ಲೋಕಾಯುಕ್ತ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಈ ತನಿಖೆಯನ್ನು ವಜಾ ಮಾಡುವಂತೆ ಯಡಿಯೂರಪ್ಪನವರು ಹೈಕೋರ್ಟ್ ಮೊರೆ ಹೋಗಿದ್ದರು. ಹೈಕೋರ್ಟ್‌ನಲ್ಲಿ ಅಪೀಲು ವಜಾ ಆಗಿ 25,000 ದಂಡ ಹಾಕಿದ್ದಾರೆ. ಹೀಗಾಗಿ ಲೋಕಾಯುಕ್ತ ತತಕ್ಷಣ ಈ ಪ್ರಕರಣದ ತನಿಖೆ ಪೂರೈಸಿ ಈ ಬಗ್ಗೆ ವರದಿ ನೀಡಬೇಕು, ತಪ್ಪು ಮಾಡಿದವರಿಗೆ ಶಿಕ್ಷೆಯಾಗಬೇಕು ಎಂದು ಆಗ್ರಹಿಸಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಸಚಿವರಾದ ದಿನೇಶ್ ಗುಂಡೂರಾವ್ ಹಾಗೂ ಸಂತೋಷ್ ಲಾಡ್ ಉಪಸ್ಥಿತರಿದ್ದರು.

**ಅಕ್ರಮದಲ್ಲಿ ಕುಮಾರಸ್ವಾಮಿ-ಯಡಿಯೂರಪ್ಪ ಜಂಟಿಯಾಗಿ ಬಾಗಿ**

**ಕುಮಾರಸ್ವಾಮಿ ಆದೇಶ ಯಡಿಯೂರಪ್ಪ ಅವಧಿಯಲ್ಲಿ ಡಿನೋಟಿಫೈ**

**ಕುಮಾರಸ್ವಾಮಿ ಬಾಮೈದನ ಪಾಲಾದ ನೂರಾರು ಕೋಟಿ ಮೌಲ್ಯದ ಆಸ್ತಿ**

**ಬಡವರ ನಿವೇಶನಗಳಿಗೆ ಹಂಚಿಕೆಯಾಗಿದ್ದ ಜಮೀನಿನ ವ್ಯವಸ್ಥಿತ ಲೂಟಿ**

**ಅಧಿಕಾರಿಗಳ ಅಭಿಪ್ರಾಯ ಧಿಕ್ಕರಿಸಿ ಡಿನೋಟಿಫೈ ಮಾಡಿದ ಯಡಿಯೂರಪ್ಪ**

# ತಿಂಗಳ ಸೊಬಗು ಸಾಂಸ್ಕೃತಿಕ ಕಾರ್ಯಕ್ರಮ ನಾಳೆ




**ಬಳ್ಳಾರಿ,ಸೆ.19–** ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗು ಸಾಂಸ್ಕೃತಿಕ ಸಮುಚ್ಚಯ ನಿರ್ವಹಣಾ ಸಮಿತಿ ವತಿಯಿಂದ "ತಿಂಗಳ ಸೊಬಗು" ಸಾಂಸ್ಕೃತಿಕ ಕಾರ್ಯಕ್ರಮವನ್ನು ಸೆ.21 ರಂದು ಸಂಜೆ 6.30 ಗಂಟೆಗೆ ನಗರದ ಡಾ.ರಾಜ್‌ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯ ಆವರಣದ ನಾಡೋಜ ಸುಭದ್ರಮ್ಮ ಬಯಲು ರಂಗಮಂದಿರದಲ್ಲಿ ಆಯೋಜಿಸಲಾಗಿದೆ.

ಈ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಸರ್ಕಾರಿ ಬಾಲಕಿಯರ ಬಾಲ ಮಂದಿರ ವತಿಯಿಂದ ಜಾನಪದ ನೃತ್ಯ ಇರಲಿದೆ. ಬಳ್ಳಾರಿ ತಾಲ್ಲೂಕಿನ ಇಬ್ರಾಹಿಂಪುರ ಗ್ರಾಮದ ಎಸ್.ಹೆಚ್ ಹುಲುಗಪ್ಪ ಮತ್ತು ಸಂಗಡಿಗರು ಜಾನಪದ ಗೀತೆಗಳನ್ನು ಪ್ರಸ್ತುತ ಪಡಿಸುವರು.

ಬಳ್ಳಾರಿಯ ಶ್ರೀ ಲಕ್ಷ್ಮಿ ಕಲಾ ಟ್ರಸ್ಟ್ ವತಿಯಿಂದ ಕೂಚುಪುಡಿ ಮತ್ತು ಭರತನಾಟ್ಯ ಸಾಂಸ್ಕೃತಿಕ ಕಾರ್ಯಕ್ರಮಗಳು ಸಾದರಪಡಲಿವೆ. ಸ್ಥಳೀಯ ಮಟ್ಟದ ಕಲಾ ಪ್ರತಿಭೆಗಳನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರ "ತಿಂಗಳ ಸೊಬಗು" ಸಾಂಸ್ಕೃತಕ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಕಲಾ ಪ್ರೇಕ್ಷರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ಕೋರಿದ್ದಾರೆ.

# ಶಾಸಕ ಮುನಿರತ್ನ ವಿರುದ್ಧ ಕಾನೂನು ಕ್ರಮ: ಗೃಹಸಚಿವ ಜಿ.ಪರಮೇಶ್ವರ್

**ಬೆಂಗಳೂರು,ಸೆ.19–** ಜನಪ್ರತಿನಿಧಿಯಾಗಿ ಶಾಸಕ ಮುನಿರತ್ನ ಅವರು ಮಾಡಿರುವ ಕೃತ್ಯಗಳ ವಿರುದ್ಧ ಕಾನೂನು ಪ್ರಕಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.

ನಗರದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹಿಳೆಯೊಬ್ಬರು ದೂರು ನೀಡಿದ್ದಾರೆ. ಅದರ ಅನುಸಾರ ಪ್ರಕರಣ ದಾಖಲಾಗಿದೆ. ಸದ್ಯದ ಪರಿಸ್ಥಿತಿಯಲ್ಲಿ ನನ್ನ ಬಳಿ ಹೆಚ್ಚಿನ ಮಾಹಿತಿ ಇಲ್ಲ. ಹಾಗಾಗಿ ವ್ಯಾಪಕ ವಿವರಣೆ ನೀಡುವುದಿಲ್ಲ ಎಂದರು.

ದೂರಿನಲ್ಲಿ ನಮೂದಿಸಿರುವಂತಹ ಕೃತ್ಯ ಮಾಡುವುದನ್ನು ಯಾರೂ ಒಪ್ಪಿಕೊಳ್ಳುವುದಿಲ್ಲ. ಅದರಲ್ಲೂ ಜನಪ್ರತಿನಿದಿಗಳಾಗಿ ಕಾನೂನುಬಾಹಿರವಾಗಿ ಈ ರೀತಿ ಕೆಲಸಗಳನ್ನು ಮಾಡಿದ್ದಾರೆ ಎಂದರೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಹೇಳಿದರು.ನಾವು ಯಾವುದೇ ದ್ವೇಷದ ರಾಜಕಾರಣ ಮಾಡಿಲ್ಲ. ನಾಗಮಂಗಲದ ಗಲಭೆ ವಿಚಾರವಾಗಿ ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆಯವರು ಹಾಗೂ ಮತ್ತಿತರರು ನೀಡಿರುವ ಹೇಳಿಕೆಗಳಿಗೆ ಪ್ರತಿಕ್ರಿಯಿಸುವ ಅಗತ್ಯವಿಲ್ಲ. ನಾವು ಕಾನೂನುಬಾಹಿರವಾಗಿ ಯಾವುದನ್ನೂ ಮಾಡುವುದಿಲ್ಲ. ದ್ವೇಷ ರಾಜಕಾರಣ ನಮಗೆ ಅಗತ್ಯವೇ ಇಲ್ಲ ಎಂದರು.ಒಂದು ದೇಶ, ಒಂದು ಚುನಾವಣೆ ವಿಚಾರವಾಗಿ ಇನ್ನಷ್ಟು ವಿಚಾರಣೆ ನಡೆಯಬೇಕು. ಕನಿಷ್ಠ 2/3 ರಾಜ್ಯಗಳ ಒಪ್ಪಿಗೆ ಬೇಕು. ಮಾಜಿ ರಾಷ್ಟ್ರಪತಿ ರಮಾನಾಥ್ ಕೋವಿಂದ್ ಅವರ ಉನ್ನತಾಧಿಕಾರ ಸಮಿತಿ ವರದಿ ನೀಡಿದೆ. ಮುಂದೆ ಯಾವ ರೀತಿ ಬೆಳವಣಿಗೆ ಯಾಗಲಿದೆ ಎಂದು ಕಾದುನೋಡಬೇಕಿದೆ.



ರಾಜ್ಯದ ಅಭಿಪ್ರಾಯ ಕೇಳಿದರೆ ಅದನ್ನು ವಿಧಾನಸಭೆಯಲ್ಲಿ ಚರ್ಚಿಸಬೇಕೇ, ಸಂಪುಟದಲ್ಲಿ ವಿಶ್ಲೇಷಣೆ ನಡೆಸಿ ಸರ್ಕಾರದ ಅಭಿಪ್ರಾಯ ಹೇಳಬಹುದೇ? ಎಂದೆಲ್ಲಾ ಕುರಿತು ಚರ್ಚಿಸಲಾಗುವುದು ಎಂದರು.

ವಿಶ್ವವಿದ್ಯಾಲಯಗಳಿಗೆ ಕುಲಪತಿಗಳನ್ನು ನೇಮಿಸುವ ವಿಚಾರವಾಗಿ ಹಲವು ರಾಜ್ಯಗಳಲ್ಲಿ ಬೇರೆ ಬೇರೆ ರೀತಿಯ ವ್ಯವಸ್ಥೆಗಳಿವೆ. ಗುಜರಾತ್‌ಸರ್ಕಾರ ರಾಜ್ಯಪಾಲರನ್ನು ಕೇವಲ ಸೆರೋನಿಯಲ್ ಎಂದು ಪರಿಗಣಿಸಿದೆ. ಉಳಿದಂತೆ ಆಡಳಿತಾತಕವಾಗಿ ರಾಜ್ಯಪಾಲರು ಯಾವುದೇ ನಿರ್ಧಾರ ತೆಗೆದುಕೊಳ್ಳಲು ಅವಕಾಶ ಇಲ್ಲ. ಈ ಹಿಂದೆ ತಾವು ಉನ್ನತ ಶಿಕ್ಷಣ ಸಚಿವರಾಗಿದ್ದಾಗ ಕುಲಪತಿ ನೇಮಕದ ಅಧಿಕಾರವನ್ನು ಮೊಟಕುಗೊಳಿಸಲಾಗಿತ್ತು. ಕರ್ನಾಟಕ ಒಂದೇ ಈ ರೀತಿಯ ಕ್ರಮಗಳನ್ನು ಕೈಗೊಂಡಿಲ್ಲ. ಹಾಗಾಗಿ ಇದನ್ನು ರಾಜ್ಯಪಾಲರ ವಿರುದ್ಧದ ಸೇಡು ಎಂದು ಪರಿಗಣಿಸಲು ಸಾಧ್ಯವಿಲ್ಲ ಎಂದು ಹೇಳಿದರು.

ಅಭಿಯೋಜನೆಗೆ ಪೂರ್ವಾನುಮತಿ ಸೇರಿದಂತೆ ಹಲವಾರು ಸಂದರ್ಭಗಳಲ್ಲಿ ರಾಜ್ಯಪಾಲರು ಸರ್ಕಾರಕ್ಕೆ ಸ್ಪಷ್ಟನೆಗಳನ್ನು ಕೇಳುತ್ತಾರೆ. ಕಾಲಕಾಲಕ್ಕೆ ಆಡಳಿತ ವ್ಯವಸ್ಥೆ ಕೂಡ ಇದಕ್ಕೆ ಮಾಹಿತಿಯನ್ನು ಒದಗಿಸಲಿದೆ. ಇದರಲ್ಲಿ ಯಾವುದೇ ವಿಶೇಷಗಳಿರುವುದಿಲ್ಲ ಎಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್‌ರವರು ದೆಹಲಿಗೆ ಭೇಟಿ ನೀಡಿರುವ ವಿಚಾರ ನನಗೆ ಗೊತ್ತಿಲ್ಲ. ನಾನು ಅವರ ದೈನಂದಿನ ಪ್ರವಾಸ ಕಾರ್ಯಕ್ರಮಗಳನ್ನು ಗಮನಿಸುವುದಿಲ್ಲ. ಪಕ್ಷದ ಅಧ್ಯಕ್ಷರು ಎಂಬ ಕಾರಣಕ್ಕೆ ಹೈಕಮಾಂಡ್ ಹಲವು ಸಲಹೆ, ಸೂಚನೆಗಳನ್ನು ನೀಡುತ್ತಿರುತ್ತದೆ. ಈ ಹಿಂದೆ ತಾವು ಅಧ್ಯಕ್ಷರಾಗಿದ್ದಾಗಲೂ ಹಲವು ಬಾರಿ ದೆಹಲಿಗೆ ಹೋಗಿದ್ದೆವು ಎಂದು ಹೇಳಿದರು.

ಮಾದಕವಸ್ತುಗಳ ಹಾವಳಿಯನ್ನು ಮಟ್ಟ ಹಾಕಲು ಈ ಹಿಂದೆ 2013 ರಿಂದ 2018ರವರೆಗಿನ ಸರ್ಕಾರದಲ್ಲೂ ಹಲವು ಕ್ರಮಗಳನ್ನು ಕೈಗೊಳ್ಳಲಾಗಿತ್ತು. ಕಳೆದ ಒಂದೂವರೆ ವರ್ಷದಿಂದೀಚೆಗೆ ಸಮರೋಪಾದಿಯಲ್ಲಿ ಕ್ರಮಗಳನ್ನು ಜರುಗಿಸಲಾಗಿದೆ. ನೂರಾರು ಕೋಟಿ ರೂ. ಮಾದಕವಸ್ತುಗಳನ್ನು ಜಪ್ತಿ ಮಾಡಿ ನಾಶಪಡಿಸಲಾಗಿದ್ದು, ಪ್ರಕರಣ ದಾಖಲಿಸಲಾಗಿದೆ. ಸಾವಿರಕ್ಕೂ ಹೆಚ್ಚು ಜನರಿಗೆ ಶಿಕ್ಷೆ ಕೊಡಿಸಲಾಗಿದೆ ಎಂದರು.

### ಬಿ.ಎಸ್.ಯಡಿಯೂರಪ್ಪ ವಿರುದ್ಧದ ಪ್ರಕರಣ

# ಪೋಕ್ಸೋ ಕೇಸ್ ವಿಚಾರಣೆ ಸೆ.27ಕ್ಕೆ ಮುಂದೂಡಿದ ಹೈಕೋರ್ಟ್

**ಬೆಂಗಳೂರು, ಸೆ.19–** ಮಾಜಿ ಮುಖ್ಯಮಂತ್ರಿ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದಂತ ಪೋಕ್ಸೋ ಕೇಸಲ್ಲಿ ಮತ್ತೆ ತಾತ್ಕಾಲಿಕ ರಿಲೀಫ್ ಸಿಕ್ಕಿದೆ. ಅವರ ವಿರುದ್ಧದ ಪೋಕ್ಸೋ ಕೇಸ್ ವಿಚಾರಣೆಯನ್ನು ಹೈಕೋರ್ಟ್ ಸೆಪ್ಟೆಂಬರ್.27ಕ್ಕೆ ಮುಂದೂಡಿದೆ.



ಇಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ವಿರುದ್ಧ ದಾಖಲಾಗಿದ್ದಂತ ಪೋಕ್ಸೋ ಕೇಸ್‌ನಲ್ಲಿ ಜಾಮೀನು ಕೋರಿ ಸಲ್ಲಿಸಿದ್ದಂತ ಅರ್ಜಿಯ ವಿಚಾರಣೆಯನ್ನು ಕರ್ನಾಟಕ ಹೈಕೋರ್ಟ್ ನ್ಯಾಯಪೀಠವು ನಡೆಸಿತು. ಇಂದು ಕೂಡ ಅರ್ಜಿಯ ವಿಚಾರಣೆಯನ್ನು ಕೋರ್ಟ್ ಸೆ.27ಕ್ಕೆ ಮುಂದೂಡಿದೆ.

ಈ ಮೂಲಕ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪಗೆ ತಾತ್ಕಾಲಿಕ ರಿಲೀಫ್ ನೀಡಿದೆ.ಅಂದಹಾಗೇ ಸಹಾಯ ಕೋರಿ ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ನಿವಾಸಕ್ಕೆ ತಾಯಿ ಮಗಳು ಭೇಟಿ ನೀಡಿದ್ದಂತ ಸಂದರ್ಭದಲ್ಲಿ ಅಪ್ರಾಪ್ತ ವಯಸ್ಸಿನ ಪುತ್ರಿಗೆ ಲೈಂಗಿಕ ಕಿರುಕುಳ ನೀಡಿದ್ದಾರೆ ಎಂಬುದಾಗಿ ಆರೋಪಿಸಿ ಅವರ ತಾಯಿ ಮಾ.14, 2024ರಂದು ದೂರು ನೀಡಿದ್ದರು. ಈ ದೂರು ಆಧರಿಸಿ ಬಿಎಸ್‌ವೈ ವಿರುದ್ಧ ಪೋಕ್ಸೋ ಕೇಸ್ ದಾಖಲಾಗಿತ್ತು.

### ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ್ದನ್ನು ಸುಳ್ಳು ಎಂದ ಸಚಿವರ ವಿರುದ್ಧ ಎಫ್‌ಐಆರ್ ದಾಖಲಿಸದ ಬಗ್ಗೆ ಆಕ್ರೋಶ

# ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ, ಸರ್ಕಾರದ ಗೊಡ್ಡು ಬೆದರಿಕೆಗೆ ಮಣಿಯುವುದಿಲ್ಲ: ಅಶೋಕ್ ಎಚ್ಚರಿಕೆ

**ಬೆಂಗಳೂರು, ಸೆ.19–** ಕಾಂಗ್ರೆಸ್ ಸರ್ಕಾರ ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಸರ್ಕಾರದ ಗೊಡ್ಡು ಬೆದರಿಕೆಗೆ ನಾವು ಹೆದರಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಹೇಳಿದರು.


ಸುದ್ದಿಗಾರರೊಂದಿಗೆ, ನಾಗಮಂಗಲದ ಕೋಮುಗಲಭೆ ವಿಚಾರದಲ್ಲಿ ಸರಿಯಾಗಿ ತನಿಖೆ ಮಾಡಿ ಎಂದು ರಾಜ್ಯ ಸರ್ಕಾರಕ್ಕೆ ಆಗ್ರಹಿಸಿದ್ದೆ. ಜನರು ಹೇಳಿದ್ದನ್ನು ಕೇಳಿಯೇ ಹಾಗೆ ಟ್ವೀಟ್ ಮಾಡಿದ್ದೆ. ವಿಧಾನಸೌಧದಲ್ಲಿ ಪಾಕಿಸ್ತಾನ್ ಜಿಂದಾಬಾದ್ ಘೋಷಣೆ ಕೂಗಿದ್ದನ್ನು ಸುಳ್ಳು ಎಂದು ಸಚಿವರೇ ಹೇಳಿದ್ದರು. ಬಳಿಕ ಅದು ನಿಜ ಎಂದು ಸಾಬೀತಾಯಿತು. ಹಾಗಾದರೆ ಸಚಿವರ ವಿರುದ್ಧ ಎಫ್‌ಐಆರ್ ದಾಖಲಿಸ ಬೇಡವೇ.




ವಿರೋಧ ಪಕ್ಷದ ನಾಯಕನಾಗಿ ತನಿಖೆ ಮಾಡಿ ಎಂದು ಸರ್ಕಾರಕ್ಕೆ ಆಗ್ರಹಿಸಿದ್ದೇನೆ. ಸರ್ಕಾರದಿಂದ ನನ್ನ ಬಾಯಿ ಮುಚ್ಚಿಸುವ ಕೆಲಸ ಮಾಡಲಾಗುತ್ತಿದೆ. ಎಲ್ಲ ಬಿಜೆಪಿ ನಾಯಕರ ವಿರುದ್ಧ ಪ್ರಕರಣ ದಾಖ ಲಿಸಿ ವಿರೋಧ ಪಕ್ಷವನ್ನು ಬಗ್ಗು ಬಡಿಯಬೇಕೆಂದು ಸರ್ಕಾರ ನಿರ್ಧಾರ ಮಾಡಿದೆ. ಪಾಕ್ ಜಿಂದಾಬಾದ್ ಕುರಿತು ಸುಳ್ಳು ಸುದ್ದಿ ಹಬ್ಬಿಸಿದ ಸಚಿವರು ರಾಜೀನಾಮೆ ನೀಡಬೇಕಿತ್ತು. ಹಾಗಾದರೆ ವಿರೋಧ ಪಕ್ಷವಾಗಿ ನಾವು ಏನು ಮಾಡಬೇಕು ಎಂದು ಪ್ರಶ್ನಿಸಿದರು. ಕಾಂಗ್ರೆಸ್ ರಾಜ್ಯದಲ್ಲಿ ತುರ್ತು ಪರಿಸ್ಥಿತಿ ಜಾರಿ ಮಾಡಲು ಮುಂದಾಗಿದೆ. ಆದರೆ ನಮ್ಮ ಬಾಯಿ ಮುಚ್ಚಿಸಲು ಸಾಧ್ಯವಿಲ್ಲ. ಇದರ ವಿರುದ್ಧ ಹೋರಾಟ ಮಾಡುತ್ತೇವೆ. ಪೊಲೀಸರನ್ನು ಬೊಂಬೆಯಂತೆ ಆಡಿಸುತ್ತಿದ್ದಾರೆ. ಈ ಸರ್ಕಾರ ರಾಜ್ಯಪಾಲರನ್ನೂ ಬಿಟ್ಟಿಲ್ಲ. ಅವರ ಮೇಲೂ ಗದಾ ಪ್ರಹಾರ ಮಾಡಲಾಗುತ್ತಿದೆ. ವಿಶ್ವವಿದ್ಯಾಲಯದಲ್ಲಿ ರಾಜ್ಯಪಾಲರ ಅಧಿಕಾರ ಕಸಿಯಲು ಸರ್ಕಾರ ಮುಂದಾಗಿದೆ. ನಾವು ಇಂದಿರಾಗಾಂಧಿಯ ತುರ್ತು ಪರಿಸ್ಥಿತಿ ವಿರುದ್ಧ ಹೋರಾಟ ಮಾಡಿದ್ದೆವು. ಹೀಗಾಗಿ ಈ ಸರ್ಕಾರದ ಗೊಡ್ಡು ಬೆದರಿಕೆಗೆ ಹೆದರಲ್ಲ ಎಂದರು.

# ಗುತ್ತಿಗೆದಾರರ ಅಧ್ಯಕ್ಷ ಕೆಂಪಣ್ಣ ಹೃದಯಾಘಾತದಿಂದ ನಿಧನ

**ಬೆಂಗಳೂರು, ಸೆ.19–** ಬಿಜೆಪಿ ಸರ್ಕಾರ ಆಡಳಿತಾವಧಿಯಲ್ಲಿ 40 ಪರ್ಸೆಂಟ್ ಕಮಿಷನ್ ಆರೋಪ ಮಾಡಿ, ದೊಡ್ಡ ಮಟ್ಟದಲ್ಲಿ ಸುದ್ದಿಯಾಗಿದ್ದ ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷ ಡಿ.ಕೆಂಪಣ್ಣ ಅವರು ಇಂದು ನಿಧನರಾಗಿದ್ದಾರೆ.



ಈ ಹಿಂದೆ ಬಸವರಾಜ ಬೊಮ್ಮಾಯಿ ನೇತೃತ್ವದ ಬಿಜೆಪಿ ಸರ್ಕಾರದ ಆಡಳಿತದಲ್ಲಿ 40% ಕಮಿಷನ್ ನಡೆದಿದೆ ಎಂದು ಆರೋಪಿಸಿದ್ದ ಕೆಂಪಣ್ಣ ಅವರು ಇದೊಂದು ಸುದ್ದಿ ಮೂಲಕವೇ ಅಂದು ರಾಜ್ಯದ ಜನತೆಯ ಗಮನಸೆಳೆದಿದ್ದರು. 84 ವರ್ಷ ವಯಸ್ಸಿನವರಾಗಿದ್ದ ಕೆಂಪಣ್ಣ ಇಂದು ಬೆಂಗಳೂರಿನ ಜ್ಯೋತಿಪುರದಲ್ಲಿರುವ ತಮ್ಮ ನಿವಾಸದಲ್ಲಿ ಹೃದಯಾಘಾತ ದಿಂದ ಕೊನೆಯುಸಿರೆಳೆದರು. ಇತ್ತೀಚೆಗಷ್ಟೇ ತೀವ್ರ ಅನಾರೋಗ್ಯದ ಸಮಸ್ಯೆಯಿಂದ ಆಸ್ಪತ್ರೆಗೆ ದಾಖಲಾಗಿ, ಚಿಕಿತ್ಸೆ ಪಡೆದು ಮನೆಗೆ ಹಿಂತಿರುಗಿದ್ದ ಕೆಂಪಣ್ಣ, ಇಂದು ಬೆಳಗ್ಗೆ 10 ಗಂಟೆ ಸುಮಾರಿಗೆ ಹೃದಯಾಘಾತಕ್ಕೆ ತುತ್ತಾಗಿ ಇಹಲೋಕ ತ್ಯಜಿಸಿದ್ದಾರೆ.

ರಾಜ್ಯ ಗುತ್ತಿಗೆದಾರರ ಸಂಘದ ಅಧ್ಯಕ್ಷರಾದ ಕೆಂಪಣ್ಣನವರ ನಿಧನ ವಾರ್ತೆ ನೋವುಂಟುಮಾಡಿದೆ. ಹಿಂದಿನ ಸರ್ಕಾರದ ಅವಧಿಯಲ್ಲಿ ದೇಶಾದ್ಯಂತ ಸುದ್ದಿ ಮಾಡಿದ್ದ 40% ಕಮಿಷನ್ ಹಗರಣವನ್ನು ಹೊರತಂದು, ಗುತ್ತಿಗೆ ಕಾಮಗಾರಿಗಳಲ್ಲಿ ನಡೆಯುತ್ತಿದ್ದ ಭ್ರಷ್ಟಾಚಾರದ ವಿರುದ್ಧ ಅವರು ಸೆಟೆದು ನಿಂತಿದ್ದರು. ಯಾವುದೇ ಒತ್ತಡ, ಆಮಿಷಗಳಿಗೆ ಒಳಗಾಗದ ನಿರ್ಭೀತ ಧ್ವನಿಯೊಂದನ್ನು ನಾಡು ಇಂದು ಕಳೆದುಕೊಂಡಿದೆ. ಮೃತರ ಆತ್ಮಕ್ಕೆ ಚಿರಶಾಂತಿ ದೊರಕಲಿ, ಅವರ ಕುಟುಂಬ ವರ್ಗಕ್ಕೆ ಈ ನೋವು ಭರಿಸುವ ಶಕ್ತಿ ಸಿಗಲಿ ಎಂದು ಪ್ರಾರ್ಥಿಸುತ್ತೇನೆ' ಎಂದು ಟ್ವೀಟ್ ಮಾಡಿ ಸಂತಾಪ ಸೂಚಿಸಿದ್ದಾರೆ.

# ಪ್ರಜ್ವಲ್ ಅರ್ಜಿಯ ವಿಚಾರಣೆ ಹೈಕೋರ್ಟ್ ತೀರ್ಪು ಕಾಯ್ದಿರಿಸಿ ಆದೇಶ

**ಬೆಂಗಳೂರು, ಸೆ.19–** ಮಹಿಳೆಯ ಮೇಲೆ ಅತ್ಯಾಚಾರ ನಡೆಸಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಹಾಸನದ ಮಾಜಿ ಸಂಸದ ಪ್ರಜ್ವಲ್ ರೇವಣ್ಣ ನಿರೀಕ್ಷಣಾ ಜಾಮೀನು ಅರ್ಜಿ ಸಲ್ಲಿಸಿದ್ದರು. ಇಂದು ಪ್ರಜ್ವಲ್ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಹೈ ಕೋರ್ಟ್ ತೀರ್ಪು ಕಾಯ್ದಿರಿಸಿ ಆದೇಶ ಹೊರಡಿಸಿದೆ.




ಇಂದು ಹೈಕೋರ್ಟ್‌ನಲ್ಲಿ ಪ್ರಜ್ವಲ್ ರೇವಣ್ಣ ಸಲ್ಲಿಸಿದ್ದ ನಿರೀಕ್ಷಣಾ ಜಾಮೀನು ಅರ್ಜಿಯ ವಿಚಾರಣೆ ನಡೆಯಿತು. ಈ ವೇಳೆ ಪ್ರಜ್ವಲ್ ಪರ ಪ್ರಭುಲಿಂಗ ನಾವದಗಿ ವಾದ ಮಂಡಿಸಿ, ತಮ್ಮ ವಿರುದ್ಧ ಮಹಿಳೆಯೊಬ್ಬರು ಮಾಡಿರುವ ಅತ್ಯಾಚಾರ ಆರೋಪ ಸತ್ಯಕ್ಕೆ ದೂರವಾಗಿದೆ. ಘಟನೆ ನಡೆದಿದ್ದರೂ ನಾಲ್ಕು ವರ್ಷಗಳ ಬಳಿಕ ದೂರು ನೀಡಿದ್ದು ಇದೊಂದು ಒಪ್ಪಿತ ಲೈಂಗಿಕ ಕ್ರಿಯೆ ಎಂದರು.

ಇಡೀ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿದರೆ ಸಂತ್ರಸ್ತೆ ಮಹಿಳೆ ಮೊದಲು ಅರ್ಜಿದಾರರ ತಂದೆ ರೇವಣ್ಣ ವಿರುದ್ಧ ಅತ್ಯಾಚಾರ ಆರೋಪದಲ್ಲಿ ದೂರು ದಾಖಲಿಸಿದ್ದರು. ಬಳಿಕ ಅರ್ಜಿದಾರರ ವಿರುದ್ಧ ಅತ್ಯಾಚಾರ ಆರೋಪ ಮಾಡಿದ್ದಾರೆ. ಅಷ್ಟಕ್ಕೂ ನಾಲ್ಕು ವರ್ಷಗಳ ಹಿಂದೆ 2020ರಲ್ಲಿ ನಡೆದಿರುವ ಘಟನೆ ಸಂಬಂಧಿಸಿದಂತೆ 2024ರಲ್ಲಿ ದೂರು ನೀಡಲಾಗಿದೆ. ಇಷ್ಟು ವಿಳಂಬ ಏಕೆ ಮಾಡಲಾಗಿದೆ ಎಂದು ಪ್ರಶ್ನಿಸಿದರು.

ಇದಕ್ಕೆ ಪೀಠ, ಘಟನೆ ನಡೆದೇ ಇಲ್ಲವೇ ಎಂದು ಪ್ರಶ್ನಿಸಿತು. ಈ ವೇಳೆ ವಕೀಲರು, ತಮ್ಮ ವಿರುದ್ಧ ಮಹಿಳೆಯೊಬ್ಬರು ಮಾಡಿರುವ ಅತ್ಯಾಚಾರ ಆರೋಪ ಸತ್ಯಕ್ಕೆ ದೂರವಾಗಿದೆ. ಘಟನೆ ನಡೆದಿದ್ದರೂ ನಾಲ್ಕು ವರ್ಷಗಳ ಬಳಿಕ ದೂರು ನೀಡಿದ್ದು ಇದೊಂದು ಒಪ್ಪಿತ ಲೈಂಗಿಕ ಕ್ರಿಯೆ ಎಂದು ವಾದಿಸಿದರು.

### ಡಾ.ಸರೋಜಿನಿ ಮಹಿಷಿ ಪರಿಷ್ಕೃತ ವರದಿಗೆ

# ಶೀಘ್ರವಾಗಿ ಕಾನೂನು ಬಲ ದೊರಕಿಸಲು ಡಾ.ಪುರುಷೋತ್ತಮ ಬಿಳಿಮಲೆ ಆಗ್ರಹ

**ಬೆಂಗಳೂರು, ಸೆ.19–** ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಸರ್ಕಾರಕ್ಕೆ ಸಲ್ಲಿಸಿರುವ ಡಾ.ಸರೋಜಿನಿ ಮಹಿಷಿ ಪರಿಷ್ಕೃತ ವರದಿಗೆ ಶೀಘ್ರವಾಗಿ ಕಾನೂನು ಬಲ ದೊರಕಿಸಲು ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಡಾ.ಪುರುಷೋತ್ತಮ ಬಿಳಿಮಲೆ ರಾಜ್ಯ ಸರ್ಕಾರವನ್ನು ಆಗ್ರಹಿಸಿದ್ದಾರೆ.




ಈ ಕುರಿತಂತೆ ಇಂದು ಮುಖ್ಯಮಂತ್ರಿ ಸಿದ್ಧರಾಮಯ್ಯರವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಡಾ. ಬಿಳಿಮಲೆ ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಇಂದಿನ ಜಾಗತೀಕರಣ ಕಾಲಘಟ್ಟಕ್ಕೆ ಅನುಗುಣವಾದ ಕನ್ನಡ ಪರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ್ದು ಕನ್ನಡದ ಉಳಿವಿನ ದೃಷ್ಟಿಯಿಂದ ಇದು ಮಹತ್ವದ ವರದಿಯಾಗಿದೆ. ಈ ವರದಿಯಲ್ಲಿ ಖಾಸಗಿ ವಲಯದ ವಿವಿಧ ವರ್ಗಗಳ ಹುದ್ದೆಗಳಲ್ಲಿ ಕನ್ನಡಿಗರಿಗೆ ಆದ್ಯತೆ; ರಾಜ್ಯದಲ್ಲಿ ವ್ಯವಹರಿಸುವ ಬ್ಯಾಂಕುಗಳಲ್ಲಿ ನೇಮಕ ಹೊಂದುವ ಅಭ್ಯರ್ಥಿಗಳಿಗೆ ಕನ್ನಡದ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಷರತ್ತು; ಸರ್ಕಾರಿ ವಲಯದ ಉದ್ಯಮಗಳಲ್ಲಿ ಕನ್ನಡಿಗರ ಆದ್ಯತೆಯ ಆಯ್ಕೆ, ಅಪ್ರೆಂಟಿಸ್ ಆಯ್ಕೆಯಲ್ಲಿ, ಕಾರ್ಮಿಕರ, ಗುತ್ತಿಗೆ, ದಿನಗೂಲಿ ನೌಕರರ ನೇಮಕಾತಿಗಳಲ್ಲಿ ಕೇವಲ ಕನ್ನಡಿಗರಿಗೆ ಅವಕಾಶ, ತಂತ್ರಜ್ಞಾನ ಬೆಳವಣಿಗೆಗೆ ಅನುಗುಣವಾಗಿ ಉದ್ಯೋಗ ತರಬೇತಿಗೆ ಪ್ರತ್ಯೇಕ ತಾಂತ್ರಿಕ ಸಲಹಾ ಮಂಡಳಿ ಸ್ಥಾಪನೆ; ನಾಮಫಲಕಗಳಲ್ಲಿ ಕನ್ನಡಕ್ಕೆ ಮೊದಲ ಆದ್ಯತೆ, ಕೇಂದ್ರ ಪಠ್ಯಕ್ರಮ ಶಿಕ್ಷಣದಲ್ಲಿ 1 ರಿಂದ10ನೇ ತರಗತಿ ಯವರೆಗೆ ಕನ್ನಡ ಬ'ೋಧ'ನ'ೆ'ಯ'ನ'್ನು ಕಡ್ಡಾಯಗೊಳಿಸುವಿಕೆ ಸೇರಿದಂತೆ ಒಟ್ಟು 14 ಅನುಷ್ಠಾನ ಯೋಗ್ಯ ಅಂಶಗಳಿದ್ದು ಮುಂದಿನ ಅಧಿವೇಶನದಲ್ಲಿ ಪ್ರಾಧಿಕಾರದ ವರದಿಯನ್ನು ಮಂಡಿಸಿ ರಾಜ್ಯ ಸರ್ಕಾರದ ಕನ್ನಡ ಬದ್ಧತೆಯನ್ನು ಸ್ಥಿರೀಕರಿಸಬೇಕೆಂದು ಡಾ.ಬಿಳಿಮಲೆ ಮುಖ್ಯಮಂತ್ರಿಯವರನ್ನು ಆಗ್ರಹಿಸಿದ್ದಾರೆ.

# ತಿರುಪತಿ ಲಡ್ಡು ತಯಾರಿಕೆಗೆ ಪ್ರಾಣಿಗಳ ಕೊಬ್ಬು ಬಳಕೆ: ಚಂದ್ರಬಾಬು ನಾಯ್ಡು ಆರೋಪ

**ಬೆಂಗಳೂರು, ಸೆ.19–** ತಿರುಪತಿ ಲಡ್ಡು ತಯಾರಿಕೆಗೆ ಪ್ರಾಣಿಗಳ ಕೊಬ್ಬು ಬಳಸಲಾಗುತ್ತದೆ ಎಂದು ಆಂಧ್ರಪ್ರದೇಶ ಸಿಎಂ ಚಂದ್ರಬಾಬು ನಾಯ್ಡು ಗಂಭೀರ ಆರೋಪ ಮಾಡಿದ್ದಾರೆ.

ಈ ಆರೋಪ ಸದ್ಯ ಎಲ್ಲೆಡೆ ಸಂಚಲನ ಮೂಡಿಸಿದೆ. ನಾಯ್ಡು ಹೇಳಿಕೆಗೆ ಇದೀಗ ಕರ್ನಾಟಕ ಹಾಲು ಒಕ್ಕೂಟದ ಅಧ್ಯಕ್ಷ ಭೀಮಾ ನಾಯ್ಕ್ ಸ್ಪಷ್ಟನೆ ನೀಡಿದ್ದು, ಸಿಎಂ ಚಂದ್ರಬಾಬು ನಾಯ್ಡು ಹೇಳಿಕೆಗೂ ನಮ್ಮ ನಂದಿನಿ ಬ್ರ್ಯಾಂಡ್‌ಗೂ ಯಾವುದೇ ರೀತಿಯಾದ ಸಂಬಂಧವಿಲ್ಲ ಎಂದು ಸ್ಪಷ್ಟನೆ ನೀಡಿದರು.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಳೆದ 4 ವರ್ಷಗಳಿಂದ ನಂದಿನಿ ತುಪ್ಪ ಅಲ್ಲಿಗೆ ಹೋಗಿಲ್ಲ. ಈಗ ನಂದಿನಿ ತುಪ್ಪ ತಿರುಪತಿಗೆ ಸರಬರಾಜು ಮಾಡಲು ಶುರು ಮಾಡಿದ್ದೇವೆ. 2013–18ರ ಅವಧಿಯಲ್ಲಿ ಸಿದ್ದರಾಮಯ್ಯ ಸಿಎಂ ಆಗಿದ್ದಾಗ 3 ರಿಂದ 4 ಮೆಟ್ರಿಕ್ ಟನ್ ತುಪ್ಪ ಸರಬರಾಜು ಮಾಡಿದ್ದೇವೆ ಎಂದು ತಿಳಿಸಿದ್ದಾರೆ. 2019ರಲ್ಲಿ ಸಮ್ಮಿಶ್ರ ಸರ್ಕಾರ ಇತ್ತು. ಆ ವರ್ಷ 17 ಟನ್ ಸರಬರಾಜು ಮಾಡಿದ್ದೇವೆ. 2020–24ರವರೆಗೆ ಟಿಟಿಡಿನವರು ನಂದಿನಿ ತುಪ್ಪವನ್ನ ಸ್ಥಗಿತ ಮಾಡಿದ್ದರು. ಇಲ್ಲಿ ಹೊಸ ಸರ್ಕಾರ ಬಂದ ಮೇಲೆ ಟ್ರಸ್ಟ್ನ ಅಧಿಕಾರಿಗಳು ನಂದಿನಿ ತುಪ್ಪವನ್ನ ಹೊರಗಿಟ್ಟು ಬೇರೆ



ಬೇರೆ ಬ್ರ್ಯಾಂಡ್ ತುಪ್ಪವನ್ನ ಖರೀದಿ ಮಾಡಿದ್ದಾರೆ. ಇದರ ಹಿನ್ನಲೆ ಏನು ಅಂತ ತನಿಖೆ ಮಾಡುತ್ತೇವೆ. ಭ್ರಷ್ಟಾಚಾರ ನಡೆದಿದೆ ಅಂತ ಈಗಿನ ಸಿಎಂ ಗಮನಕ್ಕೆ ತಂದಿದ್ದಾರೆ ಎಂದು ಹೇಳಿದ್ದಾರೆ.ಟಿಟಿಡಿಯವರು ಬೇಡ ಅಂದ್ರೂ ನಮಗೆ ತೊಂದರೆ ಆಗಲ್ಲ. ಕರ್ನಾಟಕದಲ್ಲಿ ನಂದಿನಿ ತುಪ್ಪಕ್ಕೆ ತುಂಬಾ ಬೇಡಿಕೆ ಇದೆ. ನಾವು ಎಷ್ಟು ತಯಾರು ಮಾಡ್ತಿವೋ ಅಷ್ಟೇ ಬೇಡಿಕೆ ಇದೆ. ದುಬೈ, ಖತಾರ್ ಸೇರಿ ಬೇರೆ ದೇಶಗಳಲ್ಲೂ ಬೇಡಿಕೆ ಇದೆ. ತಿರುಪತಿ ಲಡ್ಡುವಿನಲ್ಲಿ ನಂದಿನಿ ತುಪ್ಪ ಬಳಕೆಯಾದರೆ ನಮಗೆ ಹೆಮ್ಮೆ.ಟಿಟಿಡಿಯವರು ಎಷ್ಟು ತುಪ್ಪ ಕೇಳುತ್ತಾರೋ ಅಷ್ಟು ಕೊಡುತ್ತೇವೆ. ಟಿಟಿಡಿ ತೆಗೆದುಕೊಂಡಿಲ್ಲ ಅಂದ್ರೂ ನಮ್ಮಲ್ಲೇ ಬೇಡಿಕೆ ಇದೆ. ನಂದಿನಿ ತುಪ್ಪವನ್ನು ಬೇಡ ಎನ್ನುವ ಪ್ರಶ್ನೆ ಇಲ್ಲ ಎಂದರು.ನಂದಿನಿ ಹಾಲಿನ ದರ ಏರಿಕೆ ಮುನ್ನವೇ ಬಿಜೆಪಿ ಟೀಕೆ ವಿಚಾರವಾಗಿ ಪ್ರತಿಕ್ರಿಯಿಸಿದ್ದು, ಬಿಜೆಪಿಯವರಿಗೆ ಬೇರೆ ಕೆಲಸ ಇಲ್ಲ. 5 ವರ್ಷ ಬೊಂಬಡಾ ಹೊಡೆದುಕೊಂಡು ಹೋಗಿ ಅಂತಾ ಕೂರಿಸಿದ್ದಾರೆ. ರಾಜ್ಯದ ಜನರು ಬಿಜೆಪಿಯವರನ್ನು ವಿರೋಧ ಪಕ್ಷದಲ್ಲಿ ಕೂರಿಸಿದ್ದಾರೆ. ನಮ್ಮ ಪ್ರಣಾಳಿಕೆಯಲ್ಲಿ 5 ಗ್ಯಾರಂಟಿಗಳನ್ನು ಕೊಡ್ತೀವಿ ಅಂತಾ ಹೇಳಿದ್ವಿ, ಮಾತಿನಂತೆ ನಾವು ನಡೆದುಕೊಂಡು ಹೋಗುತ್ತಿದ್ದೇವೆ ಎಂದಿದ್ದಾರೆ.

# ಮುನಿರತ್ನ ಅಮಾನತುಗೊಳಿಸಲು ಕೆಪಿಸಿಸಿ ಎದುರು ಪ್ರತಿಭಟನೆ




**ಬೆಂಗಳೂರು,ಸೆ.19–** ಬಿಜೆಪಿ ಶಾಸಕ ಮುನಿರತ್ನ ಅವರನ್ನು ಅಮಾನತುಗೊಳಿಸಬೇಕು ಹಾಗೂ ಅವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಮುಖಂಡರು ಕೆಪಿಸಿಸಿ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಕೆಪಿಸಿಸಿ ಕಾರ್ಯಾಧ್ಯಕ್ಷ ಚಂದ್ರಶೇಖರ್ ನೇತೃತ್ವದಲ್ಲಿ ನಡೆದ ಪ್ರತಿಭಟನೆಯಲ್ಲಿ ಮುನಿರತ್ನ ವಿರುದ್ಧ ಘೋಷಣೆಗಳನ್ನು ಕೂಗಲಾಯಿತು. ಮುನಿರತ್ನ ಕಾಮುಕನಾಗಿದ್ದು, ಅತ್ಯಾಚಾರಿ, ಹನಿಟ್ರ್ಯಾಪ್‌ನ ರೂವಾರಿಯಾಗಿದ್ದಾನೆ. ಗುತ್ತಿಗೆದಾರರನ್ನು ಶೋಷಣೆ ಮಾಡಿದ್ದು, ಹಣ ವಸೂಲಿ ಮಾಡಿದ್ದಾನೆ. ಗುತ್ತಿಗೆದಾರರ ಜೊತೆ ಸಂಭಾಷಣೆಯಲ್ಲಿ ಹೆಣ್ಣುಮಕ್ಕಳ ವಿಷಯವಾಗಿ, ಪರಿಶಿಷ್ಟರ ಬಗ್ಗೆ ಅಸಭ್ಯವಾಗಿ ಮಾತನಾಡಿದ್ದಾನೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಜಿ.ಸಿ.ಚಂದ್ರಶೇಖರ್ ಮಾತನಾಡಿ, ಮುನಿರತ್ನ ಒಬ್ಬ ಗೂಂಡಾ ಶಾಸಕನಾಗಿದ್ದು, ಆತನ ಬಗ್ಗೆ ದೂರು ನೀಡಲು ಕೂಡ ಭಯ ಪಡುವ ವಾತಾವರಣವಿದೆ. ಹೀಗಾಗಿ ಬಹಳಷ್ಟು ಮಂದಿ ದೂರು ನೀಡಲು ಮುಂದೆ ಬಂದಿಲ್ಲ ಎಂದು ಹೇಳಿದರು.

ಇಂತಹ ನಾಚಿಕೆಗೆಟ್ಟ ಶಾಸಕನನ್ನು ಬಿಜೆಪಿ ನಾಯಕರು ಸಮರ್ಥಿಸಿಕೊಳ್ಳುತ್ತಿರುವುದು ಅಚ್ಚರಿಗೆ ಕಾರಣವಾಗಿದೆ. ಬಿಜೆಪಿ ನಾಯಕರ ನೈತಿಕತೆ ಕೂಡ ಪ್ರಶ್ನಾರ್ಹವಾಗಿದೆ. ಆತನನ್ನು ಗೆಲ್ಲಿಸಿದ ರಾಜರಾಜೇಶ್ವರಿ ನಗರ ಕ್ಷೇತ್ರದ ಜನ ತಲೆತಗ್ಗಿಸುವಂತಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಿಜೆಪಿಗೆ ನೈತಿಕತೆ ಇದ್ದರೆ ಕೂಡಲೇ ಮುನಿರತ್ನ ವಿರುದ್ಧ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

# ಇಂದು ಬೆಂಗಳೂರು ಮೆಟ್ರೋಪಾಲಿಟನ್ ನ್ಯಾಯಾಲಯದಲ್ಲಿ ಮುನಿರತ್ನ ವಿಚಾರಣೆ

**ಬೆಂಗಳೂರು, ಸೆ.19–** ಮಹಿಳೆ ಮೇಲೆ ಅತ್ಯಾಚಾರ ಎಸಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಇಂದು ಬೆಂಗಳೂರಿನ 42ನೇ ACMM ನ್ಯಾಯಾಲಯದಲ್ಲಿ ಶಾಸಕ ಮುನಿರತ್ನ ಅವರನ್ನು ವಿಚಾರಣೆಗೆ ಹಾಜರುಪಡಿಸಲಾಗಿತ್ತು. ಈ ವೇಳೆ ವಿಚಾರಣೆ ನಡೆಸಿದ ಜಡ್ಜ್ ವಿಚಾರಣೆಯನ್ನು ನಾಳೆ ಮುಂದೂಡಿ ಆದೇಶ ಹೊರಡಿಸಿದ್ದಾರೆ.

ಹೌದು ಮಹಿಳೆಯೊಬ್ಬರು ಮುನಿರತ್ನ ನನ್ನ ಮೇಲೆ ಅತ್ಯಾಚಾರ ಆಗಿದ್ದಾನೆ ಎಂದು ನಿನ್ನೆ ರಾಮನಗರ ಜಿಲ್ಲೆಯ ಕಗ್ಗಲಿಪುರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಅತ್ಯಾಚಾರ,ಬೆದರಿಕೆ, ಹನಿಟ್ರ್ಯಾಪ್ ಸಂಬಂಧ ಮಹಿಳೆಯು ನೀಡಿದ ದೂರಿನ್ವಯ ಪೊಲೀಸರು ಶಾಸಕ ಮುನಿರತ್ನ ಸೇರಿ 7 ಮಂದಿ ವಿರುದ್ಧ ಪ್ರಕರಣ ದಾಖಲಿಸಿ ತನಿಖೆಯನ್ನು ತೀವ್ರಗೊಳಿಸಿದ್ದಾರೆ. ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ಮಾಡಿದ್ದ ಸಂತ್ರಸ್ತ ಮಹಿಳೆಯನ್ನು ವೈದ್ಯಕೀಯ ತಪಾಸಣೆ ನಡೆಸಿ ಕೃತ್ಯ ನಡೆದ ಸ್ಥಳಗಳಲ್ಲಿ ಆಕೆಯ ಜೊತೆ ಪೊಲೀಸರು ಸ್ಥಳ ಮಹಜರು ನಡೆಸಿದ್ದಾರೆ. ಅತ್ಯಾಚಾರ, ಹನಿಟ್ರ್ಯಾಪ್ ಆರೋಪ ಮಾಡಿ ದೂರು ನೀಡಿದ್ದ ಸಂತ್ರಸ್ತ ಮಹಿಳೆಯನ್ನು ಡಿವೈಎಸ್ಪಿ ದಿನಕರ್ ಶೆಟ್ಟಿ ಅವರು 2 ಗಂಟೆಗೂ ಹೆಚ್ಚು ಕಾಲ ವಿಚಾರಣೆ ನಡೆಸಿ ಮಾಹಿತಿ ಪಡೆದಿದ್ದಾರೆ. ಘಟನೆ ಸಂಬಂಧ ಶಾಸಕ ಮುನಿರತ್ನ, ವಿಜಯ್ ಕುಮಾರ್, ಕಿರಣ್, ಲೋಹಿತ್, ಮಂಜುನಾಥ್,



ಲೋಕಿ ಸೇರಿ 7 ಮಂದಿ ವಿರುದ್ಧ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ. ಈ ಹಿನೆಲೆಯಲ್ಲಿ ಇಂದು ರಾಮನಗರ ಪೊಲೀಸರು ಬೆಂಗಳೂರಿಗೆ ಆಗಮಿಸಿ ಮುನಿರತ್ನ ಅವರನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸಿದ್ದರು.

# ಶೋಭಾ ಕರಂದ್ಲಾಜೆ ವಿರುದ್ಧ ಮೊಕದ್ದಮೆ ರದ್ದುಮಾಡಿದ ಹೈಕೋರ್ಟ್

**ಬೆಂಗಳೂರು, ಸೆ.19–** ರಾಮೇಶ್ವರಂ ಕೆಫೆ ಸ್ಫೋಟದ ಶಂಕಿತ ಆರೋಪಿಗೆ ಮತ್ತು ತಮಿಳುನಾಡಿಗೆ ಸಂಬಂಧ ಕಲ್ಪಿಸಿ ಬೆಂಗಳೂರಿನಲ್ಲಿ ನಡೆದ ಪ್ರತಿಭಟನೆ ವೇಳೆ ಹೇಳಿಕೆ ನೀಡಿದ್ದ ಸಂಸದೆ ಶೋಭಾ ಕರಂದ್ಲಾಜೆ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮೊಕದ್ದಮೆಯನ್ನು ಕರ್ನಾಟಕ ಹೈಕೋರ್ಟ್ ಗುರುವಾರ ರದ್ದುಗೊಳಿಸಿದೆ.

ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ಪೀಠವು ಶೋಭಾ ಕರಂದ್ಲಾಜೆ ವಿರುದ್ಧ ದಾಖಲಾಗಿದ್ದ ಪ್ರಜಾಪ್ರತಿನಿಧಿ ಕಾಯ್ದೆಯ ಸೆಕ್ಷನ್ 123(3), 123(3 ಎ) ಮತ್ತು 125 ರಡಿಯಲ್ಲಿ ಕಾಟನ್‌ಪೇಟೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿರುವ ಪ್ರಕ್ರಿಯೆಗಳನ್ನು ರದ್ದುಗೊಳಿಸಿದೆ.ಶೋಭಾ ಕರಂದ್ಲಾಜೆ ಅವರ ಕ್ಷಮಾಪಣೆ ಪರಿಗಣಿಸಿ ಮದ್ರಾಸ್ ಹೈಕೋರ್ಟ್ ಇತ್ತೀಚೆಗೆ ಈ ಕುರಿತ ಪ್ರಕ್ರಿಯೆಯನ್ನು ರದ್ದುಗೊಳಿಸಿತ್ತು.

ಇದರ ಆಧಾರದಲ್ಲಿ ಕರ್ನಾಟಕ ಹೈಕೋರ್ಟ್ ಶೋಭಾ ಕರಂದ್ಲಾಜೆ ವಿರುದ್ಧದ ದಾಖಲಾಗಿದ್ದ




ಕ್ರಿಮಿನಲ್ ಮೊಕದ್ದಮೆಯನ್ನು ರದ್ದುಗೊಳಿಸಿದೆ.

ಬೆಂಗಳೂರಿನಲ್ಲಿ ಅಂಗಡಿ ಮಾಲಕನ ಮೇಲೆ ನಡೆದಿದ್ದ ಹಲ್ಲೆ ಖಂಡಿಸಿ ನಡೆದ ಬಿಜೆಪಿಯ ಪ್ರತಿಭಟನೆಯ ವೇಳೆ, ಶೋಭಾ ಕರಂದ್ಲಾಜೆ, ಕರ್ನಾಟಕದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ತಮಿಳುನಾಡಿನಿಂದ ಬಂದವರು ಇಲ್ಲಿ ಬಾಂಬ್ ಇಡುತ್ತಾರೆ, ದಿಲ್ಲಿಯಿಂದ ಬಂದವರು ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗುತ್ತಾರೆ. ಕೇರಳದಿಂದ ಬಂದವರು ಆಯಸಿಡ್ ದಾಳಿಯಲ್ಲಿ ಭಾಗಿಯಾಗಿದ್ದಾರೆ ಎಂದು ಹೇಳಿದ್ದರು.



ಕರ್ನಾಟಕ ರಾಜ್ಯ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಸಂಘದ ಸದಸ್ಯರು ಸಂಭಾವನೆ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆಗಳಿಗೆ ಒತ್ತಾಯಿಸಿ ಗುರುವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಧರಣಿ ನಡೆಸಿದರು.

# ಖರ್ಗೆ ಮೆಚ್ಚಿಸಲು ಸಚಿವ ಸಂಪುಟ ಸಭೆ: ಖೂಬಾ ವ್ಯಂಗ್ಯ

**ಬೀದರ್, ಸೆ.19–** ಕಲ್ಯಾಣ ಕರ್ನಾಟಕ ಉತ್ಸವ ದಿನಾಚರಣೆಯಂದು ಕಲಬುರಗಿಯಲ್ಲಿ ನಡೆದ ಸಚಿವ ಸಂಪುಟ ಸಭೆ ಕೇವಲ ತೋರಿಕೆಗೆ ಸೀಮಿತವಾಗಿದೆ. ಜನರ ಕೋಟ್ಯಾಂತರ ರೂ ಈ ಸಂಪುಟ ಸಭೆಗೆ ಖರ್ಚು ಮಾಡಿದ್ದರೂ ನೀರರ್ಥಕವಾಗಿದೆ. ಈ ಸಭೆ ಕಾಂಗ್ರೇಸ್ ಅಧ್ಯಕ್ಷರಾಗಿರುವ ಮಲ್ಲಿಕಾರ್ಜುನ ಖರ್ಗೆಯವರನ್ನು ಮೆಚ್ಚಿಸುವ, ಸಂತೋಷಪಡಿಸಲು ನಡೆಸಲಾಗಿದೆ ಎಂದರೆ ತಪ್ಪಾಗಲಾರದು ಎಂದು ಕೇಂದ್ರ ಮಾಜಿ ಮಂತ್ರಿ ಭಗವಂತ ಖೂಬಾ ಸಚಿವ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು ಹೇಳಿಕೊಳ್ಳುವ ನಿರ್ಣಯಗಳು ತೆಗೆದುಕೊಂಡಿಲ್ಲಾ. ಬೀದರ್ ಜಿಲ್ಲೆಗಂತೂ ಸಂಪೂರ್ಣ ನಿರ್ಲಕ್ಷ್ಯ ಮಾಡಿದ್ದಾರೆ. ಕಲ್ಯಾಣ ಕರ್ನಾಟಕದ ಜನರಿಗೆ ದಿಶಾಭೂಲ್ ಮಾಡುವ ಇಂತಹ ಸಚಿವ ಸಂಪುಟ ಸಭೆ ಅವಶ್ಯಕತೆ ಇದ್ದಿರಲಿಲ್ಲಾ ಎಂದಿದ್ದಾರೆ.

ಬೀದರ್ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ಕಾಮಗಾರಿಗಳ ಬಗ್ಗೆ ಕಳೆದ 16 ತಿಂಗಳಲ್ಲಿ ಎರಡ್ಮೂರು ಬಾರಿ ಮುಖ್ಯಮಂತ್ರಿ ಅವರನ್ನು ಭೇಟಿ ಮಾಡಿ ಅವರ ಗಮನಕ್ಕೆ ತಂದಿರುವೆ. ಇದರ ಜೊತೆಗೆ 3 ದಿವಸದ ಹಿಂದೆ ಮತ್ತೊಮ್ಮೆ ಮುಖ್ಯಮಂತ್ರಿ ಅವರನ್ನ ಪತ್ರ ಬರೆದು ನೆನಪಿಸಿದ್ದೆ. ಆದರೆ ಒಂದೆ ಒಂದು ಅಭಿವೃದ್ಧಿ ಕಾಮಗಾರಿಗೆ ಅನುದಾನ ನೀಡಿರುವುದಿಲ್ಲಾ. ಇಂತಹ ನಾಚಿಕೆಗೇಡು, ಅಭಿವೃದ್ಧಿಯ ಬಗ್ಗೆ ಆಸಕ್ತಿಯಿಲ್ಲದ ಸರ್ಕಾರ ಇದ್ದು ಸತ್ತಂತೆ ಎಂದು ಕಿಡಿಕಾರಿದ್ದಾರೆ.

ಬಿಜೆಪಿ ಸರ್ಕಾರದಲ್ಲಿ ಘೋಷಣೆಯಾಗಿದ್ದ ಬೀದರ್ ನಗರಸಭೆಯನ್ನು ಮಹಾನಗರ ಪಾಲಿಕೆಯನ್ನಾಗಿ ಮೇಲ್ದರ್ಜೆಗೇರಿಸುವ ನಿರ್ಣಯ ಸ್ವಾಗತಾರ್ಹ. ಆದರೆ, ಜಿಲ್ಲಾ ಸಂಕೀರ್ಣ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಿದ್ದರಾಮಯ್ಯನವರು 6 ವರ್ಷಗಳ ಹಿಂದೆ ಮುಖ್ಯಮಂತ್ರಿಯಾಗಿದ್ದಾಗ ಶಂಕುಸ್ಥಾಪನೆ ಮಾಡಿದ್ದರು. ಆದರೆ ಕಾಮಗಾರಿ ಪ್ರಾರಂಭವೇ ಆಗಿರುವುದಿಲ್ಲಾ. ಇವಾಗಾದರು ಪ್ರಾರಂಭವಾಗಲಿ. ಹೇಳಿಕೆಗೆ ಸೀಮಿತವಾಗದೆ ಇದ್ದರೆ ಸಾಕು ಎಂದಿದ್ದಾರೆ. ಬಿಜೆಪಿ ಸರ್ಕಾರದಲ್ಲಿ ಮಂಜೂರಾಗಿ ಟೆಂಡರ್ ಪ್ರಕ್ರಿಯೆಗೆ ಆಡಳಿತಾತ್ಮಕ ಅನುಮೋದನೆ ಗೊಂಡಿದ್ದ ನಮ್ಮ ಕ್ಷೇತ್ರದ 1500 ಕೋಟಿಯ ನೀರಾವರಿ ಯೋಜನೆಗಳಿಗೆ ಕಾಂಗ್ರೆಸ್ ಒಂದು ರೂಪಾಯಿಯೂ ಮೀಸಲಿಟ್ಟಿಲ್ಲಾ. ಈ ನೀರಾವರಿ ಯೋಜನೆಗಳ 1500 ಕೋಟಿ ರೂಪಾಯಿ ನುಂಗಿ, ಕೇವಲ 100 ಕೋಟಿ ಕೃಷಿಗೆ ಮೀಸಲಿಟ್ಟಿದ್ದು ರೈತರಿಗೆ ಮಾಡಿರುವ ಅವಮಾನ ಮತ್ತು ಅನ್ಯಾಯವಾಗಿದೆ. ಮುಖ್ಯ ಮಂತ್ರಿಗಳು ಕಲ್ಯಾಣ ಕರ್ನಾಟಕ ಭಾಗಕ್ಕೆ ಕೇಂದ್ರ ಸರ್ಕಾರ ಅನುದಾನ ನೀಡಿಲ್ಲಾ ಎಂದು ಸುಳ್ಳು ಹೇಳುವುದು ನಿಲ್ಲಿಸಬೇಕು.

ಬೀದರ್ ಜಿಲ್ಲೆಗೆ ಸೋಲಾರ ಯೋಜನೆಗಳು, ಸಿಪೆಟ್ ಕಾಲೇಜು, ಬೀದರ್–ನಾಂದೇಡ್ ಹೊಸ ರೈಲ್ವೆ ಲೈನ್ ಮುಂತಾದ ಯೋಜನೆಗಳಿಗೆ ಮಂಜೂರಾತಿ ನೀಡಿದೆ. ಆದರೆ, ಈ ಯೋಜನೆಗಳಿಗೆ ರಾಜ್ಯ ಸರ್ಕಾರ ತನ್ನ ಪಾಲಿನ ಅನುದಾನ ನೀಡದೆ ಅನ್ಯಾಯ ಮಾಡುತ್ತಿದೆ. ವಿನಾಕಾರಣ ಕೇಂದ್ರದ ಕಡೆ ಬೊಟ್ಟು ಮಾಡುವುದು ರಾಜ್ಯ ಸರ್ಕಾರ ನಿಲ್ಲಿಸಬೇಕು ಎಂದು ಸರ್ಕಾರಕ್ಕೆ ಕುಟುಕಿದ್ದಾರೆ.



### ಖಂಡ್ರೆ, ರಹೀಂಖಾನ್ ರಾಜಿನಾಮೆ ನೀಡಬೇಕು

ಬೀದರ್ ಜಿಲ್ಲಾ ಉಸ್ತುವಾರಿ ಮಂತ್ರಿಯಾಗಿರುವ ಈಶ್ವರ ಖಂಡ್ರೆಯವರು ಸಂಪೂರ್ಣವಾಗಿ ವಿಫಲರಾಗಿದ್ದಾರೆ. ಮೊನಚು ಮಾತುಗಳಿಂದ ಟೀಕಿಸಿದ ಅವರು ಜಿಲ್ಲೆಯಿಂದ ಸಂಪುಟ ಸಚಿವರಾಗಿರುವ ಈಶ್ವರ ಖಂಡ್ರೆ ಹಾಗೂ ರಹೀಂ ಖಾನ್ ತನ್ನ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಇವರು ಕೇವಲ ಸಾರ್ವಜನಿಕ ಕಾರ್ಯಕ್ರಮಗಳಿಗೆ ಸೀಮಿತರಾಗಿದ್ದಾರೆ. ಅಭಿವೃದ್ಧಿ ಬಗ್ಗೆ ಇವರಿಗಿಲ್ಲಾ ಕಾಳಜಿ. ಯಾವ ವಿಷಯಗಳ ಸಚಿವರಾಗಿದ್ದಾರೋ ಗೊತ್ತಿಲ್ಲಾ. ಬೀದರ್ ಲೋಕಸಭಾ ಕ್ಷೇತ್ರದ ಅಭಿವೃದ್ಧಿ ಕಡೆಗಣಿಸಿರುವ ಸಿದ್ದರಾಮಯ್ಯ ಸರ್ಕಾರಕ್ಕೆ ನಮ್ಮ ಈ ಇಬ್ಬರು ಸಚಿವರುಗಳಿಗೂ ನನ್ನ ಧಿಕ್ಕಾರ ಎಂದು ಸರ್ಕಾರದ ವಿರುದ್ಧ ಖೂಬಾ ಹರಿಹಾಯ್ದಿದಿದ್ದಾರೆ.

## ಬೆಂಗಳೂರು-ಧಾರವಾಡ ವಂದೇ ಭಾರತ್

# ರೈಲನ್ನು ಬೆಳಗಾವಿಗೆ ವಿಸ್ತರಿಸಲು ಕೇಂದ್ರಕ್ಕೆ ಶೆಟ್ಟರ್ ಮನವಿ

**ಹುಬ್ಬಳ್ಳಿ, ಸೆ.19–** ಪುಣೆಯಿಂದ ಬೆಳಗಾವಿವರೆಗೆ ವಂದೇ ಭಾರತ್ ರೈಲು ಆರಂಭಿಸಬೇಕು ಎಂಬುದು ಈ ಭಾಗದ ಜನರ ಬೇಡಿಕೆಯಾಗಿತ್ತು. ಈ ಬಗ್ಗೆ ನಾನು ಸಂಸದನಾದ ನಂತರ ಕೇಂದ್ರ ರೈಲ್ವೆ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ್ದೆ. ಈಗ ವಂದೇ ಭಾರತ್ ರೈಲು ಆರಂಭಿಸಿರುವುದನ್ನು ಸ್ವಾಗತಿಸುತ್ತೇನೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಬೆಳಗಾವಿ ಸಂಸದ ಜಗದೀಶ್ ಶೆಟ್ಟರ್ ಹೇಳಿದರು.



ನಗರದಲ್ಲಿಂದು ಸುದ್ದಿಗಾರರ ಜೊತೆಗೆ ಅವರು ಮಾತನಾಡಿದರು, ಬೆಂಗಳೂರು –ಧಾರವಾಡ ವಂದೇ ಭಾರತ್ ರೈಲನ್ನು ಬೆಳಗಾವಿಗೆ ವಿಸ್ತರಿಸುವಂತೆ ಸಹ ಮನವಿ ಮಾಡಲಾಗಿದೆ. ಈ ಬಗ್ಗೆಯೂ ಕ್ರಮ ಕೈಗೊಳ್ಳುವುದಾಗಿ ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಅವರು ಭರವಸೆ ನೀಡಿದ್ದಾರೆ. ರೈಲು ಸಂಚಾರ ಆರಂಭವಾದ ನಂತರ ವೇಳಾಪಟ್ಟಿಗೆ ಸಂಬಂಧಿಸಿದ ಗೊಂದಲಗಳನ್ನು ಪರಿಹರಿಸಲಾಗುವುದು. ಕೊಲ್ಲಾಪುರಕ್ಕೂ ವಂದೇ ಭಾರತ್ ರೈಲು ಬರಬೇಕು ಎಂಬುದು ಅಲ್ಲಿನ ಜನರು, ರಾಜಕೀಯ ಮುಖಂಡರ ಬೇಡಿಕೆಯಾಗಿತ್ತು. ಹೀಗಾಗಿ ವಾರದಲ್ಲಿ ಮೂರು ದಿನ ಆ ಮಾರ್ಗವಾಗಿ ರೈಲು ಸಂಚರಿಸಲಿದೆ. ಮುಂದಿನ ದಿನಗಳಲ್ಲಿ ಈ ಹಿಂದೆ ನಿಗದಿ ಮಾಡಿದಂತೆ ವಾರದಲ್ಲಿ ಆರು ದಿನ ಹುಬ್ಬಳ್ಳಿ–ಪುಣೆ ನಡುವೆ ಸಂಚರಿಸುವ ವಿಶ್ವಾಸ ಇದೆ ಎಂದರು. ಮುಂದಿನ ದಿನಗಳಲ್ಲಿ ಟಿಕೆಟ್ ದರ ಕಡಿಮೆ ಮಾಡುವಂತೆ ಸಂಬಂಧಿಸಿದ ವರಿಗೆ ಮನವಿ ಮಾಡಲಾಗುವುದು ಎಂದು ಹೇಳಿದರು.

## ನಟ ಡಾ.ವಿಷ್ಣುವರ್ಧನ್‌ರವರ ಜನ್ಮದಿನಾಚರಣೆ



**ಬಳ್ಳಾರಿ, ಸೆ.19–** ಜೈ ಕರುನಾಡ ವೇದಿಕೆ ವತಿಯಿಂದ ಕರ್ನಾಟಕ ರತ್ನ, ಸಾಹಸಸಿಂಹ ಡಾ. ವಿಷ್ಣುವರ್ಧನ್ ಅವರ ಹುಟ್ಟುಹಬ್ಬವನ್ನು ಇಂದು ನಗರದ ಕುವೆಂಪು ನಗರದ ಡಾಕ್ಟರ್ ವಿಷ್ಣುವರ್ಧನ್ ಅವರ ಉದ್ಯಾನವನದಲ್ಲಿ ಸರಳವಾಗಿ ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ನಮ್ಮ ಜೈ ಕರುನಾಡ ವೇದಿಕೆ ಸಂಘಟನೆಯ ಸಂಸ್ಥಾಪಕ ಅಧ್ಯಕ್ಷ ಟಿ ಮಂಜುನಾಥ್ ಗೌಡ, ಹುಲಿಗೆಪ್ಪ, ಪದ್ಮ, ಚಂದ್ರಪ್ಪ, ಹನುಮಂತಪ್ಪ, ಭೀಮ ನಾಯಕ್,ಗಿರೀಶ, ಮಹಿಳಾ ಘಟಕ ಸುಗುಣ, ಯಶೋಧ ಮತ್ತು ಪದಾಧಿಕಾರಿಗಳು ಹಾಜರಿದ್ದರು.

# ಯುವಕ್ರಾಂತಿ ತಂಡದ ವತಿಯಿಂದ ಜಿಲ್ಲಾಧಿಕಾರಿ, ಎಸ್‌ಪಿಗೆ ಸನ್ಮಾನ



**ಬಳ್ಳಾರಿ, ಸೆ.19–** ಈದ್ ಮಿಲಾದ್ ಹಬ್ಬವನ್ನು ಆಚರಿಸಲು ಎಲ್ಲಾ ರೀತಿಯ ಸಹಕಾರ ಮತ್ತು ಭದ್ರತೆಯನ್ನು ನೀಡಿ ಯಾವುದೇ ಗಲಭೆ ಮತ್ತು ಗಲಾಟೆಗೆ ಆಸ್ಪದ ಕೊಡದೆ ಸುಸೂತ್ರವಾಗಿ ನಡೆಯುವಂತೆ ಅನುಕೂಲ ಕಲ್ಪಿಸಿದ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳನ್ನು ಯುವ ಕ್ರಾಂತಿ ಸಂಘಟನೆ ವತಿಯಿಂದ ಗೌರವಿಸಿ ಸನ್ಮಾನಿಸಿದರು.

ಈ ಸಂದರ್ಭದಲ್ಲಿ ಯುವ ಕ್ರಾಂತಿ ತಂಡದ ಹಾಗೂ ಮಹಾನಗರ ಪಾಲಿಕೆ ಸದಸ್ಯ ಹರ್ಷದ್ ಅಲಿ ಮಾತನಾಡಿ, ಈದ್ ಮಿಲಾದ್ ಹಬ್ಬದಂದು ನಮ್ಮ ಸಮುದಾಯದ ವತಿಯಿಂದ ಹಮ್ಮಿಕೊಂಡ ಮೆರವಣಿಗೆ ಮತ್ತು ಇತರೆ ಧಾರ್ಮಿಕ ಕಾರ್ಯಕ್ರಮಗಳಿಗೆ ಸೂಕ್ತ ಬಂದೋಬಸ್ತ ನೀಡಿ ಸರಾಗವಾಗಿ ಯಾವುದೇ ಅಡಚಣೆಗಳಿಲ್ಲದೆ ಈದ್ ಮಿಲಾದ್ ಆಚರಿಸಲು ಜಿಲ್ಲಾ ಅಧಿಕಾರಿ ಮತ್ತು ಜಿಲ್ಲಾ ಪೊಲೀಸ್ ಅಧಿಕಾರಿಗಳು ಸಹಕಾರ ನೀಡಿ ಭದ್ರತೆಯನ್ನು ಒದಗಿಸಿರುತ್ತಾರೆ, ಇವರ ಈ ಭದ್ರತೆ ಮತ್ತು ಸೂಕ್ತ ಕ್ರಮದಿಂದಾಗಿ ಹಬ್ಬದ ಸಂಭ್ರಮದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಸುಸೂತ್ರವಾಗಿ ನಡೆಯಲು ಕಾರಣವಾಗಿದೆ. ಇದನ್ನು ಮನಗಂಡ ನಮ್ಮ ಯುವ ಕ್ರಾಂತಿ ತಂಡದ ಸದಸ್ಯರುಗಳು ಎಲ್ಲಾರು ಒಗ್ಗೂಡಿ ನಮಗೆ ಸಹಕಾರ ಮಾಡಿ ಶಾಂತಿ ಮತ್ತು ಸುವ್ಯವಸ್ಥೆಗೆ ಕಾರಣರಾದ ಅಧಿಕಾರಿಗಳಿಗೆ ಸನ್ಮಾನ ಮಾಡಿದ್ದೇವೆ ಎಂದರು.

ನಮ್ಮ ಯುವ ಕ್ರಾಂತಿ ತಂಡದಿಂದ ಈಗಾಗಲೇ ಮನುಷ್ಯರಿಗೆ ಮತ್ತು ಸಮಾಜಕ್ಕೆ ಅತ್ಯವಶ್ಯಕವಾಗಿ ಬೇಕಾದ ಪರಿಸರ ಸಂರಕ್ಷಣೆಯನ್ನು ಮಾಡುತ್ತಾ ನಗರದ ಈಗ ಮೈದಾನದಲ್ಲಿ ಸಾವಿರಾರು ಸಸಿಗಳನ್ನು ನೀಡಲಾಗಿದೆ. ಇದರಿಂದಾಗಿ ಪರಿಸರ ಅಸಮಾತೋಲನ ವಿವರಣೆಯಾದಂತಾಗುತ್ತದೆ, ಮತ್ತು ಮುಂದಿನ ದಿನಗಳಲ್ಲಿ ನಮ್ಮ ಯುವ ಕ್ರಾಂತಿ ತಂಡದಿಂದ ಸಮಾಜದಲ್ಲಿ ಶಾಂತಿ ಮತ್ತು ಸೌಹಾರ್ದತೆ ಕಾಪಾಡಿಕೊಂಡು ಎಲ್ಲಾ ಸಮುದಾಯಗಳನ್ನು ಒಗ್ಗೂಡಿಸಿಕೊಂಡು ಸಮಾಜ ಸೇವೆಯನ್ನು ಮಾಡುತ್ತೇವೆ ಮತ್ತು ಅತ್ಯಂತ ಮುಖ್ಯವಾಗಿ ಸಾರ್ವಜನಿಕರಿಗೆ ಮತ್ತು ಬಡಜನರಿಗೆ ಬೇಕಾದ ಶಿಕ್ಷಣ ಮತ್ತು ಆರೋಗ್ಯವಾದ ಸೇವೆಯನ್ನು ನೀಡಲು ನಮ್ಮ

# ಕಲಬುರಗಿ ಸಚಿವ ಸಂಪುಟ ಸಭೆ: ಸಮಾಧಾನವಿದೆ– ತೃಪ್ತಿಕರವಾಗಿಲ್ಲ: ಬಿ.ಆರ್.ಪಾಟೀಲ್ ಬೇಸರ

**ಕಲಬುರಗಿ, ಸೆ.19–** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕಲಬುರಗಿಯಲ್ಲಿ ನಡೆದ ರಾಜ್ಯ ಸಚಿವ ಸಂಪುಟ ಸಭೆ ಸಮಾಧಾನ ತಂದಿದೆ ಹೊರತು, ತೃಪ್ತಿಕರವಾಗಿಲ್ಲ ಎಂದು ಮುಖ್ಯಮಂತ್ರಿ ಸಲಹೆಗಾರ, ಆಳಂದ ಶಾಸಕ ಬಿ.ಆರ್. ಪಾಟೀಲ್ ಬೇಸರ ವ್ಯಕ್ತಪಡಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಲ್ಯಾಣ ಕರ್ನಾಟಕದ ಎಲ್ಲ ಜಿಲ್ಲೆಗಳನ್ನೊಳ ಗೊಂಡು ಮುಂದಿನ 20 ವರ್ಷಗಳ ದೂರದೃಷ್ಟಿಕೋನ ಇಟ್ಟುಕೊಂಡು ಸಮಗ್ರ ಅಭಿವೃದ್ಧಿಗೆ ಅಗತ್ಯ ಅನುಸಾರ ಯೋಜನಾ ವರದಿ ನೀಲನಕ್ಷೆ ಸಿದ್ಧಪಡಿಸಬೇಕಿತ್ತು. ಮೂಲಸೌಕರ್ಯದೊಂದಿಗೆ ಶಿಕ್ಷಣಕ್ಕೆ ಹೆಚ್ಚಿನ ಒತ್ತು ಕೊಡಬೇಕಿತ್ತು. ಸರ್ಕಾರಿ ಪ್ರಾಥಮಿಕ ಮತ್ತು ಸರ್ಕಾರಿ ಪಿಯು ಕಾಲೇಜು ಸ್ಥಾಪನೆಗೆ ಮುಂದಾಗಬೇಕಿತ್ತು. ಇನ್ನು ಶೈಕ್ಷಣಿಕವಾಗಿ ಹಿಂದುಳಿದ ಈ ಭಾಗದ ಶಿಕ್ಷಣದ ಅಭಿವೃದ್ಧಿಗೆ 22 ಸಾವಿರ ಶಿಕ್ಷಕರ ನೇಮಕಾತಿಗೆ ಅನುಮೋದನೆ ಅತ್ಯಂತ ಮಹತ್ವದ್ದಾಗಿತ್ತು. ಆದರೆ ಇದ್ಯಾವುದೂ ಆಗಲಿಲ್ಲವೆಂದರು.



5 ಸಾವಿರ ಕೋಟಿ ರೂ. ಬಿಲ್ಲು ಬಾಕಿ : ಕರ್ನಾಟಕ ನೀರಾವರಿ ನಿಗಮ ಲಿಮಿಟೆಡ್ (ಕೆಎನ್‌ಎನ್‌ಎಲ್)ನಿಂದ 5 ಸಾವಿರ ಕೋಟಿ ರೂ. ಬಿಲ್ಲು ಬಾಕಿ ಉಳಿದಿವೆ. ಸಂವಿಧಾನದ 371(ಜೆ) ಪರಿಣಾಮಕಾರಿ ಅನುಷ್ಠಾನಕ್ಕೆ ಪ್ರತ್ಯೇಕ ಸಚಿವಾಲಯ ಸ್ಥಾಪನೆಗೆ ಮುಂದಾಗಿರುವುದು ಸ್ವಾಗತಾರ್ಹ, ಆದರೆ ಮೇಲ್ವಿಚಾರಣಾ ಸಮಿತಿ ಕೂಡ ಮಾಡಬೇಕಿತ್ತು ಎಂದು ಸಲಹೆ ನೀಡಿದರು. ಜೆಜೆಎಂ ಕೆಲಸ ವಿಫಲ: ಕೇಂದ್ರ ಸರ್ಕಾರದ ಜಲಜೀವನ ಮಿಷನ್ ಕಾಮಗಾರಿಯಿಂದಾಗಿ ಒಂದೇ ಒಂದು ಹಳ್ಳಿಗಳಿಗೆ ನೀರು ಸಿಕ್ಕಿಲ್ಲ. ಹಿಂದಿನ ಸರ್ಕಾರವು ಆಳವಾದ ಅಧ್ಯಯನ ಮಾಡದೆ ಬಹುಗ್ರಾಮ ಕುಡಿಯುವ ನೀರು ಯೋಜನೆ ಜಾರಿ ತಂದರೂ ಸಹ ನೀರು ಸಂಪೂರ್ಣ ವಿಫಲವಾಗಿದೆ. ಅಸ್ಥಿಪಂಜರದಂತಿರುವ ತೊಗರಿ ಮಂಡಳಿಗೆ ಶಕ್ತಿ ತುಂಬುವ ತೀರ್ಮಾನ ತೆಗೆದುಕೊಳ್ಳಬೇಕಿತ್ತು. ಹುದ್ದೆ, ಮುಂಬಡ್ತಿಯಲ್ಲಿ ಅನ್ಯಾಯ ಸರಿಪಡಿಸಲು ಪ್ರತ್ಯೇಕ ಟ್ರಿಬ್ಯೂನಲ್ ಆರಂಭಿಸಬೇಕಿತ್ತು ಎಂದು ಆತಂಕ ವ್ಯಕ್ತಪಡಿಸಿದರು. ಕಕ ಭಾಗದ ಶಾಸಕರ ಸಭೆ: ಅಕ್ಟೋಬರ್ ತಿಂಗಳಲ್ಲಿ ಬೆಂಗಳೂರಿನಲ್ಲಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲ ಶಾಸಕರು ಜತೆಗೂಡಿ ಸಭೆ ನಡೆಸಲು ಚಿಂತಿಸಲಾಗಿದೆ. ಸಂವಿಧಾನದ 371 ಜೆ ಕಲಂ ಸೌಲಭ್ಯಗಳಿಗಾಗಿ ಹಸಿರು ಪ್ರತಿಷ್ಠಾನ ಸಂಘಟನೆಯವರು ಮಾಡುತ್ತಿರುವ ವಿರೋಧಕ್ಕೆ ತಕ್ಕ ಉತ್ತರ ನೀಡಲು ವೇದಿಕೆ ಸಿದ್ಧಪಡಿಸಬೇಕಿದೆ ಎಂದರು.

## ಕಲಬುರಗಿ-ಯಾದಗಿರಿ ಮೀನುಗಾರರೊಂದಿಗೆ ಸಂವಾದ

# ಮೀನುಗಾರರ ಅನುಕೂಲಕ್ಕಾಗಿ ಸರ್ಕಾರದ ನೆರವು: ಮಂಕಾಳ ವೈದ್ಯ

**ಕಲಬುರಗಿ, ಸೆ.19–** ಮೂಲ ವೃತ್ತಿಯೇ ಮೀನುಗಾರಿಕೆ ಇದ್ದರೆ ಸ್ವಯಂ ಪ್ರೇರಣೆಯಿಂದ ಹಾಗೂ ನಿಮಗೆ ಅನುಕೂಲವಾಗುವ ರೀತಿ ಸರಕಾರದಿಂದ ಹಾಗೂ ಇಲಾಖೆಯಿಂದ ಸಹಾಯ ಮಾಡಬಹುದು ಎಂದು ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ್ ವೈದ್ಯ ಹೇಳಿದರು.



ಕಲಬುರಗಿಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮೀನುಗಾರರ ಸಂವಾದ ಕಾರ್ಯಕ್ರಮವನ್ನು ಮೀನುಗಾರಿಕೆ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವ ಮಂಕಾಳ ವೈದ್ಯ ಉದ್ಘಾಟಿಸಿದರು.

ಜಿಲ್ಲಾಧಿಕಾರಿ ಸಂಭಾಗಣದಲ್ಲಿ ಮೀನುಗಾರಿಕೆ ಇಲಾಖೆ ಮತ್ತು ಜಿಲ್ಲಾ ಪಂಚಾಯತ್ ಬುಧವಾರ ಆಯೋಜಿಸಿದ್ದ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆ ಮೀನುಗಾರರೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯಾದಗಿರಿ ಸಹಕಾರಿ ಸಂಘ ಅಧ್ಯಕ್ಷ ಮಾತನಾಡಿ, ವಿಶೇಷವಾಗಿ ಮೀನುಗಾರಿಕೆ ಅವರಿಗೆ ಪ್ರತ್ಯೇಕ್ಷವಾಗಿ ನಿವೇಶನಗಳು ಮೀನುಗಾರರ ಅವರದೇ ಆದ ಒಂದು ಸಮುದಾಯ ಭವನ, ಇವರ ಮಕ್ಕಳಿಗೆ ವಿಶೇಷವಾದ ಶಿಕ್ಷಣ ಸೌಲಭ್ಯವನ್ನು ಕೊಡಬೇಕು. ಕೆರೆಯಲ್ಲಿ ನದಿಯಲ್ಲಿ ಬಳಿ ಬಲೆ ಬಿಸಿದಾಗ ಅನಾಹುತ ಸಂಭವಿಸಿದರೆ ಅವರಿಗೆ 6 ಲಕ್ಷ ತೆಗೆದು 12 ಲಕ್ಷ ಹಣ ನೀಡಲು ಮುಜುವರ್ಜಿ ವಹಿಸಬೇಕೆಂದು ಮನವಿ ಮಾಡಿಕೊಂಡರು. ಚಿಂಚೋಳಿ ತಾಲೂಕಿನ ಸಹಕಾರಿ ಸಂಘದ ಅಧ್ಯಕ್ಷ ಬಿ.ಬಿ. ನಾಯಕ, ಚಿಂಚೋಳಿ ತಾಲೂಕಿನ ಚದ್ರಂಪಳ್ಳಿ ಡಾಂ ಇದೆ ಅಲ್ಲಿ ಐದು ಎಕರೆ ಜಾಗ ಇದೆ ಆದರೆ ಕಳೆದ ವರ್ಷ ಮಳೆ ಸರಿಯಾಗಿ ಬರಲಿಲ್ಲ ಆದರೆ ಈ ವಂಷಂಜ ಮಳೆ ಬಂದಿದೆ ಅದಕ್ಕೆ ಮೀನು ಮರಿಗಳು ಇಲ್ಲ ಹಾಗೂ ಮೀನಾ ಹಿಡಿಯುವ ಪರಿಕರ ಕೂಡಾ ಇಲ್ಲ, 11 ತಾಲೂಕಿನಲ್ಲಿಯೂ ಇದೇ ಸಮಸ್ಯೆ ಎದುರಾಗಿದೆ ಎಂದರು. ಸಭೆಯಲ್ಲಿ ಮೀನುಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಮಾಲಾ ಬಿ., ಬಳ್ಳಾರಿಯ ಮೀನುಗಾರಿಕೆ ಜಂಟಿ ನಿರ್ದೇಶಕ ಷಡಾಕ್ಷರಿ, ಆಪ್ತ ಕಾರ್ಯದರ್ಶಿ ರವಿಂದ್ರ ಪಿ.ಸಿ, ಕಲಬುರಗಿಯ ಎಸ್.ಆರ್. ನಾಗರಾಜ, ಯಾದಗಿರಿಯ ಶರಣಬಸವ, ಸುರಪೂರಿನ ಪದ್ಮಾವತಿ, ಗಣೇಶ, ಉಮೇಶ ಭೋವಿ ಶಶಿಕಲಾ ಜೆಡೆ ಕಾರ್ಯಕ್ರಮ ಉಪಸ್ಥಿತರಿದ್ದರು.

**ಸಂಘ–ಸಂಸ್ಥೆಗಳು ಹೆಚ್ಚಿನ ಕೆಲಸಗಳನ್ನು ಮಾಡಿದರೆ ಹೆಚ್ಚಿನ ಉದ್ಯೋಗದಲ್ಲಿ ಅಳವಡಿಸಿ ಕೊಳ್ಳಬಹುದು. ಕೊಲಿ ಸಮಾಜದ ಮುಖ್ಯ ಕಸಬು ಮೀನುಗಾರಿಕೆ ಆಗಿದ್ದರಿಂದ ನಮ್ಮ ಸರಕಾರ 3 ಸಾವಿರ ಕೋಟಿ ಹಣ ಬಿಡುಗಡೆ ಮಾಡಿದ್ದಾರೆ ಅದರಲ್ಲಿ ಶೇ.90ರಷ್ಟು ಕೊಲಿ ಸಮಾಜದವರೆ ಆಗಿರಬೇಕು. ಇವರಿಗಾಗಿಯೇ ಮೀನು ಮಾರುಕಟ್ಟೆ ಸ್ಥಾಪಿಸಬೇಕು.**

**–ತಿಪ್ಪಣ್ಣಪ್ಪ ಕಮಕನೂರ, ವಿಧಾನ ಪರಿಷತ್ ಸದಸ್ಯರು.**

### ಕಲಗುರ್ತಿಗೆ ಭೇಟಿ


**ಕಾಳಗಿ ತಾಲೂಕಿನ ಕಲಗುರ್ತಿ ಗ್ರಾಮಕ್ಕೆ ಸಚಿವ ಮಂಕಾಳ್ ವೈದ್ಯ ಭೇಟಿ ನೀಡಿ, ಪ್ರಧಾನ ಮಂತ್ರಿ ಮತ್ಸ್ಯ ಸಂಪದ ಯೋಜನೆ ಅಡಿ ಫಲಾನುಭವಿಗಳು ಕೈಗೊಂಡಿರುವ ವಿವಿಧ ಮೀನುಗಾರಿಕೆ ಚಟುವಟಿಕೆಗಳನ್ನು ಸಚಿವರು ಪರಿಶೀಲಿಸಿದರು. ಮೀನು ಮರಿ ಸಾಕಾಣಿಕೆ ಕೇಂದ್ರಕ್ಕೆ, ಯೋಜನೆಯಡಿ ರೈತರು ತಮ್ಮ ಜಮೀನಿನಲ್ಲಿ ಮೀನು ಕೃಷಿ ಕೊಳ ನಿರ್ಮಿಸಿ ಮೀನುಕೃಷಿ ಕೈಗೊಂಡಲ್ಲಿ 1 ಹೆಕ್ಟರ್, ವಿಸ್ತೀರ್ಣಕ್ಕೆ ಘಟಕ ವೆಚ್ಚ ರೂ. 11.00 ಲಕ್ಷಗಳಿದ್ದು ಇತರೆ 60 ರಷ್ಟು ಸಹಾಯಧನವಾಗಿ ಕೊಳ ನಿರ್ಮಾಣ ಹೂಡಿಕೆ ವೆಚ್ಚಗಳನ್ನು ನೀಡಲಾಗುವುದು ಎಂದರು.**

**ಕುಲಗುರ್ತಿ ಗ್ರಾಮದಲ್ಲಿ 10 ಹೆಕ್ಟೆರ್ ಮೀನು ಕೃಷಿ ನಿರ್ಮಾಣವಾಗಿದ್ದು, ಕೊಳಗಳಲ್ಲಿ ತ್ವರಿತವಾಗಿ ಬೆಳೆಯುವ ತಳಿಗಳು ಕಟ್ಲಾ, ರೊಹು ಮೈಗಾಲ್ ಸಾಮಾನ್ಯಗೆಂಡೆ ವಿವಿಧ ಮೀನು ಮರಿ ಬಿತ್ತನ ಮಾಡಿ ಲಾಭಗಳಿಸುತ್ತಾರೆ.**

## ವಿಜಯಪುರದ ಬಿಎಲ್‌ಡಿಇ ವಿಶ್ವವಿದ್ಯಾನಿಲಯ

# ಇಬ್ಬರು ಪ್ರಾಧ್ಯಾಪಕರಿಗೆ ವಿಶ್ವದ ಉನ್ನತ ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ

**ವಿಜಯಪುರ, ಸೆ.19–** ನಗರದ ಬಿ.ಎಲ್.ಡಿ.ಇ. ಡೀಮ್ಡ್ ವಿಶ್ವವಿದ್ಯಾಲಯದ ರಜಿಸ್ಟ್ರಾರ್ ಡಾ. ರಾಘವೇಂದ್ರ ಕುಲಕರ್ಣಿ ಮತ್ತು ಶರೀರ ಶಾಸ್ತ್ರವಿಜ್ಞಾನದ ವಿಭಾಗದ ಪ್ರಾಧ್ಯಾಪಕ ಹಾಗೂ ಪ್ರೊಫೆಸರ್ ಡಾ. ಕುಶಾಲ ದಾಸ ಅವರು ಪ್ರಸಕ್ತ 2024ನೇ ವರ್ಷದ ವಿಶ್ವದ ಉನ್ನತ ಶೇ.2 ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ.





ಡಾ ರಾಘವೇಂದ್ರ ಕುಲಕರ್ಣಿ | ಡಾ ಕುಸಾಲ್ ದಾಸ

ಔಷಧ ವಿಜ್ಞಾನ, ಶರೀರಶಾಸ್ತ್ರ ಹಾಗೂ ಪಾಲಿಮರ್ ಕ್ಷೇತ್ರದಲ್ಲಿನ ಸಂಶೋಧನೆಗಾಗಿ ಇಬ್ಬರೂ ಸಂಶೋಧಕರಿಗೆ ಈ ವರ್ಷದ ವಿಶ್ವದ ಉನ್ನತ ಶೇ.2 ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ಸಿಕ್ಕಿದೆ. ಅಮೆರಿಕಾದ ಸ್ಟ್ಯಾನಫೋರ್ಡ್ ವಿಶ್ವವಿದ್ಯಾಲಯ ಹಾಗೂ ನೆದರಲ್ಯಾಂಡ್‌ನ ಎಲ್ಸವಿಯರ್ ಪ್ರಕಾಶನ ಸಂಸ್ಥೆಯು ಪ್ರತಿ ವರ್ಷ ಸೈಟೇಷನ್ ಇಂಡೆಕ್ಸ್ ಆಧಾರದ ಮೇಲೆ ಒಂದು ಲಕ್ಷಕ್ಕೂ ಹೆಚ್ಚು ವಿಜ್ಞಾನಿಗಳನ್ನು ಗುರುತಿಸಿ ಶ್ರೇಷ್ಠ ಶೇ.2 ವಿಜ್ಞಾನಿಗಳ ಪಟ್ಟಿಯಲ್ಲಿ ಸ್ಥಾನ ನೀಡುತ್ತದೆ.

ಡಾ. ರಾಘವೇಂದ್ರ ಕುಲಕರ್ಣಿ ಸತತ 4ನೇ ಬಾರಿ ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಅವರು ಪಾಲಿಮರ್ ಆಧಾರಿತ ಔಷಧ ವಿಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಮಾಡಿದ ಭಾರತದ ಸಂಶೋಧಕರ ಪೈಕಿ 20ನೇ ಸ್ಥಾನ ಮತ್ತು ವಿಶ್ವದಲ್ಲಿ 146ನೇ ಸ್ಥಾನ ಪಡೆದಿದ್ದಾರೆ.

ಡಾ. ರಾಘವೇಂದ್ರ ಕುಲಕರ್ಣಿ ಅವರು 130 ಸಂಶೋಧನಾ ಪ್ರಕಟನೆಗಳನ್ನು ರಚಿಸಿದ್ದಾರೆ. ಅಲ್ಲದೇ, 10 ಪೇಟೆಂಟ್‌ಗಳನ್ನೂ ಪಡೆದಿದ್ದಾರೆ ಮತ್ತು ಇವರು ನಡೆಸಿದ ಸಂಶೋಧನೆಗಾಗಿ ರೂ. 97 ಲಕ್ಷ ಅನುದಾನವೂ ಒಲಿದು ಬಂದಿದೆ.

ಡಾ. ಕುಶಾಲದಾಸ ಸತತ 2ನೇ ಬಾರಿ ಈ ಪಟ್ಟಿಯಲ್ಲಿ ಸ್ಥಾನ ಪಡೆದಿದ್ದಾರೆ. ಅವರು ಶರೀರಶಾಸ್ತ್ರ ವಿಜ್ಞಾನ ಕ್ಷೇತ್ರದಲ್ಲಿ ಸಂಶೋಧನೆ ಮಾಡಿರುವ ಭಾರತದ ಸಂಶೋಧಕರ ಪೈಕಿ 229ನೇ ಸ್ಥಾನ ಹಾಗೂ ವಿಶ್ವದಲ್ಲಿ 2730ನೇ ಸ್ಥಾನ ಪಡೆದಿದ್ದಾರೆ.

ಅವರು 146 ಸಂಶೋಧನಾ ಪ್ರಕಟನೆಗಳನ್ನು ರಚಿಸಿದ್ದಾರೆ. ಅಲ್ಲದೇ, 03 ಪೇಟೆಂಟ್‌ಗಳನ್ನೂ ಪಡೆದಿದ್ದಾರೆ ಹಾಗೂ ಸಂಶೋಧನೆಗಾಗಿ ರೂ. 40 ಲಕ್ಷ ಅನುದಾನವನ್ನೂ ಪಡೆದುಕೊಂಡಿದ್ದಾರೆ.

ಇವರ ಸಾಧನೆಗೆ ಬಿ. ಎಲ್. ಡಿ. ಇ. ಡೀಮ್ಡ್‌ವಿಶ್ವವಿದ್ಯಾಲಯದ ಕುಲಾಧಿಪತಿ ಎಂ. ಬಿ. ಪಾಟೀಲ, ಸಮಕುಲಾಧಿಪತಿ ಡಾ. ವೈ. ಎಂ. ಜಯರಾಜ, ಕುಲಪತಿ ಡಾ. ಆರ್. ಎಸ್. ಮುಧೋಳ ಹಾಗೂ ಆಡಳಿತ ಮಂಡಳಿಯವರು ಅಭಿನಂದನೆ ಸಲ್ಲಿಸಿದ್ದಾರೆ.

# ಬಳ್ಳಾರಿ ಸೆನ್ ಪೊಲೀಸರ ಕಾರ್ಯಾಚರಣೆ: 1.21 ಕೋಟಿ ರೂಪಾಯಿ ವಶ

**ಬಳ್ಳಾರಿ, ಸೆ.19–** ಆರ್ಥಿಕ, ಮಾದಕ ದ್ರವ್ಯ ಮತ್ತು ಆರ್ಥಿಕ ಅಪರಾಧ ಪೊಲೀಸ್ ಠಾಣೆಯ ಅಧಿಕಾರಿಗಳು ಭರ್ಜರಿ ಕಾರ್ಯಾ ಚರಣೆ ನಡೆಸಿ ಒಬ್ಬ ವ್ಯಕ್ತಿಯನ್ನು ಬಂಧಿಸಿ ಆತನಿಂದ 1,21,04,500/– ರೂಪಾಯಿಗಳು ನಗದು ಹಣ ವಶಪಡಿಸಿಕೊಂಡಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ತಿಳಿಸಿದ್ದಾರೆ.



ಅವರು ಜಿಲ್ಲಾ ಪೊಲೀಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿ, ಮಧ್ಯಪ್ರದೇಶ ಮೂಲದ ಅಜಯ್ ಕುಮಾರ್ ಜಾಸ್ವಾಲ್ ಎಂಬ ವ್ಯಕ್ತಿಯನ್ನು ಪತ್ತೆ ಹಚ್ಚಿ ಬಂಧಿಸಿ ಆತನಿಂದ 1,21,04,500 ಹಣವನ್ನು ವಶಪಡಿಸಿಕೊಂಡಿದ್ದಾರೆ. ಮತ್ತು ಆರೋಪಿತನ ಬೇರೆ ಬೇರೆ ಬ್ಯಾಂಕ್ ಖಾತೆಗಳಲ್ಲಿದ್ದ ರೂ. 27,97,582/– ಹಣವನ್ನು ಡೆಬಿಟ್ ಫ್ರಿಜ್ ಮಾಡಿಸಿರುತ್ತದೆ. ಒಟ್ಟು ರೂ. 1,49,02,082/– ಹಣವನ್ನು ಮತ್ತು ಆರೋಪಿತನು ಆನ್‌ಲೈನ್ ವಂಚನೆಗೆ ಉಪಯೋಗಿಸಿದ ಒಂದು ವಿವೋ ಕಂಪನಿಯ ಮೊಬೈಲ್ ಜಪ್ತಿ ಮಾಡಿರುತ್ತಾರೆ.

ಇದೇ ಸೆ.3ರಂದು ರಂದು ವರದಿಯಾದ ಪ್ರಕರಣದನ್ವಯ ಬಳ್ಳಾರಿ ನಗರದ ಹಿಂದುಸ್ತಾನ್ ಮೆಟಲ್ ಪ್ರವೇಟ್ ಲಿಮಿಟೆಡ್ ಕಂಪನಿಯವರು ಅಗರ್‌ವಾಲ್ ಕೋಲ್ ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್ ಕಂಪನಿಯಿಂದ ಕೋಲ್ ಖರೀದಿ ಮಾಡುತ್ತಿದ್ದು, ಅವರು ಕೊಟ್ಟ ಬ್ಯಾಂಕ್ ಖಾತೆಗಳಿಗೆ ಹಣವನ್ನು ಅನ್‌ಲೈನ್ ಮೂಲಕ ವರ್ಗಾವಣೆ ಮಾಡುತ್ತಿದ್ದರು. ಈ ಮಾಹಿತಿಯನ್ನು ಸಂಗ್ರಹಿಸಿದ ಆರೋಪಿ ಕಂಪನಿಯ ಬ್ಯಾಂಕ್ ಖಾತೆ ಸಂಖ್ಯೆ ಬದಲಾವಣೆ ಆಗಿದೆ ಎಂದು ಫೇಕ್ ಇ– ಮೇಲ್ ಐಡಿ ಮೂಲಕ ತನ್ನ ಮದ್ಯಪ್ರದೇಶ ರಾಜ್ಯದ ಇಂಡಸ್ ಲ್ಯಾಂಡ್ ಬ್ಯಾಂಕ್ ಖಾತೆ ಸಂಖ್ಯೆಯನ್ನು ಕಳುಹಿಸಿ ಅನ್‌ಲೈನ್ ವಂಚನೆ ಮೂಲಕ ತನ್ನ ಬ್ಯಾಂಕ್ ಖಾತೆಗೆ ಹಣ ರೂ. 2,11,50,224/– ಜಮಾ ಮಾಡಿಸಿಕೊಂಡು ಕಂಪನಿಗೆ ಮೋಸ ಮತ್ತು ವಂಚನೆ ಮಾಡಿದ್ದಾನೆ.

## ಬಳ್ಳಾರಿಯ ಆರ್‌ವೈಎಂಇಸಿ ಶಿಕ್ಷಣ ಸಂಸ್ಥೆ

# 2024-25 ಸಾಲಿನ ಹೊಸ ವಿದ್ಯಾರ್ಥಿಗಳಿಗೆ ಸ್ವಾಗತ

**ಬಳ್ಳಾರಿ, ಸೆ.19–** ಬಳ್ಳಾರಿ ನಗರದ ಪ್ರತಿಷ್ಠಿತ ಶಿಕ್ಷಣ ಸಂಸ್ಥೆಯಾದ ರಾವ್ ಬಹದ್ದೂರ್ ವೈ ಮಹಾ ಬಲೇಶ್ವರಪ್ಪ ತಾಂತ್ರಿಕ ಮಹಾ ವಿದ್ಯಾಲಯದಲ್ಲಿ ಗುರುವಾರ 2024–25ನೇ ಸಾಲಿನ ಹೊಸ ವಿದ್ಯಾರ್ಥಿಗಳಿಗೆ ಸ್ವಾಗತ ಕಾರ್ಯಕ್ರಮ ನವಸಂಗಮ" ಸ್ಟೂಡೆಂಟ್‌ಇಂಡಕ್ಷನ್ ಪ್ರೋಗ್ರಂ2024–25" ಜರುಗಿತು.



ಈ ಕಾರ್ಯಕ್ರಮದಲ್ಲಿ ವೀರಶೈವ ವಿದ್ಯಾವರ್ಧಕ ಸಂಘದ ಅಧ್ಯಕ್ಷರು, ಅಲ್ಲಂಗುರು ಬಸವರಾಜ, ಮುಖ್ಯ ಅತಿಥಿ ಮನೀಶ್‌ಕುಮಾರ್, ಹಿರಿಯ ಉಪಾಧ್ಯಕ್ಷರು, ಜಿಂದಾಲ್ ಸ್ಟೀಲ್ ವರ್ಕ್ಸ್, ತೋರಣಗಲ್ಲು, ಬಳ್ಳಾರಿ, ವಿ.ವಿ.ಸಂಘ, ಆರ್.ವೈ.ಎಂ.ಇ.ಸಿ.ಯ ಅಧ್ಯಕ್ಷರು, ಜಾನೆಕುಂಟೆ ಬಸವರಾಜ, ಮೊದಲನೇ ವರ್ಷ ವಿದ್ಯಾರ್ಥಿ ವೃಂದರ ಡಾ ಚಿನ್ನಾ.ವಿ.ಗೌಡರು, ಡಾ.ಪುನೀತ್‌ಜಿ.ಜೆ., ಮಹಾ ವಿದ್ಯಾಲಯದ ಶಿಕ್ಷಕವೃಂದದವರು, ಸಿಬ್ಬಂದಿ ವರ್ಗದವರು ವಿದ್ಯಾರ್ಥಿ ವೃಂದದವರು, ಪೋಷಕರು ಭಾಗವಹಿಸಿದ್ದರು.



ನವದೆಹಲಿಯಲ್ಲಿ ಗುರುವಾರ ನೌಕಾ ಕಮಾಂಡರ್‌ಗಳ ಸಮ್ಮೇಳನದ ಎರಡನೇ ಆವೃತ್ತಿಯ ಭಾಗವಾಗಿ ಆಯೋಜಿಸಲಾದ ತಾಂತ್ರಿಕ ಪ್ರದರ್ಶನವನ್ನು ರಕ್ಷಣಾ ಸಚಿವ ರಾಜನಾಥ್ ಸಿಂಗ್ ವೀಕ್ಷಿಸಿದರು

# ಹಿಂದೂ ದೇವತೆಗಳಿಗೆ ಕಾಂಗ್ರೆಸ್ ಅವಮಾನ–ಪ್ರಧಾನಿ ಮೋದಿ ವಾಗ್ದಾಳಿ



**ನವದೆಹಲಿ, ಸೆ.19–** ಕೆಲ ಮತಬ್ಯಾಂಕ್‌ಗಾಗಿ ಕಾಂಗ್ರೆಸ್ನಿಂದ ಹಿಂದೂ ದೇವತೆಗಳಿಗೆ ನಿರಂತರವಾಗಿ ಅಪಮಾನ ಮಾಡಲಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಅವರು ಗಂಭೀರ ಆರೋಪ ಮಾಡಿದರು.

ಇಂದು ಜಮ್ಮು ಮತ್ತು ಕಾಶ್ಮೀರದ ವಿಧಾನಸಭಾ ಚುನಾವಣೆ ಹಿನ್ನೆಯಲ್ಲಿ ಕತ್ರಾದಲ್ಲಿ ಪ್ರಚಾರದಲ್ಲಿ ಭಾಷಣ ಮಾಡಿದ ಅವರು, ವಿದೇಶದಲ್ಲೂ ಕಾಂಗ್ರೆಸ್ ನಾಯಕರಿಂದ ಹಿಂದೂಗಳಿಗೆ, ಹಿಂದೂ ದೇವರುಗಳಿಗೆ ಅಪಚಾರವಾಗುತ್ತಿದೆ.

ದೇವತೆಯರು ದೇವರಲ್ಲ ಎಂದು ಕಾಂಗ್ರೆಸ್‌ನವರು ಹೇಳುತ್ತಾರೆ. ಇಡೀ ದೇಶದಲ್ಲಿ ಕಾಂಗ್ರೆಸ್ ಭ್ರಷ್ಟಾಚಾರದ ಪಕ್ಷವಾಗಿದೆ ಎಂದು ಪ್ರಧಾನಿ ಗುಡುಗಿದರು. ಕಾಶ್ಮೀರದಲ್ಲಿ ಪಿಡಿಪಿ ಮತ್ತು ಕಾಂಗ್ರೆಸ್ ಪಾಕಿಸ್ತಾನದ ಅಜೆಂಡಾವನ್ನು ಸ್ಥಾಪಿಸಲು ಇಚ್ಚಿಸಿವೆ ಎಂದು ಆಪಾದಿಸಿದರು.

ಇತ್ತೀಚೆಗೆ ಕರ್ನಾಟಕದ ಮಂಡ್ಯ ಜಿಲ್ಲೆಯ ನಾಗಮಂಗಲದಲ್ಲಿ ಗಣೇಶ ವಿಸರ್ಜನೆ ವೇಳೆ ಉಂಟಾಗಿದ್ದ ಕೋಮು ಗಲಭೆ, ಹಿಂಸಾಚಾರದ ಘಟನೆ, ಗಣೇಶ ಮೂರ್ತಿಗಳನ್ನು ಪೊಲೀಸ್ ವ್ಯಾನ್‌ಗಳನ್ನು ಕೂರಿಸಿದ್ದ ಪ್ರಕರಣವನ್ನು ಉಲ್ಲೇಖಿಸಿ ಮೋದಿಯವರು ಕಾಂಗ್ರೆಸ್ ವಿರುದ್ಧ ಕುಟುಕಿದ್ದರು.

ಹಿಂದೂ ದೇವರುಗಳಿಗೆ ಕಾಂಗ್ರೆಸ್ ಕಂಬಿಹಿಂದೆ ಹಾಕುತ್ತಿದೆ ಎಂದೂ ಚುನಾವಣೆಯ ಪ್ರಚಾರದಲ್ಲಿ ಆಕ್ರೋಶ ಹೊರ ಹಾಕಿದ್ದರು.

# ಚಂದ್ರಬಾಬು ನಾಯ್ಡು ಆರೋಪ ತಳ್ಳಿಹಾಕಿದ ಜಗನ್ ರೆಡ್ಡಿ ಪಕ್ಷ



**ಅಮರಾವತಿ, ಸೆ.19–** ಹಿಂದಿನ ವೈಎಸ್‌ಆರ್ ಕಾಂಗ್ರೆಸ್ ಸರ್ಕಾರದಲ್ಲಿ ತಿರುಪತಿ ಲಡ್ಡು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗುತ್ತಿತ್ತು ಎಂದು ಆಂಧ್ರಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಗಂಭೀರ ಆರೋಪ ಮಾಡಿದ್ದಾರೆ. ಆದರೆ, ಸಿಎಂ ನಾಯ್ಡು ಆರೋಪವನ್ನು ಮಾಜಿ ಸಿಎಂ ವೈಎಸ್ ಜಗನ್ ಮೋಹನ್ ರೆಡ್ಡಿ ನೇತೃತ್ವದ ಪಕ್ಷವು ತಳ್ಳಿಹಾಕಿದೆ. ಇದು ದುರುದ್ದೇಶಪೂರಿತವಾಗಿದೆ ಎಂದು ಟೀಕಿಸಿದೆ.

ಬುಧವಾರ ನಡೆದ ಎನ್‌ಡಿಎ ಶಾಸಕಾಂಗ ಪಕ್ಷದ ಸಭೆಯನ್ನುದ್ದೇಶಿಸಿ ಮಾತನಾಡಿದ ನಾಯ್ಡು, ಜಗನ್ ರೆಡ್ಡಿ ಸರ್ಕಾರದ ಅವಧಿಯಲ್ಲಿ ತಿರುಪತಿಯ ಶ್ರೀ ವೆಂಕಟೇಶ್ವರ ದೇವಸ್ಥಾನವು 'ಪ್ರಸಾದ'ವಾಗಿ ನೀಡುವ ಲಡ್ಡುಗಳನ್ನು ತಯಾರಿಸಲು ಪ್ರಾಣಿಗಳ ಕೊಬ್ಬನ್ನು ಬಳಸಲಾಗುತ್ತಿತ್ತು ಎಂದು ಆರೋಪಿಸಿದ್ದಾರೆ. ಕಳೆದ 5 ವರ್ಷಗಳಲ್ಲಿ ವೈಎಸ್‌ಆರ್ ಕಾಂಗ್ರೆಸ್ ಪಕ್ಷದ ನಾಯಕರು ತಿರುಮಲದ ಪಾವಿತ್ರ್ಯತೆಯನ್ನು ಹಾಳು ಮಾಡಿದ್ದಾರೆ. ಅವರು 'ಅನ್ನದಾನ' (ಉಚಿತ ಊಟ) ಗುಣಮಟ್ಟದಲ್ಲಿ ರಾಜಿ ಮಾಡಿಕೊಂಡಿದ್ದಾರೆ. ಪವಿತ್ರ ತಿರುಮಲ ಲಡ್ಡುವನ್ನು ತುಪ್ಪದ ಬದಲು ಪ್ರಾಣಿಗಳ ಕೊಬ್ಬನ್ನು ಬಳಸಿ ಕಲುಷಿತಗೊಳಿಸಿದ್ದಾರೆ. ಆದರೆ, ನಾವು ಈಗ ಶುದ್ಧ ತುಪ್ಪವನ್ನು ಬಳಸುತ್ತಿದ್ದೇವೆ. ತಿರುಮಲ ತಿರುಪತಿ ದೇವಸ್ಥಾನ ಪಾವಿತ್ರ್ಯತೆಯನ್ನು ಕಾಪಾಡಲು ಪ್ರಯತ್ನಿಸುತ್ತಿದ್ದೇವೆ ಎಂದು ತಿಳಿಸಿದ್ದಾರೆ. ಚಂದ್ರಬಾಬು ನಾಯ್ಡು ಅವರು ತಿರುಮಲದ ಪಾವಿತ್ರ್ಯತೆ ಮತ್ತು ಕೋಟ್ಯಂತರ ಹಿಂದೂಗಳ ನಂಬಿಕೆಯನ್ನು ತೀವ್ರವಾಗಿ ಹಾಳು ಮಾಡಿದ್ದಾರೆ. ತಿರುಮಲ ಪ್ರಸಾದದ ಬಗ್ಗೆ ಅವರ ಹೇಳಿಕೆಗಳು ಅತ್ಯಂತ ದುರುದ್ದೇಶಪೂರಿತವಾಗಿವೆ. ಯಾವುದೇ ವ್ಯಕ್ತಿ ಇಂತಹ ಮಾತುಗಳನ್ನು ಆಡುವುದಿಲ್ಲ. ಅಂತಹ ಆರೋಪಗಳನ್ನು ಮಾಡುವುದಿಲ್ಲ ರಾಜ್ಯಸಭಾ ಸಂಸದ ವೈವಿ ಸುಬ್ಬಾ ರೆಡ್ಡಿ ಖಂಡಿಸಿದ್ದಾರೆ. ರಾಜಕೀಯ ಲಾಭಕ್ಕಾಗಿ ಚಂದ್ರಬಾಬು ನಾಯ್ಡು ಯಾವ ಮಟ್ಟಕ್ಕೂ ಇಳಿಯುತ್ತಾರೆ ಎಂಬುದು ಮತ್ತೆ ಸಾಬೀತಾಗಿದೆ. ಭಕ್ತರ ನಂಬಿಕೆ ಗಟ್ಟಿಗೊಳಿಸಲು ನಾನು ಕುಟುಂಬ ಸಮೇತ ತಿರುಮಲ ಪ್ರಸಾದದ ವಿಚಾರವಾಗಿ ಪರಮಾತ್ಮನ ಮುಂದೆ ಪ್ರಮಾಣ ವಚನ ಸ್ವೀಕರಿಸಲು ಸಿದ್ಧ. ಚಂದ್ರಬಾಬು ನಾಯ್ಡು ತಮ್ಮ ಕುಟುಂಬದೊಂದಿಗೆ ಅದೇ ರೀತಿ ಮಾಡಲು ಸಿದ್ಧರಿದ್ದಾರೆಯೇ ಎಂದು ಸುಬ್ಬಾ ರೆಡ್ಡಿ ಸವಾಲು ಹಾಕಿದ್ದಾರೆ.

# ದಲಿತ ಯುವಕನಿಂದ ಶೂ ನೆಕ್ಕಿಸಿ, ಹಲ್ಲೆ: ಆರೋಪ

**ಲಕ್ನೋ, ಸೆ.19–** ದಲಿತ ಯುವಕನ ಮೇಲೆ ಹಲ್ಲೆ ನಡೆಸಿ, ಆತನಿಂದ ಶೂ ನೆಕ್ಕಿಸಿದ ಪ್ರಬಲ ಜಾತಿಗರು ಜಾತಿ ದೌರ್ಜನ್ಯ ಎಸಗಿದ್ದಾರೆ ಎಂಬ ಆರೋಪ ಉತ್ತರ ಪ್ರದೇಶದ ರಾಯ್ ಬರೇಲಿಯಿಂದ ಕೇಳಿ ಬಂದಿದೆ. ಈ ಘಟನೆಗೆ ಸಂಬಂಧಿಸಿದ್ದು ಎನ್ನಲಾದ ವಿಡಿಯೊವೊಂದು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದೆ.

ವರದಿಗಳ ಪ್ರಕಾರ, ವೈರಲ್ ವಿಡಿಯೋದಲ್ಲಿ ಜಾತಿ ದೌರ್ಜನ್ಯಕ್ಕೆ ಒಳಗಾಗಿರುವ ಯುವಕನನ್ನು ರಾಯ್ಬರೇಲಿ ಬಳಿಯ ಉಂಚಹಾರ್ ಕೊತ್ವಾಲಿ ಪ್ರದೇಶದ ಸವಯ್ಯ ರಾಜೇ ಗ್ರಾಮದ ನಿವಾಸಿ ಅಮನ್ ಸಿಂಗ್ ಎಂದು ಗುರುತಿಸಲಾಗಿದೆ.

ಪ್ರಕರಣ ಸಂಬಂಧ 15 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಾಗಿದೆ. ವಿಡಿಯೋ ಕುರಿತು ಸಾಮಾಜಿಕ ಜಾಲತಾಣಗಳ ಮೂಲಕ ಪ್ರತಿಕ್ರಿಯೆ ನೀಡಿರುವ ಪೊಲೀಸ್ ಅಧಿಕಾರಿ ಡಾಲ್ಮ ಅರುಣ್ ನೌಹರ್ ಅವರು ಇದು ಹಳೆಯ ಘಟನೆ. ಈ ಸಂಬಂಧ ಉಂಚಹಾರ್ ಪೊಲೀಸರು ಕ್ರಮ ಕೈಗೊಂಡಿದ್ದಾರೆ. ಸಂತ್ರಸ್ತ ಯುವಕ ನೀಡಿದ ದೂರು ಆಧರಿಸಿ 15 ಮಂದಿಯ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ ಪೊಲೀಸರ ಎಫ್‌ಐಆರ್ ಪ್ರಕಾರ, ಕಳೆದ ಆ.21ರಂದು ಘಟನೆ ನಡೆದಿದೆ.

ಸಂತ್ರಸ್ತ ಅಮನ್ ಸಿಂಗ್ ಕೆಲಸದ ನಿಮಿತ್ತ ಉಂಚಹಾರ್ಗೆ ಬೈಕ್ನಲ್ಲಿ ತೆರಳಿದ್ದರು. ಅಲ್ಲಿ ಅವರ ಬೈಕ್ಗೆ ಕಾರಿನಲ್ಲಿ ಬಂದ ನಾಲ್ವರು ಡಿಕ್ಕಿ ಹೊಡೆದು, ಅಪಹರಿಸಿ ಹಲ್ಲೆ ಮಾಡಿದ್ದಾರೆ ಎಂದು ತಿಳಿದು ಬಂದಿದೆ.

## ಜಮ್ಮು-ಕಾಶ್ಮೀರ ಚುನಾವಣಾ ಪ್ರಚಾರ

# ಶ್ರೀನಗರ–ಕತ್ರಾದಲ್ಲಿ ಪ್ರಧಾನಿ ಮೋದಿ ರ್‍ಯಾಲಿ



**ಶ್ರೀನಗರ, ಸೆ.19–** ಪ್ರಧಾನಿ ನರೇಂದ್ರ ಮೋದಿ ಅವರು ಗುರುವಾರ ಶ್ರೀನಗರ ಮತ್ತು ಕತ್ರಾದಲ್ಲಿ ಚುನಾವಣಾ ರ್‍ಯಾಲಿ ನಡೆಸಿದರು. ಮಧ್ಯಾಹ್ನ 12 ಗಂಟೆಗೆ ಶ್ರೀನಗರದ ಶೇರ್–ಎ–ಕಾಶ್ಮೀರ್ ಕ್ರಿಕೆಟ್ ಸ್ಟೇಡಿಯಂನಲ್ಲಿ ಸಾರ್ವಜನಿಕ ರ್‍ಯಾಲಿಯನ್ನುದ್ದೇಶಿಸಿ ಅವರು ಮಾತನಾಡಿದರು.

ಜಮ್ಮು ಮತ್ತು ಕಾಶ್ಮೀರದಲ್ಲಿ ಸೆಪ್ಟೆಂಬರ್ 25 ರಂದು ನಡೆಯುವ ಎರಡನೇ ಹಂತದ ವಿಧಾನಸಭಾ ಚುನಾವಣೆಯ ತಯಾರಿಗೆ ಬಿಜೆಪಿ ಸಜ್ಜಾಗಿದ್ದು, ಮೋದಿ ಅವರು ಪ್ರಚಾರದ ಅಖಾಡಕ್ಕೆ ಇಳಿದಿದ್ದಾರೆ. ಹಾಗೆಯೇ ಮಧ್ಯಾಹ್ನ 3:00 ಗಂಟೆಗೆ ಕತ್ರಾದಲ್ಲಿರುವ ಮಾತಾ ವೈಷ್ಣೋ ದೇವಿ ಕ್ಷೇತ್ರ ಮಂಡಳಿಯ ಕ್ರೀಡಾ ಸಂಕೀರ್ಣದಲ್ಲಿ ನಡೆಯುವ ಇನ್ನೊಂದು ಕಾರ್ಯಕ್ರಮದಲ್ಲಿ ಮೋದಿ ಭಾಗವಹಿಸಿದ್ದರು.

ಈ ಸಂಬಂಧ ಮಾತನಾಡಿರುವ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ತರುಣ್ ಚುಗ್, ಪ್ರಧಾನಿ ಮೋದಿ ಅವರ ಜಮ್ಮು–ಕಾಶ್ಮೀರ ಭೇಟಿಯು ಗೇಮ್ ಚೇಂಜರ್.ಜಮ್ಮು–ಕಾಶ್ಮೀರ ಜನರು ಪ್ರಧಾನಿಯನ್ನು ಪ್ರೀತಿಸುತ್ತಾರೆ. ಈ ಹಿಂದೆ ಅವರು ಜಮ್ಮು–ಕಾಶ್ಮೀರಕ್ಕೆ ಭೇಟಿ ನೀಡಿದಾಗಲೆಲ್ಲಾ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸ್ವಾಗತಿಸಿರುವುದನ್ನು ನಾವು ನೋಡಿದ್ದೇವೆ. ಗುರುವಾರ ಪ್ರಧಾನಿ ಮೋದಿಯವರ ಭೇಟಿಯು ಕಣಿವೆ ಜನರಿಗೆ ತುಂಬಾ ಖುಷಿಕೊಡುತ್ತದೆ ಎಂದರು.

ಮೋದಿ ಭೇಟಿ ಹಿನ್ನೆಲೆ ವಿಶೇಷ ರಕ್ಷಣಾ ಗುಂಪಿನ (SPG) ಸಮನ್ವಯದಲ್ಲಿ ಜಮ್ಮು–ಕಾಶ್ಮೀರ ಪೊಲೀಸರು ಬಿಗಿ ಭದ್ರತಾ ವ್ಯವಸ್ಥೆ ಮಾಡಿದ್ದಾರೆ. ನಾಲ್ಕು ದಿನಗಳ ಮುಂಚಿತವಾಗಿ ಶ್ರೀನಗರಕ್ಕೆ ಆಗಮಿಸಿರುವ ಎಸ್‌ಪಿಜಿ ತಂಡ, ಪೊಲೀಸ್ ಅಧಿಕಾರಿಗಳೊಂದು ಭದ್ರತೆಯ ಮೇಲ್ವಿಚಾರಣೆ ನಡೆಸಿತ್ತು.

# ರಾಹುಲ್ ವಿರುದ್ಧದ ಟೀಕೆಗಳ ಪಟ್ಟಿ ನೀಡಿದ್ದ 'ಕೈ'ಗೆ ಬಿಜೆಪಿ ತಿರುಗೇಟು

**ನವದೆಹಲಿ, ಸೆ.19–** ಪ್ರಧಾನಿಗೆ 'ಮೌತ್ ಕಾ ಸೌದಾಗರ್' (ಸಾವಿನ ವ್ಯಾಪಾರಿ) ಎಂಬ ಅವಹೇಳನಕಾರಿ ಪದವನ್ನು ಬಳಸಿದ್ದು ರಾಹುಲ್ ಗಾಂಧಿ ಅವರ ತಾಯಿ ಸೋನಿಯಾ ಗಾಂಧಿ ಅಲ್ಲವೇ ನೀವು ಮತ್ತು ನಿಮ್ಮ ಪಕ್ಷವು ಇಂತಹ ನಾಚಿಕೆಯಿಲ್ಲದ ಹೇಳಿಕೆಗಳನ್ನು ವೈಭವೀಕರಿಸಿದ್ದೀರಿ. ಆಗ ಕಾಂಗ್ರೆಸ್ ರಾಜಕೀಯ ಸೌಹಾರ್ದತೆಯನ್ನು ಮರೆತುಬಿಟ್ಟಿತ್ತೇ ಎಂದು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಮಲ್ಲಿಕಾರ್ಜುನ್ ಖರ್ಗೆ ಅವರನ್ನು ಪ್ರಶ್ನಿಸಿದ್ದಾರೆ.

ರಾಹುಲ್ ಗಾಂಧಿ ವಿರುದ್ಧ ಬಿಜೆಪಿ ನಾಯಕರ ಆಕ್ಷೇಪಾರ್ಹ ಹೇಳಿಕೆಯನ್ನು ಖಂಡಿಸಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಪ್ರಧಾನಿ ನರೇಂದ್ರ ಮೋದಿಯವರಿಗೆ ಪತ್ರ ಬರೆದಿದ್ದರು. ಇದಾದ ಎರಡು ದಿನಗಳ ನಂತರ ಸಚಿವರೂ ಆದ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಅವರು ಪ್ರಧಾನಿ ವಿರುದ್ಧ ಕಾಂಗ್ರೆಸ್ ನಾಯಕರು ಬಳಸಿರುವ ಅವಹೇಳನಕಾರಿ ಪದಗಳನ್ನು ಪಟ್ಟಿ ಮಾಡಿ ಖರ್ಗೆಯವರಿಗೆ ಮರು ಪತ್ರ ಬರೆದಿದ್ದು ಹಲವು ಪ್ರಶ್ನೆ ಕೇಳಿದ್ದಾರೆ.

ಕಾಂಗ್ರೆಸ್ ನಾಯಕರು, ಪ್ರಧಾನಿಯನ್ನು ಹಾವು, ಚೇಳು, ರಾಕ್ಷಸ, ಪಿಕ್ ಪಾಕೆಟ್ ಮತ್ತು ಹೇಡಿ ಎಂದು ಕರೆದಿದ್ದಾರೆ. ಅಷ್ಟೇ ಅಲ್ಲ ಅವರ ಪೋಷಕರನ್ನು ಸಹ ಅವಮಾನಿಸಲಾಗಿದೆ. ರಾಹುಲ್ ಗಾಂಧಿಯವರು ವಿದೇಶಕ್ಕೆ ಹೋಗಿ ಮೀಸಲಾತಿಯನ್ನು ಕೊನೆಗೊಳಿಸುವ ಮತ್ತು ದಲಿತರು, ಹಿಂದುಳಿದ ವರ್ಗಗಳು ಮತ್ತು ಬುಡಕಟ್ಟು ಸಮುದಾಯಗಳ ಜನರ ಹಕ್ಕುಗಳನ್ನು ಕಸಿದುಕೊಳ್ಳುವ ಬಗ್ಗೆ ಮಾತನಾಡುತ್ತಾರೆ ಎಂದು ಕಿಡಿಕಾರಿದ್ದಾರೆ. ಭಾರತದ ಪ್ರಜಾಪ್ರಭುತ್ವವನ್ನು ಅತಿ ಹೆಚ್ಚು ಅವಮಾನಿಸಿದ್ದು ಕಾಂಗ್ರೆಸ್ ಪಕ್ಷ. ಕಾಂಗ್ರೆಸ್ ತುರ್ತು ಪರಿಸ್ಥಿತಿಯನ್ನು ಹೇರಿತ್ತು. ಅಲ್ಲದೇ ತ್ರಿವಳಿ ತಲಾಖನ್ನು ಬೆಂಬಲಿಸಿತು. ಸಾಂವಿಧಾನಿಕ ಸಂಸ್ಥೆಗಳನ್ನು ಅವಮಾನಿಸಿ ಅವುಗಳ ದುರ್ಬಲಗೊಳಿಸಿತು ಎಂದು ಅವರು ಆರೋಪಿಸಿದ್ದಾರೆ.

ಇದಕ್ಕೂ ಮೊದಲು ಪ್ರಧಾನಿಗೆ ಮಲ್ಲಿಕಾರ್ಜುನ ಖರ್ಗೆಯವರು ಬರೆದ ಪತ್ರದಲ್ಲಿ, ರಾಹುಲ್ ಗಾಂಧಿ ವಿರುದ್ಧ ಆಕ್ಷೇಪಾರ್ಹ, ಹಿಂಸಾತ್ಮಕ ಮತ್ತು ಅಸಭ್ಯ ಟೀಕೆಗಳ ಸರಣಿಯನ್ನು ಪಟ್ಟಿ ಮಾಡಿದ್ದರು. ಕೇಂದ್ರ ಸಚಿವ ರವನೀತ್ ಸಿಂಗ್ ಬಿಟ್ಟು 'ನಂಬರ್ 1 ಭಯೋತ್ಪಾದಕ' ಹೇಳಿಕೆ, ರಾಹುಲ್ ಅವರ ನಾಲಿಗೆಯನ್ನು ಕತ್ತರಿಸುವವರಿಗೆ 11 ಲಕ್ಷ ರೂ. ಘೋಷಿಸಿದ ಶಿವಸೇನೆ ನಾಯಕ ಮತ್ತು ದೆಹಲಿ ಬಿಜೆಪಿ ನಾಯಕ ತರ್ವಿಂದರ್ ಸಿಂಗ್ ಮರ್ವಾ ಅವರ ಬೆದರಿಕೆ, ರಾಹುಲ್ ಅವರ ಅಜ್ಜಿ ಮತ್ತು ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಅದೇ ಅದೃಷ್ಟವನ್ನು ಎದುರಿಸುತ್ತಾರೆ ಎಂಬ ಬೆದರಿಕೆ ವಿಚಾರಗಳನ್ನು ಪ್ರಸ್ತಾಪಿಸಿದ್ದರು. ಭಾರತೀಯ ಸಂಸ್ಕೃತಿಯು ಪ್ರಪಂಚದಾದ್ಯಂತ ಅಹಿಂಸೆ ಮತ್ತು ಪ್ರೀತಿಗೆ ಹೆಸರುವಾಸಿಯಾಗಿದೆ. ಬ್ರಿಟಿಷರ ಕಾಲದಲ್ಲಿ ಗಾಂಧೀಜಿ ಈ ಮಾನದಂಡಗಳನ್ನು ನಮ್ಮ ರಾಜಕೀಯದ ಪ್ರಮುಖ ಭಾಗವಾಗಿಸಿದರು.


ಸ್ವಾತಂತ್ರ್ಯದ ನಂತರ, ಆಡಳಿತ ಪಕ್ಷ ಮತ್ತು ಆಡಳಿತದ ನಡುವೆ ಗೌರವಾನ್ವಿತ ಭಿನ್ನಾಭಿಪ್ರಾಯದ ದೀರ್ಘ ಸಂಪ್ರದಾಯವಿದೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದರು. ಬಿಜೆಪಿ ನಾಯಕರಲ್ಲಿ ಸೌಜನ್ಯ ಮತ್ತು ಸಜ್ಜನಿಕೆಯನ್ನು ತರಬೇಕು. ಭಾರತೀಯ ಪ್ರಜಾಪ್ರಭುತ್ವವನ್ನು ಅವನತಿಯಿಂದ ರಕ್ಷಿಸಲು ಇಂತಹ ಹೇಳಿಕೆಗಳಿಗೆ ಕಠಿಣ ಕಾನೂನು ಕ್ರಮ ಜರುಗಿಸಬೇಕು ಎಂದು ಖರ್ಗೆ ಮನವಿ ಮಾಡಿದ್ದರು.

# ಬೆಸ್ಟ್ ಫ್ರೆಂಡ್ಸ್ ಚಾರಿಟಬಲ್ ಟ್ರಸ್ಟ್ ಈದ್ ಮಿಲಾದ್ ಪ್ರಯುಕ್ತ ಫಲಾಹಾರ ವಿತರಣೆ



**ಮುಂಬಯಿ, ಸೆ.19–** ಬೆಸ್ಟ್ ಫ್ರೆಂಡ್ಸ್ ಚಾರಿಟಬಲ್ ಟ್ರಸ್ಟ್(ರಿ ) ಮಂಗಳೂರು ಸಂಘಟನೆಯ ವತಿಯಿಂದ ಈದ್ ಮೀಲಾದ್ ಪ್ರಯುಕ್ತ ಎಲ್ಲಾ ವರುಷವೂ ನೀಡುತ್ತಾ ಬರುತ್ತಿರುವ ಫಲಾಹಾರ ವಿತರಣೆ ಕಾರ್ಯಕ್ರಮವು ಕಳೆದ ಬುಧವಾರ (ಸೆ.18) ರಂದು ಲೇಡಿ ಗೋಷನ್ ಆಸ್ಪತ್ರೆಯಲ್ಲಿ ಬಹಳ ವಿಜೃಂಭಣೆಯಿಂದ ಜರುಗಿತು. ಬೆಸ್ಟ್ ಫ್ರೆಂಡ್ಸ್ ಸಂಘಟನೆಯು 6 ವರ್ಷಗಳಿಂದ ಕಾರ್ಯಾಚರಿಸುತ್ತಿದ್ದು ಸುಮಾರು 350ಮಿಕ್ಕಿ ಕ್ಯಾನ್ಸರ್ ಡಯಾಲಿಸಿಸ್ ರೋಗಿಗಳಿಗೆ ಧನಸಹಾಯ ನೀಡಿ ಅವರ ಕಣ್ಣೊರೆಸುವ ಕಿರು ಪ್ರಯತ್ನ ಮಾಡಿದೆ. ಲೇಡಿ ಗೋಷನ್ ಆಸ್ಪತ್ರೆ ಹಾಗೂ ಸಂವೇದನಾ ಶಾಲೆಗೆ ಸೇರಿ ಸುಮಾರು 350 ಕುಟುಂಬಗಳ ಹೊಟ್ಟೆ ತಣಿಸುವ ಕೆಲಸ ಮಾಡಿದೆ ಎಂದು ಸಂಘಟನೆಯ ಅಧ್ಯಕ್ಷರು ವಿವರಿಸಿದರು. ಲೇಡಿ ಗೋಷನ್ ಆಸ್ಪತ್ರೆಯಲ್ಲಿ ಹಣ್ಣು ಹಂಪಲು ವಿತರಿಸುತ್ತಿರುವಾಗ ನಮ್ಮ ಸಂಘಟನೆಯ ನಿಸ್ವಾರ್ಥ ಸೇವೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ 1000 ರೂಪಾಯಿ ದಾನ ನೀಡಿದ ಬೆಳ್ತಂಗಡಿಯ ನವೀನ್ ಅವರಿಗೆ ಹೃದಯಾಂತರಾಳದ ಅಭಿನಂದನೆಗಳನ್ನು ಸಲ್ಲಿಸುತ್ತೇವೆಯೆಂದು ಕಾರ್ಯದರ್ಶಿ ಜಾಫರ್ ಇನೋಳಿ ಅಭಿಪ್ರಾಯ ಪಟ್ಟರು

# 370ನೇ ವಿಧಿ ಕುರಿತ ಪಾಕ್ ಅಭಿಪ್ರಾಯ ನನಗೆ ಮುಖ್ಯವಲ್ಲ: ಫರೂಕ್ ಅಬ್ದುಲ್ಲಾ



**ನವದೆಹಲಿ, ಸೆ.19–** 370ನೇ ವಿಧಿ ಮರುಸ್ಥಾಪನೆಯಲ್ಲಿ ಪಾಕಿಸ್ತಾನ ಮತ್ತು ನ್ಯಾಷನಲ್ ಕಾನ್ಫರೆನ್ಸ್–ಕಾಂಗ್ರೆಸ್ ಮೈತ್ರಿ ಒಂದೇ ಪುಟದಲ್ಲಿದೆ ಎಂಬ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಹೇಳಿಕೆಗೆ ಪ್ರತಿಕ್ರಿಯಿಸಿದ ನ್ಯಾಷನಲ್ ಕಾನ್ಫರೆನ್ಸ್ ನಾಯಕ ಫರೂಕ್ ಅಬ್ದುಲ್ಲಾ, ಪಾಕಿಸ್ತಾನ ಏನು ಹೇಳುತ್ತದೆ ಎಂದು ನನಗೆ ತಿಳಿದಿಲ್ಲ' ಎಂದು ಹೇಳಿದ್ದಾರೆ.

ಈ ಬಗ್ಗೆ ಸುದ್ದಿ ಮಾಧ್ಯಮವೊಂದರ ಜೊತೆ ಮಾತನಾಡಿದ ಅವರು, ಪಾಕಿಸ್ತಾನ ಏನು ಹೇಳುತ್ತದೆ ಎಂದು ನನಗೆ ತಿಳಿದಿಲ್ಲ, ನಾನು ಪಾಕಿಸ್ತಾನಿ ಅಲ್ಲ; ನಾನು ಭಾರತೀಯ ಪ್ರಜೆ ಎಂದು ಹೇಳಿದ್ದಾರೆ. ಜಮ್ಮು ಕಾಶ್ಮೀರ ವಿಧಾನಸಭಾ ಚುನಾವಣೆ ಕುರಿತು ಅಕ್ಟೋಬರ್ 8 ರಂದು ಜನರ ಮುಂದೆ ಎಲ್ಲವೂ ಸ್ಪಷ್ಟವಾಗಲಿದೆ ಎಂದು ಹೇಳಿದ್ದಾರೆ.

ಅಕ್ಟೋಬರ್ 8 ರವರೆಗೆ ಕಾಯಿರಿ, ಎಲ್ಲವೂ ಸ್ಪಷ್ಟವಾಗುತ್ತದೆ. ನಾನು ಮಾಡುವ ಮೊದಲ ಕೆಲಸವೆಂದರೆ ದರ್ಬಾರ್ ಮೂವ್ ಅನ್ನು ಮರಳಿ ತರುವುದು. ದರ್ಬಾರ್ ಮೂವ್‌ನಿಂದ ಈಗಾಗಲೇ ನಾವು ನಷ್ಟ ಅನುಭವಿಸಿದ್ದೇವೆ. ಜನರು ಚಳಿಗಾಲದಲ್ಲಿ ದರ್ಬಾರ್ ಮೂವ್‌ನಲ್ಲಿ ಅಲ್ಲಿಗೆ ಹೋಗುತ್ತಿದ್ದರು. ಜಮ್ಮು ಮತ್ತು ಕಾಶ್ಮೀರ ನಡುವೆ ಬೇಸಿಗೆಯಲ್ಲಿ ಕೆಲಸ ಮುಗಿಸಲು ಬರುತ್ತಿದ್ದರು, ದರ್ಬಾರ್‌ನಿಂದಾಗಿ ಎಷ್ಟು ನಷ್ಟವಾಗಿದೆ ಎಂದು ನೀವು ಕೇಳಬಹುದು ಎಂದರು. (1872 ರಿಂದ 2021 ರವರೆಗೆ ಕಾರ್ಯನಿರ್ವಹಿಸುತ್ತಿದ್ದ ಜಮ್ಮು ಮತ್ತು ಕಾಶ್ಮೀರದ ಒಂದು ರಾಜಧಾನಿಯಿಂದ ಇನ್ನೊಂದಕ್ಕೆ ಸೆಕ್ರೆಟರಿಯೇಟ್ ಮತ್ತು ಇತರ ಎಲ್ಲ ಸರ್ಕಾರಿ ಕಚೇರಿಗಳ ದ್ವೈ–ವಾರ್ಷಿಕ ಬದಲಾವಣೆಗೆ ದರ್ಬಾರ್ ಮೂವ್ ಎಂದು ಹೆಸರಿಸಲಾಗಿದೆ.) ಈ ಹಿಂದೆ ಕೇಂದ್ರಾಡಳಿತ ಪ್ರದೇಶದಲ್ಲಿ 370ನೇ ವಿಧಿ ಮರುಸ್ಥಾಪನೆ ವಿಚಾರದಲ್ಲಿ ಪಾಕಿಸ್ತಾನ ಮತ್ತು ಕಾಂಗ್ರೆಸ್ ಮೈತ್ರಿಕೂಟ ಒಂದೇ ಪುಟದಲ್ಲಿದ್ದವು ಎಂದು ಪಾಕಿಸ್ತಾನ ರಕ್ಷಣಾ ಸಚಿವ ಖ್ವಾಜಾ ಆಸಿಫ್ ಹೇಳಿದ ನಂತರ ಬಿಜೆಪಿ ಕಾಂಗ್ರೆಸ್–ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿಯ ವಿರುದ್ಧ ವಾಗ್ದಾಳಿ ನಡೆಸಿದೆ.

ಬಿಜೆಪಿ ನಾಯಕ ಅಮಿತ್ ಮಾಳವಿಯಾ ಹೇಳಿಕೆ ನೀಡಿ, ಪಾಕಿಸ್ತಾನ, ಭಯೋತ್ಪಾದಕ ರಾಷ್ಟ್ರ, ಕಾಶ್ಮೀರದ ಬಗ್ಗೆ ಕಾಂಗ್ರೆಸ್ ಮತ್ತು ನ್ಯಾಷನಲ್ ಕಾನ್ಫರೆನ್ಸ್‌ನ ನಿಲುವನ್ನು ಅನುಮೋದಿಸುತ್ತದೆ. ಪಾಕಿಸ್ತಾನದ ರಕ್ಷಣಾ ಸಚಿವ ಖವಾಜಾ ಆಸಿಫ್, ಜಿಯೋ ನ್ಯೂಸ್ನಲ್ಲಿ ಹಮೀದ್ ಮಿರ್ ಅವರ ಕ್ಯಾಪಿಟಲ್ ಟಾಕ್ನಲ್ಲಿ, ಪಾಕಿಸ್ತಾನ ಮತ್ತು ನ್ಯಾಷನಲ್ ಕಾನ್ಫರೆನ್ಸ್–ಕಾಂಗ್ರೆಸ್ ಹೇಳುತ್ತಾರೆ. ಆರ್ಟಿಕಲ್ 370 ಮತ್ತು 35(ಎ) ಅನ್ನು ಪುನಃಸ್ಥಾಪಿಸಲು ಜಮ್ಮು ಮತ್ತು ಕಾಶ್ಮೀರದಲ್ಲಿ ಮೈತ್ರಿ ಒಂದೇ ಪುಟದಲ್ಲಿದೆ' ಎಂದು ಹೇಳಿದ್ದಾರೆ.

ಬಿಜೆಪಿ ವಕ್ತಾರ ಶೆಹಜಾದ್ ಪೂನಾವಾಲಾ ಪ್ರತಿಕ್ರಿಯಿಸಿ, ಕಾಂಗ್ರೆಸ್ ಮತ್ತು ಎನ್‌ಸಿಗೆ ಪಾಕಿಸ್ತಾನದೊಂದಿಗಿನ ಈ ಸಂಬಂಧ ಏನು ಎಂದು ಕರೆಯುವುದು ಪ್ರಶ್ನೆ? ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಸಮ್ಮೇಳನ ಮತ್ತು ಇಂಡಿಯಾ ಒಕ್ಕೂಟವು ಪಾಕಿಸ್ತಾನದೊಂದಿಗೆ ಹೇಗೆ ಕೈಜೋಡಿಸಲು ನಿರಂತರವಾಗಿ ಪ್ರಯತ್ನಿಸುತ್ತಿದೆ ಎಂಬುದನ್ನು ನಾವು ನೋಡಬಹುದು' ಎಂದಿದ್ದಾರೆ.

## ಸೇವಾ ಸಾಮರ್ಥ್ಯದೊಂದಿಗೆ ಮೊಡೇಲ್ ಬ್ಯಾಂಕ್ ಗ್ರಾಹಕರ ವಿಶ್ವಾಸಕ್ಕೆ ಪಾತ್ರ

# ಮಾಡೆಲ್ ಬ್ಯಾಂಕ್‌ನ 107ನೇ ಮಹಾಸಭೆಯಲ್ಲಿ ಆಲ್ಬರ್ಟ್ ಡಬ್ಲ್ಯೂ.ಡಿ'ಸೋಜಾ




**ಮುಂಬಯಿ, ಸೆ.19–** ಬ್ಯಾಂಕ್ ಅತ್ಯಂತ ಅಪೇಕ್ಷಣೀಯ ಗುಣಮಟ್ಟದ ವಹಿವಾಟು, ವ್ಯವಹಾರ ಸಾಧಿಸಿದ್ದು, ಆ ಮೂಲಕ ಬ್ಯಾಂಕ್‌ನ್ನು ಹೊಸ ಎತ್ತರಕ್ಕೆ ಕೊಂಡೊಯ್ಯಲು ಸಾಧ್ಯವಾಗಿದೆ. ಗ್ರಾಹಕರ, ಷೇರುದಾರರ ನಿರಂತರ ಪ್ರೋತ್ಸಾಹ ಮತ್ತು ಬೆಂಬಲದೊಂದಿಗೆ ಬ್ಯಾಂಕ್‌ನ್ನು ಹೊಸ ದಿಗಂತಗಳಿಗೆ ಕೊಂಡೊಯ್ಯಲು ಪ್ರಯತ್ನ ಸಾಗುತ್ತಿದೆ ಎಂದೇಳಲು ಅಭಿಮಾನವಾಗುತ್ತದೆ. ಮುಂದುವರಿದ ನಿಮ್ಮ ನಂಬಿಕೆ ಮತ್ತು ಬೆಂಬಲದಿಂದ ಬ್ಯಾಂಕ್ ಪ್ರಗತಿಯನ್ನು ಹೆಚ್ಚಿಸಲಿದೆ. ಜಾಗತಿಕ ಹಣಕಾಸು ಸವಾಲಿನ ವಾತಾವರಣದ ಹೊರತಾಗಿಯೂ ಬ್ಯಾಂಕ್ ಸೇವೆಯೊಂದಿಗೆ ಹೊಂದಿಕೊಂಡು ಮುನ್ನಡೆದಿದ್ದು, ಕಳೆದ ಆರ್ಥಿಕ ವರ್ಷದಲ್ಲಿ ಮಾಡೆಲ್ ಬ್ಯಾಂಕ್ ಸೇವಾ ಸಾಮರ್ಥ್ಯ ತೋರಿಸಿ ಗ್ರಾಹಕರ ವಿಶ್ವಾಸಕ್ಕೆ ಪಾತ್ರವಾಗಿದೆ ಎಂದು ಮೊಡೇಲ್ ಕೋ.ಅಪರೇಟಿವ್ ಬ್ಯಾಂಕ್ ಲಿಮಿಟೆಡ್‌ನ ಕಾರ್ಯಾಧ್ಯಕ್ಷ ಆಲ್ಬರ್ಟ್ ಡಬ್ಲ್ಯೂ.ಡಿ'ಸೋಜಾ ತಿಳಿಸಿದರು.

ಇಂದಿಲ್ಲಿ ಗುರುವಾರ ಅಪರಾಹ್ನ ಬಾಂದ್ರಾ ಪಶ್ಚಿಮದಲ್ಲಿನ ಸೈಂಟ್ ಆ್ಯಂಡ್ರೂ'ಸ್ ಸಭಾಗೃಹದಲ್ಲಿ ಮೊಡೇಲ್ ಬ್ಯಾಂಕ್ ತನ್ನ107ನೇ ವಾರ್ಷಿಕ ಮಹಾಸಭೆ ನಡೆಸಿದ್ದು ಆಲ್ಬರ್ಟ್ ಡಿ'ಸೋಜಾ ಅಧ್ಯಕ್ಷೀಯ ಭಾಷಣವನ್ನುದ್ದೇಶಿ ಸಿ ಮಾತನಾಡಿ ಬ್ಯಾಂಕ್‌ನ ಗತ ಆಯವ್ಯಯ ಪಟ್ಟಿ (ಬ್ಯಾಲೆನ್ಸ್ ಶೀಟ್) ಮತ್ತು ವಾರ್ಷಿಕ ಲಾಭನಷ್ಟದ ಲೆಕ್ಕಾಚಾರ ಸೇರಿದಂತೆ ವಾರ್ಷಿಕ ಲೆಕ್ಕಪರಿಶೋಧಕ ಮಾಹಿತಿಯಿತ್ತರು. ಈ ಬಾರಿಯೂ ಆರ್‌ಬಿಐ ಲೆಕ್ಕಶೋಧನಾ ಶ್ರೇಣೀಕರಣ ಪ್ರಕಾರ (ಆಡಿಟ್ ಕ್ಲಾಸಿಫೀಕೇಶನ್) 'ಎ' ದರ್ಜೆಯೊಂದಿಗೆ ಧೃಢೀಕೃತ ಗೊಂಡಿದೆ ಎಂದು ಬ್ಯಾಂಕ್ ಮಂಡಳಿ ಈ ಬಾರಿ ಷೇರುದಾರರಿಗೆ 10% ಹಿಶೆಭಾಗ (ಡಿವಿಡೆಂಡ್) ಘೋಷಿಸುತ್ತಿದೆ ಎಂದೇಳಿ ಬ್ಯಾಂಕ್‌ನ ಸರ್ವೋನ್ನತಿಗೆ ಶ್ರಮಿಸಿದ ಸರ್ವರಿಗೂ ವಂದಿಸುವೆ ಎಂದರು.

ಬ್ಯಾಂಕ್‌ನ ಕಾರ್ಯಕ್ಷಮತೆಯನ್ನು ತಿಳಿಸುತ್ತಾ ಪ್ರಸ್ತುತ ಸ್ಥೂಲ ಆರ್ಥಿಕ ಮತ್ತು ಬ್ಯಾಂಕಿಂಗ್ ಸನ್ನಿವೇಶಗಳನ್ನು ಸಂಕ್ಷಿಪ್ತವಾಗಿ ಹಂಚಿಕೊಂಡ ಡಿ'ಸೋಜಾ, ಬ್ಯಾಂಕ್‌ನ ಷೇರುದಾರ ಸದಸ್ಯರಿಗೆ ಗತ ಕ್ಯಾಲೆಂಡರ್ ಸಾಲಿನ ಕಾರ್ಯ ಸಾಧನೆಗಳ ಮಾಹಿತಿಯನ್ನಿಡಿ ಬ್ಯಾಂಕ್ ರೂಪಾಯಿ 1216.04 ಕೋಟಿಗಳ ಠೇವಣಿ ಸಾಧಿಸಿದ್ದು, ರೂ.63.58 ಕೋಟಿಗಳ ಬೆಳವಣಿಗೆ ಕಂಡಿದೆ ಎಂದರು. ರೂ.11.63 ಕೋಟಿಗಳಷ್ಟು ಮುಂಗಡವು ಕಡಿಮೆಯಾಗಿದ್ದು ಹಿಂದಿನ ಹಣಕಾಸು ವರ್ಷಕ್ಕೆ ಹೋಲಿಸಿದರೆ ನಿವ್ವಳ ಎನ್‌ಪಿಎ ಶೂನ್ಯವಾಗಿದೆ. ನಿವ್ವಳ ಲಾಭ (ತೆರಿಗೆ ನಂತರ) ರೂ.10.22 ಕೋಟಿಗಳಷ್ಟಿದ್ದು ಬ್ಯಾಂಕ್ ಆರ್ಥಿಕವಾಗಿ ಉತ್ತಮವಾಗಿ ನಿರ್ವಹಿಸಲ್ಪಟ್ಟಿದೆ.

ಮೊಬೈಲ್ ಬ್ಯಾಂಕಿಂಗ್, ಇಂಟರ್‌ನೆಟ್ ಸ್ಟೇಟ್‌ಮೆಂಟ್ ವೀಕ್ಷಣೆ ಸೌಲಭ್ಯ, ಯುಪಿಐ ಪಾವತಿ ಇಂಟರ್‌ಫೇಸ್, ಕಾರ್ಡ್ ಸ್ವೈಪ್ ಯಂತ್ರಗಳಿಗೆ ಟೈ ಅಪ್, ಸಂಪರ್ಕರಹಿತ ಟ್ಯಾಪ್–ಎಟಿಎಂ ಡೆಬಿಟ್ ಕಾರ್ಡ್‌ಗಳು, ರುಪೇ ಎಟಿಎಂ ಕಮ್ ಡೆಬಿಟ್ ಕಾರ್ಡ್‌ಗಳು ಮತ್ತು ಪ್ಲಾಟಿನಂ ರುಪೇ ಡೆಬಿಟ್ ಕಾರ್ಡ್‌ಗಳಂತಹ ಹೆಚ್ಚಿನ ಡಿಜಿಟಲ್ ಸೇವೆಗಳನ್ನು ಬ್ಯಾಂಕ್ ಒದಗಿಸುತ್ತದೆ. ಬ್ಯಾಂಕ್‌ನ 40% ಸಕ್ರಿಯ ಗ್ರಾಹಕರು ಡಿಜಿಟಲ್ ಸೇವೆಗಳನ್ನು ಬಳಸುತ್ತಿದ್ದಾರೆ. ಬ್ಯಾಂಕ್ ತನ್ನ ಡಿಜಿಟಲ್ ಕೊಡುಗೆಗಳನ್ನು ವಿಸ್ತರಿಸುವುದನ್ನು ಇನ್ನಷ್ಟು ಮುಂದುವರಿಸುತ್ತಿದ್ದು ಮುನ್ನಡೆಯ ಬೆಳವಣಿಗೆ ಕಾಯ್ದಿರಿಸಿದೆ. ಬ್ಯಾಂಕ್ ವಿದೇಶಿ ವಿನಿಮಯಕ್ಕಾಗಿ ಪೂರ್ಣ ಪ್ರಮಾಣದ ಹಣವನ್ನು ಬದಲಾಯಿಸುವ ಕಾರ್ಯಾಚರಣೆಗಳಿಗೆ ಅಧಿಕೃತ ಡೀಲರ್ ದ್ವಿತೀಯ ವರ್ಗದ ಪರವಾನಗಿ ಮತ್ತು ಅನಿವಾಸಿ ಭಾರತೀಯರಿಗೆ ಎನ್‌ಆರ್‌ಐ ವಿದೇಶಿ ವಿನಿಮಯ ಹಾಗೂ ಭಾರತೀಯ ರೂಪಾಯಿ ಮೌಲ್ಯದ ಎನ್‌ಆರ್‌ಇ ಖಾತೆಗಳು ಹೆಚ್ಚು ಪರಿಣಾಮಕಾರಿ ಸೇವೆಯಾಗಿಸಿದ ತೃಪ್ತಿ ನಮಗಿದೆ ಎಂದರು.

# ಆರ್.ಜಿ.ಕರ್ ಬಿಕ್ಕಟ್ಟು: 2ನೇ ಮಾತುಕತೆ ಬಳಿಕವೂ ಮುಷ್ಕರ ಮುಂದುವರಿಕೆ




**ಕೋಲ್ಕತ್ತಾ, ಸೆ.19–** ಕೋಲ್ಕತ್ತಾ ಪಶ್ಚಿಮ ಬಂಗಾಳದ ಸರ್ಕಾರದ ಕಿರಿಯ ವೈದ್ಯರು ಮತ್ತು ಅಧಿಕಾರಿಗಳ ನಡುವಿನ ಎರಡನೇ ಸುತ್ತಿನ ಮಾತುಕತೆ ಕೂಡಾ ಆರ್ಜಿ ಕಾರ್ ಸಮಸ್ಯೆಯ ಕುರಿತು ವೈದ್ಯಾಧಿಕಾರಿಗಳು ನಡೆಸುತ್ತಿರುವ ಮುಷ್ಕರವನ್ನು ನಿಲ್ಲಸಲು ವಿಫಲ ವಾಗಿದೆ. ಸಭೆಯಲ್ಲಿ ಚರ್ಚಿಸಿದ ವಿಷಯಗಳ ಬಗ್ಗೆ ಬರೆದು ಸಹಿ ಮಾಡುವ ಲಿಖಿತ ನಡಾವಳಿಗಳನ್ನು ನೀಡಲು ರಾಜ್ಯ ಸರ್ಕಾರ ನಿರಾಕರಿಸಿದೆ ಎಂದು ವೈದ್ಯರು ಆರೋಪಿಸಿದ್ದಾರೆ.

ಸಭೆಯ ನಂತರ ವೈದ್ಯಾಧಿಕಾರಿಗಳು ತಮ್ಮ ಆಂದೋಲನ ಮತ್ತು 'ಕೆಲಸ ನಿಲ್ಲಿಸಿ' ನಡೆಸುತ್ತಿರುವ ಚಳವಳಿಯನ್ನು ಮುಂದುವರೆಸುವುದಾಗಿ ಘೋಷಿಸಿದ್ದಾರೆ. ಸಭೆಯಲ್ಲಿ ಒಪ್ಪಿಗೆಯಂತೆ ಸರ್ಕಾರಿ ಆಸ್ಪತ್ರೆಗಳಲ್ಲಿನ ವೈದ್ಯರ ಸುರಕ್ಷತೆಯ ಕುರಿತು ಸರ್ಕಾರವು ಲಿಖಿತ ನಿರ್ದೇಶನಗಳನ್ನು ಹೊರಡಿಸುತ್ತದೆ.

'ಮಾತುಕತೆಗಳು ಸುಗಮವಾಗಿ ನಡೆದಾಗ, ಚರ್ಚಿಸಿದ ವಿಷಯಗಳ ಸಹಿ ಮತ್ತು ಲಿಖಿತ ನಡಾವಳಿಗಳನ್ನು ನೀಡಲು ಸರ್ಕಾರ ನಿರಾಕರಿಸಿತು. ಸರ್ಕಾರದ ಧೋರಣೆಯಿಂದ ನಾವು ನಿರಾಶರಾಗಿದ್ದೇವೆ' 'ನಾವು ನಮ್ಮ ಬೇಡಿಕೆಗಳನ್ನು ವಿವರಿಸುವ ಇಮೇಲ್ ಅನ್ನು ನಾಳೆ ಕಳುಹಿಸುತ್ತೇವೆ. ಅದರ ಆಧಾರದ ಮೇಲೆ ಸರ್ಕಾರವು ನಿರ್ದೇಶನಗಳನ್ನು ನೀಡುತ್ತದೆ ಎಂದು ಭರವಸೆ ನೀಡಿದೆ. ಆ ನಿರ್ದೇಶನಗಳನ್ನು ನೀಡುವವರೆಗೂ ನಾವು ನಮ್ಮ ಆಂದೋಲನವನ್ನು ಮುಂದುವರೆಸುತ್ತೇವೆ' ಎಂದು ಮಹತೋ ಹೇಳಿದ್ದಾರೆ.

ಆರ್‌ಜಿ ಕರ್ ಆಸ್ಪತ್ರೆಯ ಪಿಜಿ ವೈದ್ಯೆಯ ಮೇಲೆ ಅತ್ಯಾಚಾರ–ಕೊಲೆ ಮಾಡಿದ ಆರೋಪದ ಹಿನ್ನೆಲೆಯಲ್ಲಿ ಆರೋಗ್ಯ ಕಾರ್ಯದರ್ಶಿ ಎನ್ ಎಸ್ ನಿಗಮ್ ವಿರುದ್ಧ ಇಲಾಖಾ ತನಿಖೆಯನ್ನು ಆರಂಭಿಸಬೇಕೆಂಬ ವೈದ್ಯರ ಬೇಡಿಕೆಯನ್ನು ಒಪ್ಪಿಕೊಳ್ಳಲು ರಾಜ್ಯ ನಿರಾಕರಿಸಿದೆ.

ಟ್ರೈನಿ ವೈದ್ಯೆಯ ಅತ್ಯಾಚಾರ ಮತ್ತು ಕೊಲೆ ಮತ್ತು ನಂತರದ ಸರ್ಕಾರಿ ಆರೋಗ್ಯ ಸೌಲಭ್ಯಗಳಲ್ಲಿ ವ್ಯಾಪಕ ಭ್ರಷ್ಟಾಚಾರದ ಆರೋಪಗಳನ್ನು ವಿದ್ಯಾರ್ಥಿಗಳು ಮತ್ತು ಟ್ರೈನಿ ವೈದ್ಯರು ಆರೋಪಿಸಿದ್ದರು. ಜೊತೆಗೆ ಈ ಸಮಸ್ಯೆಗಲನ್ನು ಪರಿಹರಿಸಬೇಕು ಎಂದು ಭಾರಿ ಪ್ರತಿಭಟನೆ ನಡೆಸುತ್ತಿದ್ದು, ಆರೋಗ್ಯ ಕಾರ್ಯದರ್ಶಿ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಬೇಡಿಕೆ ಮುಂದಿಟ್ಟಿದ್ದಾರೆ.

# ಖಲಿಸ್ತಾನಿ ಉಗ್ರನ ಹತ್ಯೆಗೆ ಸಂಚು ಆರೋಪ ದೋವಲ್‌ಗೆ ಅಮೆರಿಕ ಕೋರ್ಟ್ ಸಮನ್ಸ್

**ವಾಷಿಂಗ್ಟನ್, ಸೆ.19:** ಖಲಿಸ್ತಾನಿ ಭಯೋತ್ಪಾದಕ ಗುರುಪತ್ವಂತ್ ಸಿಂಗ್ ಪನ್ನುನ್ ಹತ್ಯೆಗೆ ಸಂಚು ರೂಪಿಸಲಾಗಿದೆ ಎಂದು ಆರೋಪಿಸಿ ಹೂಡಿರುವ ಸಿವಿಲ್ ಮೊಕದ್ದಮೆ ಹಿನ್ನೆಲೆಯಲ್ಲಿ ಅಮೆರಿಕ ಕೋರ್ಟ್ ಭಾರತ ಸರ್ಕಾರಕ್ಕೆ ಸಮನ್ಸ್ ಜಾರಿ ಮಾಡಿದೆ. ನ್ಯೂಯಾರ್ಕ್‌ನ ಸದರ್ನ್ ಜಿಲ್ಲಾ ನ್ಯಾಯಾಲಯದ ಸಮನ್ಸ್‌ನಲ್ಲಿ ಭಾರತ ಸರ್ಕಾರ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್, ಮಾಜಿ ಸಂಶೋಧನೆ ಮತ್ತು ವಿಶ್ಲೇಷಣಾ ವಿಭಾಗದ ಮುಖ್ಯಸ್ಥ ಸಮಂತ್ ಗೋಯೆಲ್, ಏಜೆಂಟ್ ವಿಕ್ರಮ್ ಯಾದವ್ ಮತ್ತು ಭಾರತೀಯ ಉದ್ಯಮಿ ನಿಖಿಲ್ ಗುಪ್ತಾ ಅವರನ್ನು ಹೆಸರಿಸಲಾಗಿದೆ.



ಸಮನ್ಸ್‌ನಲ್ಲಿ ಹೆಸರಿಸಿದವರು 21 ದಿನಗಳಲ್ಲಿ ಉತ್ತರಿಸುವಂತೆ ನ್ಯಾಯಾಲಯ ಸೂಚಿಸಿದೆ. ಸಮನ್ಸ್‌ಗೆ ಭಾರತ ಸರ್ಕಾರ ಇನ್ನೂ ಪ್ರತಿಕ್ರಿಯಿಸಿಲ್ಲ. ಸಮನ್ಸ್‌ನ ಪ್ರತಿಯನ್ನು ಹಂಚಿಕೊಂಡ ಪನ್ನು ಅವರ ಎಕ್ಸ್ ಖಾತೆಯನ್ನು ತಡೆಹಿಡಿಯಲಾಗಿದೆ ಎಂದು ವರದಿಯಾಗಿದೆ.

ಅಲ್ಲದೇ ಈ ವಿಷಯವು ಭಾರತ-ಯುಎಸ್ ಬಾಂಧವ್ಯದ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಭಾರತದಲ್ಲಿನ ಯುಎಸ್ ರಾಯಭಾರಿ ಎರಿಕ್ ಗಾರ್ಸೆಟ್ಟಿ ಮಾಧ್ಯಮಗಳಿಗೆ ತಿಳಿಸಿದ್ದಾರೆ. ಮೂಲಭೂತ ಸಂಘಟನೆಯಾದ ಸಿಖ್ಸ್ ಫಾರ್ ಜಸ್ಟಿಸ್‌ನ ಮುಖ್ಯಸ್ಥ ಮತ್ತು ಅಮೆರಿಕ ಮತ್ತು ಕೆನಡಾದ ದ್ವಿ ಪೌರತ್ವವನ್ನು ಹೊಂದಿರುವ ಪನ್ನುನ್‌ನನ್ನು ಕೊಲ್ಲುವ ಸಂಚನ್ನು ಅಮೆರಿಕ ವಿಫಲಗೊಳಿಸಿದೆ ಎಂದು ನವೆಂಬರ್‌ನಲ್ಲಿ ಪತ್ರಿಕೆಯೊಂದು ವರದಿ ಮಾಡಿತ್ತು.

ಬಳಿಕ ಅಮೆರಿಕದ ಅಧಿಕಾರಿಗಳು ಇದನ್ನು ದೃಢಪಡಿಸಿದ್ದರು. ಇದರ ಬೆನ್ನಲ್ಲೇ, ಈ ವಿಚಾರವಾಗಿ ವಿದೇಶಾಂಗ ಸಚಿವಾಲಯ ಇದು ಕಳವಳಕಾರಿ ವಿಷಯ ಎಂದು ಹೇಳಿತ್ತು. ಅಲ್ಲದೇ ವಿದೇಶಾಂಗ ಸಚಿವ ಡಾ.ಎಸ್ ಜೈಶಂಕರ್ ಅವರು ಭಾರತವು ಈ ಬಗ್ಗೆ ಉನ್ನತ ಮಟ್ಟದ ತನಿಖೆಯನ್ನು ಪ್ರಾರಂಭಿಸಿದೆ. ಆದರೆ ಇದು ಭಾರತ-ಅಮೆರಿಕದ ಸಂಬಂಧಗಳ ಮೇಲೆ ಪರಿಣಾಮ ಬೀರುವುದಿಲ್ಲ ಎಂದು ಒತ್ತಿ ಹೇಳಿದ್ದರು. ಪನ್ನುನ್ ಭಾರತೀಯ ನಾಯಕರ ವಿರುದ್ಧ ದ್ವೇಷ ಭಾಷಣ ಮತ್ತು ಹಲವಾರು ಬೆದರಿಕೆಗಳನ್ನು ಹಾಕಿದ್ದಾನೆ. ಕೇಂದ್ರ ಸರ್ಕಾರ 2020ರಲ್ಲಿ ಆತನನ್ನು ಭಯೋತ್ಪಾದಕ ಎಂದು ಘೋಷಿಸಿತು.

# ಮಧ್ಯಪ್ರಾಚ್ಯದಲ್ಲಿ ತೀವ್ರ ಸಂಘರ್ಷ ಅಪಾಯಕರ: ವಿಶ್ವಸಂಸ್ಥೆ ಕಳವಳ

**ವಾಷಿಂಗ್ಟನ್, ಸೆ.19:** ಲೆಬೆನಾನ್ ನಲ್ಲಿ ನಡೆದ ಪೇಜರ್ ಮತ್ತು ವಾಕಿಟಾಕಿ ಸ್ಫೋಟದ ಹಿಂದೆ ಇಸ್ರೇಲ್ ಕೈವಾಡವಿದೆ ಎಂಬ ಆರೋಪಗಳ ನಡುವೆಯೇ ಘಟನೆ ಕುರಿತು ತೀವ್ರ ಕಳವಳ ವ್ಯಕ್ತಪಡಿಸಿರುವ ವಿಶ್ವಸಂಸ್ಥೆ, "ಮಧ್ಯಪ್ರಾಚ್ಯದಲ್ಲಿ ತೀವ್ರ ಸಂಘರ್ಷ ಏರ್ಪಡುವ ಸಾಧ್ಯತೆ ಇದೆ" ಎಂದು ಹೇಳಿದೆ.

ಲೆಬನಾನ್ ನಲ್ಲಿ ನಡೆದ ಪೇಜರ್ ಸ್ಫೋಟ ಪ್ರಕರಣ ಮತ್ತು ಆ ಬಳಿಕ ನಡೆದ ವಾಕಿಟಾಕಿ ಸ್ಫೋಟ ಪ್ರಕರಣದಲ್ಲಿ ಸಾವಿಗೀಡಾದವರ ಸಂಖ್ಯೆ 32ಕ್ಕೆ ಮತ್ತು ಗಾಯಾಳುಗಳ ಸಂಖ್ಯೆ 3,250ಕ್ಕೆ ಏರಿಕೆಯಾಗಿದೆ. ಈ ಸ್ಫೋಟಗಳ ಹಿಂದೆ ಇಸ್ರೇಲ್ ನ ಗುಪ್ತಚರ ಸಂಸ್ಥೆ ಮೊಸಾದ್ ಕೈವಾಡವಿದೆ ಎಂದು ಲೆಬೆನಾನ್ ಆರೋಪಿಸಿದೆ.




ಹೀಗಿರುವಾಗಲೇ ಇರಾನ್ ಬೆಂಬಲಿತ ಬಂಡುಕೋರ ಸಂಘಟನೆ ಹಿಜ್ಬುಲ್ಲಾ ಬುಧವಾರ ಇಸ್ರೇಲ್ ಮೇಲೆ ಮುಗಿಬಿದ್ದಿದ್ದು, ಇಸ್ರೇಲಿ ರಾಕೆಟ್ ಲಾಂಚರ್ ಗಳ ಮೇಲೆ ರಾಕೆಟ್ಗಳ ಮೂಲಕ ದಾಳಿ ಮಾಡಿದೆ. ಈ ಎಲ್ಲ ಬೆಳವಣಿಗೆಗಳನ್ನು ಸೂಕ್ಷ್ಮವಾಗಿ ವೀಕ್ಷಿಸುತ್ತಿರುವ ವಿಶ್ವಸಂಸ್ಥೆ "ತೀವ್ರ ಸಂಘರ್ಷ ಅಪಾಯ"ದ ಕುರಿತು ಎಚ್ಚರಿಕೆ ನೀಡಿದೆ.

ಈ ಕುರಿತು ಮಾತನಾಡಿರುವ ವಿಶ್ವಸಂಸ್ಥೆ ಮುಖ್ಯಸ್ಥ ಆಂಟೋನಿಯೊ ಗುಟೆರೆಸ್, 'ಹೆಜ್ಬೊಲ್ಲಾ ಗುರಿಯಾಗಿಸಿಕೊಂಡು ನಡೆದ ಪೇಜರ್ ಸ್ಫೋಟ ಲೆಬನಾನ್ನಲ್ಲಿ ನಾಟಕೀಯ ಸಂಘರ್ಷ ಉಲ್ಬಣಗೊಳ್ಳುವ ಗಂಭೀರ ಅಪಾಯವನ್ನು ಸೂಚಿಸುತ್ತವೆ ಮತ್ತು ಆ ಉಲ್ಬಣವನ್ನು ತಪ್ಪಿಸಲು ಎಲ್ಲವನ್ನೂ ಮಾಡಬೇಕು ಎಂದು ಹೇಳಿದ್ದಾರೆ.

ಇದೇ ರೀತಿಯ ಪ್ರತಿಕ್ರಿಯೆ ನೀಡಿರುವ ಅಮೆರಿಕ ರಾಷ್ಟ್ರೀಯ ಭದ್ರತಾ ಮಂಡಳಿಯ ವಕ್ತಾರ ಜಾನ್ ಕಿರ್ಬಿ, 'ನಾವು ಇನ್ನು ಯಾವುದೇ ರೀತಿಯ ಸಂಘರ್ಷ ಉಲ್ಬಣವನ್ನು ನೋಡಲು ಬಯಸುವುದಿಲ್ಲ. ಈ ಬಿಕ್ಕಟ್ಟಿನಲ್ಲಿ ನಾವು ಎಲ್ಲಿದ್ದೇವೆ ಎಂಬುದನ್ನು ಪರಿಹರಿಸುವ ಮಾರ್ಗವು ಹೆಚ್ಚುವರಿ ಮಿಲಿಟರಿ ಕಾರ್ಯಾಚರಣೆಗಳ ಮೂಲಕ ಎಂದು ನಾವು ನಂಬುವುದಿಲ್ಲ. ಮಿಲಿಟರಿ ಕಾರ್ಯಾಚರಣೆಗಳು ಸಮಸ್ಯೆಗೆ ಉತ್ತರವಾಗುವುದಿಲ್ಲ ಎಂದು ಹೇಳಿದ್ದಾರೆ. ಅಂದಹಾಗೆ ಲೆಬನಾನ್‌ನಲ್ಲಿ ನಡೆದ ಪೇಜರ್ ಸ್ಫೋಟಗಳ ಕುರಿತು ವಿಶ್ವಸಂಸ್ಥೆಯ ಭದ್ರತಾ ಮಂಡಳಿಯು ಶುಕ್ರವಾರ ಸಭೆ ಸೇರಲಿದೆ.

# ಹಸಿವಿನಿಂದ ಬಳಲುತ್ತಿರುವ ನಾಗರಿಕರಿಗೆ ಆಹಾರ ನೀಡಲು 200 ಆನೆ ಕೊಂದ ಜಿಂಬಾಬ್ವೆ

**ನವದೆಹಲಿ, ಸೆ.19:** ದಶಕಗಳಲ್ಲಿ ಭೀಕರ ಬರಗಾಲದಿಂದ ಹಸಿವಿನಿಂದ ಬಳಲುತ್ತಿರುವ ನಾಗರಿಕರಿಗೆ ಆಹಾರ ನೀಡಲು ಜಿಂಬಾಬ್ವೆಯ ಸರ್ಕಾರ 200 ಆನೆಗಳನ್ನು ಕೊಲ್ಲಲು ಅನುಮತಿ ನೀಡಿವೆ.



ಜಿಂಬಾಬ್ವೆ ಉದ್ಯಾನವನಗಳು ಮತ್ತು ವನ್ಯಜೀವಿ ಪ್ರಾಧಿಕಾರದ ವಕ್ತಾರ ಟಿನಾಶೆ ಫರಾವೊ ಸಿಎನ್‌ಎನ್‌ಗೆ ಮಾತನಾಡಿ, ದೇಶದ ಜನಸಂಖ್ಯೆಯ ಅರ್ಧದಷ್ಟು ಜನರು ತೀವ್ರ ಹಸಿವಿನ ಅಪಾಯವನ್ನು ಎದುರಿಸುತ್ತಿರು ವುದರಿಂದ, "ನಾವು 200 ಆನೆಗಳನ್ನು ಕೊಲ್ಲುವ ಗುರಿ ಹೊಂದಿದ್ದೇವೆ" ಎಂದು ಹೇಳಿದರು.

ದೀರ್ಘಕಾಲದ ಬರಗಾಲದಿಂದ ಹದಗೆಟ್ಟ ಆಹಾರ ಅಭದ್ರತೆಯನ್ನು ಪರಿಹರಿಸಲು ಆನೆಗಳು ಮತ್ತು ಇತರ ವನ್ಯಜೀವಿಗಳನ್ನು ಕೊಲ್ಲುವ ನಮೀಬಿಯಾದ ಇತ್ತೀಚಿನ ಕ್ರಮವನ್ನು ಅನುಸರಿಸಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ. ಈ ಕೊಳಿಗಳು ಪ್ರಾಣಿ ಹಕ್ಕುಗಳ ವಕೀಲರು ಮತ್ತು ಸಂರಕ್ಷಣಾವಾದಿಗಳಿಂದ ಟೀಕೆಗಳನ್ನು ಎದುರಿಸಿವೆ.

ಫರಾವೊ ಪ್ರಕಾರ, ಜಿಂಬಾಬ್ವೆಯ ಆನೆಗಳ ಸಂಖ್ಯೆ 84,000 ಕ್ಕಿಂತ ಹೆಚ್ಚಾಗಿದೆ, ಇದು ಅಂದಾಜು 45,000 ಕ್ಕಿಂತ ಎರಡು ಪಟ್ಟು ಹೆಚ್ಚಾಗಿದೆ. ಇದು ಬೋಟ್ಸ್ವಾನಾದ ನಂತರ ಜಾಗತಿಕವಾಗಿ ಎರಡನೇ ಅತಿದೊಡ್ಡ ದೇಶವಾಗಿದೆ.

ಕಳೆದ ವಾರ, ಪರಿಸರ ಸಚಿವ ಸಿಥೆಂಬಿಸೊ ನ್ಯೋನಿ ಸಂಸತ್ತಿಗೆ ಮಾಹಿತಿ ನೀಡಿ, ಜಿಂಬಾಬ್ವೆಯಲ್ಲಿ ಅಗತ್ಯಕ್ಕಿಂತ ಹೆಚ್ಚು ಆನೆಗಳಿವೆ ಮತ್ತು ಕಾಡುಗಳು ಉಳಿಸಿಕೊಳ್ಳಬಹುದಾದುದಕ್ಕಿಂತ ಹೆಚ್ಚಿನದನ್ನು ಹೊಂದಿವೆ ಎಂದು ಹೇಳಿದರು. ಆನೆಗಳ ಅತಿಯಾದ ಜನಸಂಖ್ಯೆಯು ಸಂಪನ್ಮೂಲಗಳ ಕೊರತೆಗೆ ಕಾರಣವಾಗುತ್ತದೆ, ಮಾನವ-ವನ್ಯಜೀವಿ ಸಂಘರ್ಷವನ್ನು ತೀವ್ರಗೊಳಿಸುತ್ತದೆ ಎಂದು ಅವರು ಗಮನಿಸಿದರು.

ಆನೆಗಳನ್ನು ಎಣಿಸುವುದು ಮತ್ತು ಸಮುದಾಯವನ್ನು ಸಂಘಟಿಸುವುದು ಸೇರಿದಂತೆ ನಮೀಬಿಯಾವನ್ನು ಹೋಲುವ ಕಾರ್ಯತಂತ್ರಗಳನ್ನು ಸರ್ಕಾರ ಪರಿಗಣಿಸುತ್ತಿದೆ ಎಂದು ನ್ಯೋನಿ ಹೇಳಿದರು

# ಬಾಂಗ್ಲಾದೇಶದ ಹಂಗಾಮಿ ಸರಕಾರದಿಂದ ಸೈನ್ಯಕ್ಕೆ ಹೆಚ್ಚಿನ ಅಧಿಕಾರ

**ಢಾಕಾ, ಸೆ.19:** ಮಹಮ್ಮದ್ ಯುನೂಸ್ ಇವರ ನೇತೃತ್ವದ ಬಾಂಗ್ಲಾದೇಶದಲ್ಲಿನ ಮಧ್ಯಂತರ ಸರಕಾರ ದೇಶದಲ್ಲಿನ ಅರಾಜಕತೆ ತಡೆಯುವಲ್ಲಿ ವಿಫಲವಾಗಿದೆ. ಮಧ್ಯಂತರ ಸರಕಾರವು ದೇಶಾದ್ಯಂತ ಇರುವ ಸೈನ್ಯಕ್ಕೆ ವಿಶೇಷ ದಂಡಾಧಿಕಾರದ ಅಧಿಕಾರ ನೀಡಿದೆ. ಬಾಂಗ್ಲಾದೇಶದಲ್ಲಿನ ಸಾರ್ವಜನಿಕ ಆಡಳಿತ ಸಚಿವಾಲಯವು ಈ ಸಂದರ್ಭದಲ್ಲಿನ ಒಂದು ಸುತ್ತೋಲೆ ಪ್ರಸಾರ ಮಾಡಿದೆ.



ಅದರ ಪ್ರಕಾರ ಸೈನ್ಯಾಧಿಕಾರಿ ಮುಂದಿನ 60 ದಿನ ಬಾಂಗ್ಲಾದೇಶದಲ್ಲಿನ ಜಿಲ್ಲಾದಂಡಾಧಿಕಾರಿಯ ಅಡಿಯಲ್ಲಿ ಕಾರ್ಯಕಾರಿ ದಂಡಾಧಿಕಾರಿ ಎಂದು ಕಾರ್ಯನಿರ್ವಹಿಸಬಹುದು. ಈ ಆದೇಶ ಸಂಪೂರ್ಣ ಬಾಂಗ್ಲಾದೇಶಕ್ಕಾಗಿ ಜಾರಿ ಆಗುವುದು.

ದಂಡಾಧಿಕಾರಿ ಅಧಿಕಾರ ದೊರೆತ ನಂತರ ಸೈನ್ಯಾಧಿಕಾರಿಗಳು ಜನರನ್ನು ಬಂಧಿಸುವುದು ಮತ್ತು ವಶಕ್ಕೆ ಪಡೆಯುವ ಅಧಿಕಾರ ಇರುವುದು. ಅಧಿಕಾರಿಗಳು ಸ್ವರಕ್ಷಣೆಗಾಗಿ ಅಥವಾ ಅಗತ್ಯವಿದ್ದರೆ ಗುಂಡಿನ ದಾಳಿ ಕೂಡ ನಡೆಸಬಹುದು. ಈ ನಿರ್ಣಯದ ಹಿಂದಿನ ಕಾರಣ ಸ್ಪಷ್ಟಪಡಿಸುತ್ತಾ, ಸರಕಾರದಲ್ಲಿನ ಕಾನೂನು ಸಲಹೆಗಾರ ಆಸಿಫ್ ನಜರುಲ್ ಇವರು, ನಾವು ಅನೇಕ ಸ್ಥಳಗಳಲ್ಲಿ ವಿಧ್ವಂಸಕಕೃತ್ಯ ಮತ್ತು ಪರಿಸ್ಥಿತಿ ಹದಗೆಟ್ಟಿರುವುದನ್ನು ನೋಡುತ್ತಿದ್ದೇವೆ. ಪರಿಸ್ಥಿತಿಯನ್ನು ಗಮನಿಸಿ ಸೈನ್ಯಾಧಿಕಾರಿಗಳಿಗೆ ದಂಡಾಧಿಕಾರಿ ಎಂದು ಅಧಿಕಾರ ನೀಡುತ್ತಿದ್ದೇವೆ. ಸೈನ್ಯಾಧಿಕಾರಿ ಅಧಿಕಾರದ ದುರುಪಯೋಗ ಮಾಡುವುದಿಲ್ಲ, ಎಂಬ ವಿಶ್ವಾಸ ಇದೆ ಎಂದು ಹೇಳಿದರು. ಒಮ್ಮೆ ಪರಿಸ್ಥಿತಿ ಸುಧಾರಿಸಿದರೆ ಸೈನ್ಯಾಧಿಕಾರಿಗಳು ದಂಡಾಧಿಕಾರಿಗಳಿಗೆ ಅಧಿಕಾರದ ಆವಶ್ಯಕತೆ ಅನಿಸುವುದಿಲ್ಲ. ಶೇಖ ಹಸೀನಾ ಇವರು ಆಗಸ್ಟ್ 5 ರಂದು ದೇಶದಿಂದ ಪಲಾಯನ ಮಾಡಿದ ನಂತರ ಬಾಂಗ್ಲಾದೇಶದಲ್ಲಿ ಅರಾಜಕತೆಯ ವಾತಾವರಣ ಇದೆ ಪೊಲೀಸರ ಮೇಲೆ ಕೂಡ ಹೆಚ್ಚಿನ ಪ್ರಮಾಣದಲ್ಲಿ ದಾಳಿಗಳು ನಡೆದಿವೆ. ಪೊಲೀಸ ಠಾಣೆ ಮತ್ತು ಪೊಲೀಸರ ವಾಹನಗಳು ಸುಡಲಾಗಿದೆ. ಜೀವ ರಕ್ಷಣೆಗಾಗಿ ಪೋಲಿಸರು ಅಡಿಗಿ ಕುಳಿತುಕೊಳ್ಳಬೇಕಾಯಿತು. ಬಾಂಗ್ಲಾದೇಶದ ಪೋಲಿಸ ಮೂಲಗಳಿಂದ ತಿಳಿದಿರುವ ಮಾಹಿತಿಯ ಪ್ರಕಾರ, 664 ರಲ್ಲಿ 450 ಪೊಲೀಸ ಠಾಣೆಗಳ ಮೇಲೆ ದಾಳಿಗಳು ನಡೆದಿವೆ.

# 370ನೇ ವಿಧಿ ಮರುಜಾರಿ-ಕೈ, ಎನ್‌ಸಿ ನಿಲುವಿಗೆ ಪಾಕ್ ಬೆಂಬಲ

**ಇಸ್ಲಾಮಾಬಾದ್, ಸೆ.19:** ಜಮ್ಮು-ಕಾಶ್ಮೀರ ವಿಧಾನಸಭೆ ಚುನಾವಣೆ ನಡೆಯುತ್ತಿರುವ ಸಂದರ್ಭದಲ್ಲಿ ನೆರೆಯ ಪಾಕಿಸ್ತಾನ ಮತ್ತೊಮ್ಮೆ ಭಾರತದ ಆಡಳಿತದ ವಿಚಾರದಲ್ಲಿ ಮೂಗುತೂರಿಸಿದೆ.

ಜಮ್ಮು-ಕಾಶ್ಮೀರದ ಕಲಂ 370 ಅನ್ನು ಪುನರ್ ಜಾರಿಗೊಳಿಸುವ ಬಗ್ಗೆ ಪಾಕ್ ಸರ್ಕಾರ ಮತ್ತು ಕಾಂಗ್ರೆಸ್-ನ್ಯಾಷನಲ್ ಕಾನ್ಫರೆನ್ಸ್ ಮೈತ್ರಿ ಒಂದೇ ನಿಲುವು ಹೊಂದಿರುವುದಾಗಿ ಪಾಕಿಸ್ತಾನದ ರಕ್ಷಣಾ ಸಚಿವ ಖ್ವಾಜಾ ಅಸೀಫ್ ಸಂದರ್ಶನವೊಂದರಲ್ಲಿ ತಿಳಿಸಿರುವುದಾಗಿ ವರದಿಯಾಗಿದೆ.

ಜಮ್ಮು-ಕಾಶ್ಮೀರ ವಿಧಾನಸಭಾ ಚುನಾವಣೆಯಲ್ಲಿ ಮೊದಲ ಹಂತದ 24 ಕ್ಷೇತ್ರಗಳಲ್ಲಿ ಮತದಾನ ನಡೆದ ನಂತರ ಖ್ವಾಜಾ ಅಸೀಫ್ ಈ ಹೇಳಿಕೆ ಹೊರಬಿದ್ದಿರುವುದಾಗಿ ವರದಿ ತಿಳಿಸಿದೆ.

ಜಿಯೋ ನ್ಯೂಸ್ ಚಾನೆಲ್‌ಗೆ ನೀಡಿದ ಸಂದರ್ಶನದಲ್ಲಿ ಖ್ವಾಜಾ, ಕಣಿವೆ ಕ್ಷೇತ್ರದಲ್ಲಿ ಕಾಂಗ್ರೆಸ್ ಮತ್ತು ನ್ಯಾಷನಲ್ ಕಾನ್ಫರೆನ್ಸ್ ಬಲಿಷ್ಠವಾಗಿದ್ದು, ಜಮ್ಮು-ಕಾಶ್ಮೀರದ ಅಧಿಕಾರದ ಗದ್ದುಗೆ ಹಿಡಿಯುವಂತೆ ಮಾಡಲು ಜನರಿಗೆ ಉತ್ತಮ ಅವಕಾಶ ಇದೆ ಎಂದು ತಿಳಿಸಿದ್ದಾರೆ.

ಜಮ್ಮು-ಕಾಶ್ಮೀರದ 370ನೇ ವಿಧಿ ಮತ್ತು 35ಎ ಅನ್ನು ಪುನರ್ ಜಾರಿಗೊಳಿಸುವ ವಿಚಾರದಲ್ಲಿ ಪಾಕಿಸ್ತಾನ ಹಾಗೂ ನ್ಯಾಷನಲ್ ಕಾನ್ಫರೆನ್ಸ್, ಕಾಂಗ್ರೆಸ್ ಒಂದೇ ನಿಲುವು ಹೊಂದಿರುವುದಾಗಿ ಸಚಿವ ಖ್ವಾಜಾ ಬೆಂಬಲ ವ್ಯಕ್ತಪಡಿಸಿರುವುದಾಗಿ ವರದಿ ತಿಳಿಸಿದೆ.

ಸೆ.18ರಂದು ಜಮ್ಮು-ಕಾಶ್ಮೀರದಲ್ಲಿ ನಡೆದ ಮೊದಲ ಹಂತದ ವಿಧಾನಸಭಾ ಚುನಾವಣೆಯಲ್ಲಿ ಶೇ.59ರಷ್ಟು ಮತದಾನವಾಗಿತ್ತು. ಕಿಸ್ತ್ವಾರ್ ನಲ್ಲಿ ಶೇ.77ರಷ್ಟು, ಪುಲ್ವಾಮಾದಲ್ಲಿ ಕಡಿಮೆ (ಶೇ.46) ಮತದಾನವಾಗಿರುವುದಾಗಿ ವರದಿ ವಿವರಿಸಿದೆ. ಸೆಪ್ಟೆಂಬರ್ 25ರಂದು ಜಮ್ಮು-ಕಾಶ್ಮೀರದಲ್ಲಿ 2ನೇ ಹಂತದ ಚುನಾವಣೆ ಹಾಗೂ ಅಕ್ಟೋಬರ್ 1ರಂದು ಕೊನೆಯ ಹಂತದ ಚುನಾವಣೆ ನಡೆಯಲಿದೆ. ಅಕ್ಟೋಬರ್ 8ರಂದು ಫಲಿತಾಂಶ ಪ್ರಕಟವಾಗಲಿದೆ.

# ಯುರೋಪಿನಲ್ಲಿ 13,000 ಕೋಟಿ ಕಾನೂನು ಸಮರ ಗೆದ್ದ ಗೂಗಲ್

**ಲಂಡನ್, ಸೆ.19:** ಐದು ವರ್ಷಗಳ ಹಿಂದೆ ತನ್ನ ಆನ್ಲೈನ್ ಜಾಹೀರಾತು ವ್ಯವಹಾರಗಳಿಗೆ ಸಂಬಂಧಿಸಿದಂತೆ ವಿಧಿಸಲಾಗಿದ್ದ 13,778 ಕೋಟಿ (1.49 ಯುರೋ)ರೂ.ಗಳಷ್ಟು ಯುರೋಪಿಯನ್ ಯೂನಿಯನ್ ಆಯಂಟಿಟ್ರಸ್ಟ್ ದಂಡದ ವಿರುದ್ಧದ ಪ್ರಕರಣದಲ್ಲಿ ಗೂಗಲ್ ಕಾನೂನು ಸಮರದಲ್ಲಿ ಗೆಲುವು ಪಡೆದಿದೆ.




ಪಿಯನ್ ಯೂನಿಯನ್ನ ಕೋರ್ಟ್ ಹೇಳಿದೆ. ಗೂಗಲ್ ತನ್ನ ಜಾಹೀರಾತು ಒಪ್ಪಂದಗಳಲ್ಲಿ ಪ್ರತ್ಯೇಕ ಷರತ್ತುಗಳನ್ನು ವಿಧಿಸಿತ್ತು, ಇದರಿಂದ ಜಾಹೀರಾತುದಾರು ಹೆಚ್ಚು ವೆಚ್ಚ ಭರಿಸುವ ಹಾಗೂ ಕಡಿಮೆ ಆಯ್ಕೆಗಳ ಸಮಸ್ಯೆ ಎದುರಿಸುತ್ತಿದ್ದಾರೆ ಎಂಬ ಆರೋಪವನ್ನು ಗೂಗಲ್ ಎದುರಿಸುತ್ತಿತ್ತು.27 ರಾಷ್ಟ್ರಗಳ ಉನ್ನತ ಆ್ಯಂಟಿಟ್ರಸ್ಟ್ ಜಾರಿದಾರನಾದ ಯುರೋಪಿಯನ್ ಕಮಿಷನ್ 2019ರಲ್ಲಿ ವಿಧಿಸಿದ್ದ ಈ ದಂಡವನ್ನು ತೆಗೆದುಹಾಕುವುದಾಗಿ ತಿಳಿಸಿದೆ.

# ಜೂನಿಯರ್ ಹಾಕಿ: ಪಂಜಾಬ್‌ಗೆ ಪ್ರಶಸ್ತಿ




ಜಲಂಧರ್, ಸೆ.19: ಪೆನಾಲ್ಟಿ ಶೂಟೌಟ್‌ನಲ್ಲಿ ಉತ್ತರ ಪ್ರದೇಶವನ್ನು ಮಣಿಸಿದ ಪಂಜಾಬ್ ತಂಡವು ಗುರುವಾರ ಹಾಕಿ ಇಂಡಿಯಾ ಜೂನಿಯರ್ ಬಾಲಕರ ರಾಷ್ಟ್ರೀಯ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ಗೆದ್ದುಕೊಂಡಿತು. ಇಲ್ಲಿ ನಡೆದ ಫೈನಲ್ ಪಂದ್ಯವು ನಿಗದಿತ ಅವಧಿಯಲ್ಲಿ ತಲಾ ಮೂರು ಗೋಲುಗಳೊಂದಿಗೆ ಸಮಬಲ ಕಂಡಿತು.

ಪಂಜಾಬ್ ಪರ ಸುಖ್ವಿಂದರ್ ಸಿಂಗ್ (5ನೇ ನಿಮಿಷ), ಜರ್ಮನ್ ಸಿಂಗ್ (33ನೇ), ಮತ್ತು ಜೋಬನ್‌ಪ್ರೀತ್ ಸಿಂಗ್ (39ನೇ) ಗೋಲು ಗಳಿಸಿದರೆ, ಉತ್ತರ ಪ್ರದೇಶದ ಪರ ಅಜಿತ್ ಯಾದವ್ (31ನೇ), ಸೂರಜ್ ಪಾಲ್ (48ನೇ) ), ಮತ್ತು ಆಕಾಶ್ ಪಾಲ್ (54ನೇ) ಚೆಂಡನ್ನು ಗುರಿ ಸೇರಿಸಿದರು. ನಂತರ ನಡೆದ ಪೆನಾಲ್ಟಿ ಶೂಟೌಟ್‌ನಲ್ಲಿ 4-3ರಿಂದ ಪಂಜಾಬ್ ಮೇಲುಗೈ ಸಾಧಿಸಿತು.

ಮೂರನೇ ಸ್ಥಾನಕ್ಕಾಗಿ ನಡೆದ ಪಂದ್ಯದಲ್ಲಿ ಹರಿಯಾಣ ತಂಡವು 5-0ಯಿಂದ ಕರ್ನಾಟಕ ತಂಡವನ್ನು ಸುಲಭವಾಗಿ ಮಣಿಸಿತು. ಅಮಿತ್ ಖಾಸಾ (30ನೇ), ನವರಾಜ್ ಸಿಂಗ್ (50ನೇ), ನಿತಿನ್ (54ನೇ), ಮನೀಶ್ ಕುಮಾರ್ (55ನೇ) ಮತ್ತು ಸಾಹಿಲ್ ರುಹಾಲ್ (59ನೇ) ಗೋಲು ಗಳಿಸಿದರು. ಕರ್ನಾಟಕ ನಾಲ್ಕನೇ ಸ್ಥಾನ ಪಡೆಯಿತು.

# ಚೀನಾ ಓಪನ್ ಬ್ಯಾಡ್ಮಿಂಟನ್ ಟೂರ್ನಿ ಕ್ವಾರ್ಟರ್ ಫೈನಲ್‌ಗೆ ಮಾಳವಿಕಾ

**ಚಾಂಗ್ಝೌ, ಸೆ.19:** ಭಾರತದ ಯುವ ಆಟಗಾರ್ತಿ ಮಾಳವಿಕಾ ಬನ್ಸೋಡ್ ಅವರು ಚೀನಾ ಓಪನ್ ಬ್ಯಾಡ್ಮಿಂಟನ್ ಟೂರ್ನಿಯ ಮಹಿಳೆಯರ ಸಿಂಗಲ್ಸ್‌ನಲ್ಲಿ ತಮಗಿಂತ ಉನ್ನತ ಕ್ರಮಾಂಕದ ಕ್ರಿಸ್ಟಿ ಗಿಲ್ಮೊರ್ ಅವರನ್ನು ಮೂರು ಗೇಮ್‌ಗಳ ಹೋರಾಟದಲ್ಲಿ ಮಣಿಸಿ, ಕ್ವಾರ್ಟರ್ ಫೈನಲ್ ತಲುಪಿದರು.




ಗುರುವಾರ ನಡೆದ 16ರ ಘಟ್ಟದ ಪಂದ್ಯದಲ್ಲಿ ವಿಶ್ವದ 43ನೇ ಕ್ರಮಾಂಕದ ಮಾಳವಿಕಾ ಅವರು 21-17, 19-21, 21-16ರಿಂದ 25ನೇ ರ್ಯಾಂಕಿಂಗ್ನ ಸ್ಕಾಟ್ಲೆಂಡ್‌ನ ಗಿಲ್ಮೊರ್ ಅವರನ್ನು ಹಿಮ್ಮೆಟ್ಟಿಸಿದರು.

'ಸೂಪರ್ 1000 ಟೂರ್ನಿಯಲ್ಲಿ ಇದೇ ಮೊದಲ ಬಾರಿ ಕ್ವಾರ್ಟರ್ ಫೈನಲ್ ತಲುಪಿದ್ದೇನೆ. ಬಹುದಿನದ ಕನಸು ಇಂದು ನನಸಾಗಿದೆ. ವೃತ್ತಿಜೀವನದಲ್ಲಿ ಇದು ನನ್ನ ದೊಡ್ಡ ಸಾಧನೆಯಾಗಿದೆ' ಎಂದು ಪಂದ್ಯ ಗೆದ್ದ ಬಳಿಕ 22 ವರ್ಷ ವಯಸ್ಸಿನ ಮಾಳವಿಕಾ ಹೇಳಿದರು.

ನಾಗ್ಪುರದ ಮಾಳವಿಕಾ ಆರಂಭಿಕ ಸುತ್ತಿನಲ್ಲಿ ಪ್ಯಾರಿಸ್ ಒಲಿಂಪಿಕ್ಸ್ ಕಂಚಿನ ಪದಕ ವಿಜೇತೆ, ಏಳನೇ ಕ್ರಮಾಂಕದ ಇಂಡೊನೇಷ್ಯಾದ ಗ್ರೆಗೋರಿಯಾ ಮರಿಸ್ಕಾ ತುಂಜಂಗ್ ಅವರನ್ನು ನೇರ ಗೇಮ್‌ಗಳಲ್ಲಿ ಮಣಿಸಿದ್ದರು.

ಟೂರ್ನಿಯಲ್ಲಿ ಉಳಿದಿರುವ ಏಕೈಕ ಭಾರತದ ಆಟಗಾರ್ತಿಯಾಗಿರುವ ಅವರು ಕ್ವಾರ್ಟರ್ ಫೈನಲ್‌ನಲ್ಲಿ ಎರಡು ಬಾರಿಯ ವಿಶ್ವ ಚಾಂಪಿಯನ್, ನಾಲ್ಕನೇ ಶ್ರೇಯಾಂಕದ ಅಕಾನೆ ಯಮಗುಚಿ ಅವರನ್ನು ಎದುರಿಸಲಿದ್ದಾರೆ. ಈ ಹಿಂದಿನ ಎರಡು ಮುಖಾಮುಖಿಯಲ್ಲೂ ಮಾಳವಿಕಾ ಅವರನ್ನು ಜಪಾನಿನ ಆಟಗಾರ್ತಿ ಸೋಲಿಸಿದ್ದಾರೆ. ಉತ್ತಮ ಲಯದಲ್ಲಿರುವ ಭಾರತದ ತಾರೆ ಈ ಬಾರಿ ಪ್ರಬಲ ಸ್ಪರ್ಧೆಯೊಡ್ಡುವ ಛಲದಲ್ಲಿದ್ದಾರೆ.

# ಸ್ನೂಕರ್ ಟೂರ್ನಿ ಮನುದೇವ್‌ಗೆ ಪ್ರಶಸ್ತಿ



**ಬೆಂಗಳೂರು, ಸೆ.19:** ಐ.ಎಚ್.ಮನುದೇವ್ ಅವರು ಕರ್ನಾಟಕ ರಾಜ್ಯ ಬಿಲಿಯರ್ಡ್ಸ್ ಸಂಸ್ಥೆಯ ಆಶ್ರಯದಲ್ಲಿ ನಡೆದ ರಾಜ್ಯ ರ್ಯಾಂಕಿಂಗ್ ಪುರುಷರ 6 ರೆಡ್ ಸ್ನೂಕರ್ ಟೂರ್ನಿಯಲ್ಲಿ ಪ್ರಶಸ್ತಿ ಮುಡಿಗೇರಿಸಿಕೊಂಡರು.

ಗುರುವಾರ ನಡೆದ ಫೈನಲ್‌ನಲ್ಲಿ ಮನುದೇವ್ ಅವರು 6 - 3ರಿಂದ (33-12, 33-27, 36-02, 02-38, 59-03, 42-12, 25-37, 07-45, 32-22) ಬಿ.ಸಿ. ಕಾರ್ತಿಕ್ ಅವರನ್ನು ಸೋಲಿಸಿದರು.

ಮೂರನೇ ಸ್ಥಾನಕ್ಕಾಗಿ ನಡೆದ ಪೈಪೋಟಿಯಲ್ಲಿ ಸೀನ್ ಡೇವಿಸ್ 3-2ರಿಂದ (47-02, 00-32, 34-37, 46-00, 35-32) ಹರೀಶ್ ಕುಮಾರ್ ಅವರನ್ನು ಸೋಲಿಸಿದರು. ಇದಕ್ಕೂ ಮೊದಲು ಸೆಮಿಫೈನಲ್‌ನಲ್ಲಿ ಮನುದೇವ್ 5-3ರಿಂದ ಡೇವಿಸ್ ಅವರನ್ನು; ಕಾರ್ತಿಕ್ 5-4ರಿಂದ ಹರೀಶ್ ಅವರನ್ನು ಸೋಲಿಸಿದ್ದರು.

# ಚೆಸ್ ಒಲಿಂಪಿಯಾಡ್: ಚೀನಾ ವಿರುದ್ಧ ಭಾರತಕ್ಕೆ ಜಯ

**ಬುಡಾಪೆಸ್ಟ್, ಸೆ.19:** ಆರು ಗಂಟೆಗಳ ಸುದೀರ್ಘ ಪಂದ್ಯದಲ್ಲಿ ಡಿ.ಗುಕೇಶ್ ಅವರು ವೀ ಯಿ ಅವರನ್ನು ಸೋಲಿಸಿ ಭಾರತಕ್ಕೆ 45ನೇ ಚೆಸ್ ಒಲಿಂಪಿಯಾಡ್‌ನ ಏಳನೇ ಸುತ್ತಿನಲ್ಲಿ ಚೀನಾ ವಿರುದ್ಧ 2.5-1.5 ಗೆಲುವು ಪಡೆಯುವಲ್ಲಿ ನಿರ್ಣಾಯಕ ಪಾತ್ರ ವಹಿಸಿದರು. ಮಹಿಳೆಯರ ವಿಭಾಗದಲ್ಲಿ ಅಗ್ರ ಶ್ರೇಯಾಂಕದ ಭಾರತ ಬುಧವಾರ 3-1 ರಿಂದ ಜಾರ್ಜಿಯಾವನ್ನು ಸೋಲಿಸಿತು.

ಓಪನ್ ಮತ್ತು ಮಹಿಳೆಯರ ವಿಭಾಗದಲ್ಲಿ ಭಾರತ ಅಗ್ರಸ್ಥಾನ ಕಾಪಾಡಿಕೊಂಡಿದೆ. ಇನ್ನು ನಾಲ್ಕು ಸುತ್ತಿನ ಪಂದ್ಯಗಳು ಉಳಿದಿವೆ.

ವೈಶಾಲಿ ರಮೇಶಬಾಬು ಮತ್ತು ವಂತಿಕಾ ಅಗರವಾಲ್ ಕ್ರಮವಾಗಿ ಲೆಲಾ ಜವಾಖಿಶ್ವಿಲಿ ಮತ್ತು ಬೇಲಾ ಖೊಟೆನಾಶ್ವಿಲಿ ಅವರನ್ನು ಸೋಲಿಸಿದರು. ದ್ರೋಣವಲ್ಲಿ ಹಾರಿಕಾ ಮತ್ತು ದಿವ್ಯಾ ದೇಶಮುಖ್ ತಮ್ಮ ಪಂದ್ಯಗಳನ್ನು ಡ್ರಾ ಮಾಡಿಕೊಂಡರು. ಭಾರತ ಆಡಿದ ಏಳೂ ಸುತ್ತುಗಳಲ್ಲಿ ಜಯಗಳಿಸಿ ಗರಿಷ್ಠ 14 ಪಾಯಿಂಟ್ಸ್ ಶೇಖರಿಸಿದೆ.




ವಿಶ್ವ ಚಾಂಪಿಯನ್ಗೆ ಚಾಲೆಂಜರ್ ಆಗಿರುವ ಡಿ.ಗುಕೇಶ್, ಏಳನೇ ಸುತ್ತಿನಲ್ಲಿ ಭಾರತ ತಂಡದ ಗೆಲುವಿನ ರೂವಾರಿ ಎನಿಸಿದರು. ಪಂದ್ಯ 'ಡ್ರಾ' ಆಗಬಹುದು ಎನ್ನುವಾಗ ಅಗ್ರ ಬೋರ್ಡ್‌ನಲ್ಲಿ ಚೀನಾದ ವೀ ಯಿ ಕೊನೆಗಳಿಗೆಯಲ್ಲಿ ಮಾಡಿದ ಒಂದು ತಪ್ಪಿನ ಲಾಭವನ್ನು ಅವರು ಪಡೆದರು. 80ನೇ ನಡೆಯಲ್ಲಿ ವೀ ಪಂದ್ಯ ಬಿಟ್ಟುಕೊಟ್ಟರು.

ಓಪನ್ ವಿಭಾಗದಲ್ಲಿ ಗುಕೇಶ್, ಡಿಂಗ್ ಲಿರೆನ್ ಅವರನ್ನು ಎದುರಿಸಬೇಕಿತ್ತು. ಆದರೆ ಚೀನಾ ತಂಡದ 'ಚಿಂತಕರ ಚಾವಡಿ' ಅವರಿಗೆ ವಿಶ್ರಾಂತಿ ನೀಡಿದ್ದು ಹಲವರ ಹುಬ್ಬೇರಿಸಿತು. ಸಿಂಗಪುರದಲ್ಲಿ ಇವರಿಬ್ಬರು ಈ ವರ್ಷ ವಿಶ್ವ ಚಾಂಪಿಯನ್ ಪಟ್ಟಕ್ಕೆ ಎದುರಾಳಿಗಳಾಗಿದ್ದಾರೆ.

ಪ್ರಜ್ಞಾನಂದ ಬಹುಬೇಗನೇ ಯಾಂಗ್ವಿ ಯು ಜೊತೆ ಡ್ರಾ ಮಾಡಿಕೊಂಡರು. ನಾಲ್ಕನೇ ಬೋರ್ಡ್‌ನಲ್ಲಿ ಪಿ.ಹರಿಕೃಷ್ಣ, ವಾಂಗ್ ಯು ವಿರುದ್ಧ ಗೆಲುವಿಗೆ ಸಾಹಸಪಟ್ಟರೂ, ಕೊನೆಗೆ ಪಂದ್ಯ ಸಮಬಲಗೊಂಡಿತು. ಅರ್ಜುನ್ ಇರಿಗೇಶಿ ಆಕ್ರಮಣಕಾರಿ ಆಟವಾಡಿದರೂ, ಎದುರಾಳಿ ಬು ಷಿಯಾಂಗ್ವಿ ಧೃತಿಗೆಡಲಿಲ್ಲ. ಅವರು ನಡೆಗಳ ಪುನರಾವರ್ತನೆ (ಪರ್ಪೆಚುವಲ್ ಚೆಕ್) ಮೂಲಕ ಪಂದ್ಯ 'ಡ್ರಾ' ಹಾದಿ ಹಿಡಿಯುವಂತೆ ಮಾಡಿದರು. ವಿದಿತ್ ಗುಜರಾತಿ ಈ ಪಂದ್ಯಕ್ಕೆ ವಿಶ್ರಾಂತಿ ಪಡೆದರು.

ಇರಾನ್ 13 ಪಾಯಿಂಟ್ಸ್ ಗಳಿಸಿ, ಭಾರತದ ಬೆನ್ನ ಹಿಂದೆಯೇ ಇದೆ. ನಾಲ್ಕು ತಂಡಗಳು- ಸರ್ಬಿಯಾ, ಹಂಗರಿ, ಅರ್ಮೇನಿಯಾ ಮತ್ತು ಹಾಲಿ ಚಾಂಪಿಯನ್ ಉಜ್ಬೇಕಿಸ್ತಾನ ತಲಾ 12 ಪಾಯಿಂಟ್ಸ್ ಗಳಿಸಿದ್ದು ಮೂರನೇ ಸ್ಥಾನ ಹಂಚಿಕೊಂಡಿವೆ.

ಭಾರತ ಎಂಟನೇ ಸುತ್ತಿನಲ್ಲಿ ಇರಾನ್ ತಂಡವನ್ನು ಎದುರಿಸಲಿದೆ. ಮಹಿಳೆಯರ ವಿಭಾಗದಲ್ಲಿ ಭಾರತದ ಎದುರಾಳಿ, ಪೋಲೆಂಡ್.